ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೬

# ಪಟ್ಟಿ – ೨೯

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಗುರುವಾರ, ದಿನಾಂಕ : ೨೬ನೇ ನವೆಂಬರ್, ೨೦೧೫.

---

## ಸಮೂಹ – IV

೧. ಮುಖ್ಯಮಂತ್ರಿಗಳು.

೨. ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.

೩. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು.

೪. ಗೃಹ ಸಚಿವರು.

೫. ನಗರಾಭಿವೃದ್ಧಿ ಸಚಿವರು.

೬. ಅಬಕಾರಿ ಮತ್ತು ಮುಜರಾಯಿ ಸಚಿವರು.

---

## ಬಿ.ಡಿ.ಎ ಪ್ರಾಧಿಕಾರದ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೮೫೪ (೩೩೨೯) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನಿರ್ಮಿಸಿರುವ ಬಡಾವಣೆಗಳಲ್ಲಿ ಖಾಲಿ ಇರುವ ವಸತಿ ನಿವೇಶಗಳ ಸಂಖ್ಯೆ ಎಷ್ಟು;

(ಆ) ಈ ನಿವೇಶನಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಸತಿ ಮತ್ತು ವಾಣಿಜ್ಯ ಕಟ್ಟಡಗಳೆಷ್ಟು;

(ಇ) ಅನಧಿಕೃತ ಕಟ್ಟಡಗಳ ತೆರವಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಈ ಪೈಕಿ ಇದುವರೆಗೂ ತೆರವುಗೊಳಿಸಿರುವ ನಿವೇಶನಗಳ ಸಂಖ್ಯೆ ಎಷ್ಟು? (ಬಡಾವಣೆವಾರು ವಿವರಗಳನ್ನು ಸಲ್ಲಿಸುವುದು)

## ಸಾರ್ವಜನಿಕ ಉದ್ಯಾನವನಗಳಿಗೆ ಕಾಯ್ದಿರಿಸಿದ ಸ್ಥಳಗಳನ್ನು ಒತ್ತುವರಿ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೮೫೫ (೩೨೭೯) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ನಗರ ಸಿ.ಕ್ಯೂ.ಎ.ಎಲ್ ಬಡಾವಣೆ (ವಾರ್ಡ್‌ನಂ–೮)ರಲ್ಲಿ ಸಾರ್ವಜನಿಕ ಮತ್ತು ಉದ್ಯಾನವನಗಳಿಗಾಗಿ ಮೀಸಲಾಗಿರುವ ಆಸ್ತಿಗಳನ್ನು ಅಕ್ರಮವಾಗಿ ಖಾಸಗಿ ವ್ಯಕ್ತಿಗಳು ಕಬಳಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಕ್ರಮವಾಗಿ ಭೂ ಕಬಳಿಕೆ ಮಾಡಿರುವ ಸಂಸ್ಥೆ/ವ್ಯಕ್ತಿಗಳ ಸಂಪೂರ್ಣ ವಿವರ ಒದಗಿಸುವುದು;

(ಇ) ಅಕ್ರಮ ಒತ್ತುವರಿ ತೆರವುಗೊಳಿಸಲು ಸರ್ಕಾರದ ಕ್ರಮಗಳೇನು; ತೆರವುಗೊಳಿಸುವುದು ಯಾವಾಗ; ಒತ್ತುವರಿದಾರರ ವಿರುದ್ಧ ಕ್ರಿಮಿನಲ್ ಕೇಸು ದಾಖಲಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ಅಕ್ರಮ ಒತ್ತುವರಿದಾರರಿಗೆ ಭೂ ಕಬಳಿಕೆಗೆ ಸಹಾಯ ಮಾಡಿರುವ ಬಿ.ಬಿ.ಎಂ.ಪಿ ಅಧಿಕಾರಿಗಳು ಯಾರು ಯಾರು; ಅವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ಯಾವಾಗ?

## ಮಹಿಳಾ ಪೊಲೀಸ್ ಸಿಬ್ಬಂದಿಗಳಿಗೆ ಒದಗಿಸುವ ಮೂಲಭೂತ ಸೌಕರ್ಯಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೮೫೬ (೩೪೮೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳಾ ಪೊಲೀಸರಿಗೆ ಸರ್ಕಾರ ಒದಗಿಸುತ್ತಿರುವ ಸುರಕ್ಷತಾ ಕ್ರಮಗಳೇನು;

(ಆ) ರಾಜ್ಯದಲ್ಲಿ ಅದರಲ್ಲೂ ಬೆಂಗಳೂರು ಮಹಾನಗರದಲ್ಲಿ ಕಾರ್ಯ ನಿರತವಾಗಿರುವ ಮಹಿಳಾ ಪೊಲೀಸ್‌ಗಳ ಸಂಖ್ಯೆ ಎಷ್ಟು;

(ಇ) ಸಾಮಾನ್ಯ ಪೊಲೀಸ್ ಠಾಣೆಗಳಲ್ಲಿ ಮಹಿಳಾ ಸಿಬ್ಬಂದಿಗಾಗಿ ಒದಗಿಸಿರುವ ಮೂಲಭೂತ ಸೌಕರ್ಯಗಳೇನು?

## ಸಹಕಾರ ನಗರ ಸಿ.ಕ್ಯೂ.ಎ.ಎಲ್ ಬಡಾವಣೆಯಲ್ಲಿ ಸಾರ್ವಜನಿಕ ಉದ್ಯಾನವನಗಳಿಗೆ ಮೀಸಲಾಗಿರುವ ಸ್ಥಳ ಅಭಿವೃದ್ಧಿಗೊಳಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೮೫೭ (೩೨೮೦) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ನಗರ ಸಿ.ಕ್ಯೂ.ಎ.ಎಲ್ ಬಡಾವಣೆ (ವಾರ್ಡ್‌ನಂ–೮)ರಲ್ಲಿ ಬಿ.ಡಿ.ಎ ಅನುಮೋದಿತ ನಕ್ಷೆಯ ಅನ್ವಯ ಸಾರ್ವಜನಿಕ ಉದ್ದೇಶಗಳಿಗೆ ಮತ್ತು ಉದ್ಯಾನವನಗಳಿಗೆ ಮೀಸಲಿಟ್ಟಿರುವ ಜಾಗಗಳ ವಿವರ ಮತ್ತು ವಿಸ್ತೀರ್ಣವೆಷ್ಟು; (ಪೂರ್ಣ ವಿವರ ಒದಗಿಸುವುದು)

(ಆ) ಮೀಸಲಿಟ್ಟಿರುವ ಉದ್ದೇಶಗಳಿಗಾಗಿ ಬಳಕೆ ಮಾಡಿಕೊಂಡು ಅಭಿವೃದ್ಧಿಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಅಭಿವೃದ್ಧಿಪಡಿಸಲು ಇರುವ ತೊಂದರೆಯೇನು ; ಅಭಿವೃದ್ಧಿಪಡಿಸುವುದು ಯಾವಾಗ;

(ಇ) ಸದರಿ ಸ್ಥಳಗಳನ್ನು ಸಾರ್ವಜನಿಕ ಉದ್ದೇಶಗಳಿಗೆ ಬಳಕೆ ಮಾಡದಿರಲು ಕಾರಣವೇನು; ಆ ಸ್ಥಳಗಳಲ್ಲಿ ವಿಷ ಜಂತುಗಳು ಹಾಗೂ ಸೊಳ್ಳೆಗಳು ಹೆಚ್ಚಾಗಿದ್ದು, ಅವುಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೊಂದರೆ ನಿವಾರಿಸಲು ಕ್ರಮ ಕೈಗೊಳ್ಳಲಾಗುವುದು ಯಾವಾಗ?

## ಕೋಮು ದ್ವೇಷದಲ್ಲಿ ಕೊಲೆಯಾದ ಪ್ರಕರಣದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೫೮ (೩೨೮೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಕೋಮು ದ್ವೇಷಕ್ಕೆ ಬಲಿಯಾದ ಕೊಲೆ ಪ್ರಕರಣದ ಎಲ್ಲಾ ಆರೋಪಿಗಳನ್ನು ಬಂಧಿಸಲಾಗಿದೆಯೇ;

(ಆ) ಬಂದಿಸಿದ್ದಲ್ಲಿ, ಆರೋಪಿಗಳ ಸಂಪೂರ್ಣ ವಿವರಗಳನ್ನು ಮತ್ತು ಅವರ ಮೇಲೆ ಯಾವ–ಯಾವ ಪ್ರಕರಣಗಳನ್ನು ದಾಖಲಿಸಲಾಗಿದೆ ಎನ್ನುವ ವಿವರ ನೀಡುವುದು ;

(ಇ) ಕೊಲೆಯಿಂದಾಗಿ ಸಂಕಷ್ಟಕ್ಕೆ ಒಳಗಾಗಿರುವ ಕುಟುಂಬಕ್ಕೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; (ವಿವರ ನೀಡುವುದು)

(ಈ) ಪ್ರಕರಣದ ಪ್ರತ್ಯಕ್ಷ ಸಾಕ್ಷಿಯೂ ನಿಗೂಢವಾಗಿ ಮೃತಪಟ್ಟಿದ್ದು, ಪ್ರಕರಣದಲ್ಲಿ ಪ್ರಭಾವಿಗಳು ಭಾಗಿಯಾಗಿರುವ ಬಗ್ಗೆ ಸಾರ್ವಜನಿಕರಲ್ಲಿ ಸಂಶಯ ಇರುವುದರಿಂದ ಪ್ರಕರಣವನ್ನು CBI ಗೆ ವಹಿಸುವ ಇಲ್ಲವೆ ಉನ್ನತ ಮಟ್ಟದ ತನಿಖೆಗೆ ವಹಿಸುವ ಬಗ್ಗೆ ಸರ್ಕಾರದ ನಿಲುವೇನು?

## ನ್ಯಾಯಾಲಯಗಳಲ್ಲಿ ಪ್ರಕರಣಗಳ ವಿವರ ಶೀಘ್ರ ವಿಲೇವಾರಿಗೆ ಕ್ರಮ ಕೈಗೊಳ್ಳುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೫೯ (೩೨೮೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಹಂತದ ನ್ಯಾಯಾಲಯಗಳಲ್ಲಿ ವಿಚಾರಣೆ ಹಂತದಲ್ಲಿರುವ ಹಾಗೂ ಬಾಕಿ ಇರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ಶೀಘ್ರ ವಿಲೇವಾರಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಮುಂದಿನ ಯೋಜನೆಗಳೇನು;

(ಇ) ರಾಜ್ಯದ ನ್ಯಾಯಾಲಯಗಳಲ್ಲಿನ ನ್ಯಾಯಾಧೀಶರು ಸೇರಿದಂತೆ, ಎಲ್ಲಾ ವರ್ಗಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಪೊಲೀಸ್ ಸಿಬ್ಬಂದಿಗಳಿಗೆ ಅಗತ್ಯ ವಸತಿ ಗೃಹ ಸೌಲಭ್ಯ ಕಲ್ಪಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೬೦ (೩೨೮೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಪೊಲೀಸ್ ವಸತಿ ಗೃಹಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಹಗಲು ರಾತ್ರಿ ಎನ್ನದೆ ದುಡಿಯುವ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹ ಸೌಲಭ್ಯ ಕಲ್ಪಿಸಲಾಗಿದೆಯೇ; ವಸತಿ ಗೃಹದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಈ) ರಾಜ್ಯದಲ್ಲಿರುವ ಅನೇಕ ಪೊಲೀಸ್ ವಸತಿಗೃಹ/ವಸತಿ ಸಂಕೀರ್ಣಗಳಲ್ಲಿ ಮೂಲ ಸೌಕರ್ಯವಿಲ್ಲದೇ ಅವ್ಯವಸ್ಥೆಯ ಆಗರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಉನ್ನತ ಶಿಕ್ಷಣದಲ್ಲಿ ಸರ್ಕಾರಿ ಕೋಟಾದ ಸೀಟು ಹೆಚ್ಚಳ ಮಾಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೬೧ (೩೨೮೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರಿ ಕೋಟಾದಡಿ ಲಭ್ಯವಿರುವ ಇಂಜಿನಿಯರಿಂಗ್ ಮತ್ತು ವೈದ್ಯಕೀಯ (MBBS) ಸೀಟುಗಳ ಸಂಖ್ಯೆ ಎಷ್ಟು;

(ಆ) ಸರ್ಕಾರಿ ಮತ್ತು ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ “ಸರ್ಕಾರಿ” ಕೋಟಾದಡಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ವಿವಿಧ ಕೋರ್ಸ್‌ಗಳಿಗೆ ನಿಗದಿಪಡಿಸಿರುವ ಶುಲ್ಕವೆಷ್ಟು;

(ಇ) ರಾಜ್ಯದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸರ್ಕಾರಿ ಕೋಟಾದ ಸೀಟು ಹೆಚ್ಚಳಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ಒದಗಿಸುವುದು)

## ರಾಜ್ಯದ ಶಾಲಾ ಕಾಲೇಜುಗಳಲ್ಲಿ ಎನ್.ಸಿ.ಸಿ. ಅಧಿಕಾರಿಯಾಗಿ ಸಲ್ಲಿಸುತ್ತಿರುವ ಶಿಕ್ಷಕ ಹಾಗೂ ಉಪನ್ಯಾಸಕರುಗಳಿಗೆ ನೀಡುವ ಗೌರವಧನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೮೬೨ (ಇ೨೮೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಶಾಲಾ ಕಾಲೇಜುಗಳಲ್ಲಿ ಎನ್.ಸಿ.ಸಿ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕ ಹಾಗೂ ಉಪನ್ಯಾಸಕರುಗಳಿಗೆ ನೀಡುವ ಗೌರವಧನವೆಷ್ಟು; (ವಿವರ ನೀಡುವುದು)

(ಆ) ಈ ಗೌರವಧನವನ್ನು ಯಾವಾಗ ಪರಿಷ್ಕರಿಸಲಾಗಿದೆ;

(ಇ) ಈ ಮೊತ್ತ ಅತ್ಯಂತ ಕಡಿಮೆ ಆಗಿರುವುದರಿಂದ ಈ ಮೊತ್ತವನ್ನು ಪರಿಷ್ಕರಿಸುವ ಕುರಿತು ಸರಕಾರದ ನಿರ್ಣಯವೇನು?

## ರಾಜ್ಯದ ಶಾಲಾ ಕಾಲೇಜುಗಳಲ್ಲಿ ಎನ್.ಸಿ.ಸಿ ಘಟಕ ಸ್ಥಾಪನೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಪಾಲುಗಾರಿಕೆಯ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೮೬೩ (ಇ೨೮೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಶಾಲಾ ಕಾಲೇಜುಗಳಲ್ಲಿ ಎನ್.ಸಿ.ಸಿ ಘಟಕ ಸ್ಥಾಪನೆಗೆ ರಾಜ್ಯ ಮತ್ತು ಕೇಂದ್ರ ಸರಕಾರದ ಪಾಲುದಾರಿಕೆಯು ಮಾನದಂಡಗಳೇನು; (ವಿವರ ನೀಡುವುದು)

(ಆ) ರಾಜ್ಯದ ಶಾಲಾ ಕಾಲೇಜುಗಳಲ್ಲಿ ಹೊಸ ಎನ್.ಸಿ.ಸಿ ಘಟಕಗಳ ಅವಶ್ಯಕತೆ ಮತ್ತು ಬೇಡಿಕೆ ಇದ್ದರೂ ಅನುದಾನದ ಕೊರತೆಯಿಂದ ಘಟಕಗಳನ್ನು ಸ್ಥಾಪಿಸಲಾಗದೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಇ) ಶಿಸ್ತು, ಸಮಯ, ಪ್ರಜ್ಞೆ ದೇಶಭಕ್ತಿ, ನಾಯಕತ್ವದ ಗುಣ ಹಾಗೂ ರಾಷ್ಟ್ರೀಯ ಭಾವೈಕ್ಯತೆಯ ಮೌಲ್ಯಗಳನ್ನು ವಿದ್ಯಾರ್ಥಿಗಳಿಗೆ ಎನ್.ಸಿ.ಸಿ ತರಬೇತಿ ನೀಡಲು ರಾಜ್ಯ ಸರಕಾರ ಏನು ಕ್ರಮ ಕೈಗೊಂಡಿದೆ ?

## ರಾಜ್ಯದ ಪದವಿ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರಿಗೆ ನೀಡುವ ಗೌರವ ಧನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೮೬೪ (ಇ೨೮೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪದವಿ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ನೀಡುವ ಗೌರವ ಧನವೆಷ್ಟು;

(ಆ) ಅತಿಥಿ ಉಪನ್ಯಾಸಕರಿಗೆ ನೀಡುವ ಗೌರವ ಧನದಲ್ಲಿ ತಾರತಾಮ್ಯವೇಕೆ; ತಾರತಮ್ಯವನ್ನು ಸರಿದೂಗಿಸಲು ಏನು ಕ್ರಮ ಕೈಗೊಳ್ಳಲಾಗುವುದು;

(ಇ) ಅತಿಥಿ ಉಪನ್ಯಾಸಕರಿಗೆ ನೀಡುವ ಗೌರವ ಧನವನ್ನು ಮಾಸಿಕವಾಗಿ ನೀಡುವಲ್ಲಿ ಅನಗತ್ಯ ವಿಳಂಬವಾಗುತ್ತಿದ್ದು, ಪ್ರತಿ ತಿಂಗಳು ಗೌರವ ಧನ ನೀಡಲು ಅನುಕೂಲವಾಗುವಂತೆ ಏನು ಕ್ರಮ ಕೈಗೊಳ್ಳಲಾಗಿದೆ?

## ರಾಜ್ಯದಲ್ಲಿ ಅನಧಿಕೃತವಾಗಿ ಕಸಾಯಿ ಖಾನೆಗಳು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೮೬೫ (೩೨೯೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಸಾಯಿ ಖಾನೆಗಳು ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅನಧಿಕೃತ ಕಸಾಯಿ ಖಾನೆಗಳನ್ನು ನಿಗ್ರಹಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಇ) ಕಳೆದ ೩ ವರ್ಷಗಳಲ್ಲಿ ಪತ್ತೆ ಹಚ್ಚಿರುವ ಅನಧಿಕೃತ ಕಸಾಯಿ ಖಾನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಎನ್.ಸಿ.ಸಿ ಕೆಡೆಟ್‌ಗಳಿಗೆ ನೀಡಲಾಗುತ್ತಿರುವ ಉಪಾಹಾರ ಭತ್ಯದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೮೬೬ (೩೨೮೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎನ್.ಸಿ.ಸಿ ಕೆಡೆಟ್‌ಗಳಿಗೆ ನೀಡಲಾಗುತ್ತಿರುವ ಉಪಾಹಾರ ಭತ್ಯೆ (Refreshment Allowance) ಎಷ್ಟು. ಮತ್ತು ಭತ್ಯೆಯನ್ನು ಯಾವಾಗ ನಿರ್ಣಯಿಸಲಾಗಿತ್ತು;

(ಆ) ಬದಲಾಗಿರುವ ಪರಿಸ್ಥಿತಿಯಲ್ಲಿ ಈ ಮೊತ್ತವು ಅತ್ಯಂತ ಕಡಿಮೆ ಆಗಿರುವುದರಿಂದ ಹಾಗೂ ಉತ್ತಮ ಗುಣಮಟ್ಟದ ಉಪಹಾರ ನೀಡಲಾಗದೆ ಇರುವುದರಿಂದ ಈ ಉಪಹಾರ ಭತ್ಯೆ ಪರಿಷ್ಕರಿಸುವ ಯೋಜನೆ ಸರಕಾರದ ಮುಂದಿದೆಯೇ?

## ರಾಜ್ಯದ ಐ.ಎ.ಎಸ್/ಕೆ.ಎ.ಎಸ್ ಅಧಿಕಾರಿಗಳಿಗೆ ಸರ್ಕಾರದ ವಾಹನಗಳನ್ನು ಉಪಯೋಗಕ್ಕೆ ನೀಡುತ್ತಿರುವ ಕುರಿತು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೬೭ (೩೩೧೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಐ.ಎ.ಎಸ್, ಕೆ.ಎ.ಎಸ್ ಶ್ರೇಣಿಯ ಅಧಿಕಾರಿಗಳಿಗೆ ಸರ್ಕಾರದ ವಾಹನಗಳನ್ನು ಅವರ ಉಪಯೋಗಕ್ಕೆ ನೀಡಿರುವುದು ನಿಜವೇ;

(ಆ) ನಿಜವಾಗಿದ್ದರೆ, ಆ ಅಧಿಕಾರಿಗಳಿಗೆ ಕಾರುಗಳನ್ನು ಕೊಂಡುಕೊಳ್ಳಲು ಯಾವ ಯಾವ ಶ್ರೇಣಿಗೆ ಎಷ್ಟು ಬೆಲೆಯ ಕಾರುಗಳನ್ನು ನೀಡಲಾಗುತ್ತದೆ; ಕಾರು ಖರೀದಿಸುವಾಗ ಯಾವ ಯಾವ ದರ್ಜೆಯ ಅಧಿಕಾರಿಗಳಿಗೆ ಸರ್ಕಾರ ಅನುಸರಿಸುತ್ತಿರುವ ನೀತಿ–ನಿಯಮಗಳೇನು; (ಸಂಬಂಧಿಸಿದ ಆದೇಶಗಳ ಜೊತೆಗೆ ಪೂರ್ಣ ವಿವರ ಒದಗಿಸುವುದು)

(ಇ) ಆ ಅಧಿಕಾರಿಗಳು ಉಪಯೋಗಿಸುವ ಕಾರುಗಳಿಗೆ ಸರ್ಕಾರದ ಬೊಕ್ಕಸದಿಂದ ಖರ್ಚಾಗುವ ಇಂಧನದ ವೆಚ್ಚ ಎಷ್ಟು? (ಶ್ರೇಣಿ ಪ್ರಕಾರ ವಿವರ ಒದಗಿಸುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಮೋರಿ ಸ್ವಚ್ಛತೆ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೬೮ (ಶ್ರೀ೨) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪ್ರತಿ ವರ್ಷ ಸಣ್ಣ,ಮಧ್ಯಮ ಮತ್ತು ರಾಜಕಾಲುವೆಗಳನ್ನು ಸ್ವಚ್ಛಗೊಳಿಸಲಾಗುತ್ತಿದೆಯೇ;

(ಆ) ಸ್ವಚ್ಛಗೊಳಿಸಲಾಗುತ್ತಿದ್ದರೆ, ಈ ಕಾಮಗಾರಿಗೆ ಪ್ರತಿ ವರ್ಷ ಬಿ.ಬಿ.ಎಂ.ಪಿ ವೆಚ್ಚ ಮಾಡುತ್ತಿರುವ ಹಣದ ಮೊತ್ತವೆಷ್ಟು; (ಕಳೆದ ಐದು ವರ್ಷಗಳ ಮಾಹಿತಿ ನೀಡುವುದು)

(ಇ) ಈ ಉದ್ದೇಶಕ್ಕಾಗಿ ಕೇಂದ್ರ ಮತ್ತು ರಾಜ್ಯದಿಂದ ಬಂದ ಹಣವೆಷ್ಟು ಮತ್ತು ಬಿ.ಬಿ.ಎಂ.ಪಿ. ಖರ್ಚು ಮಾಡಿದ ಹಣವೆಷ್ಟು?

## ಬಿ.ಬಿ.ಎಂ.ಪಿ. ಯಲ್ಲಿ ನಡೆದಿರುವ ಕಾಮಗಾರಿಗಳಿಗೆ ಪಾವತಿಸಬೇಕಾದ ಹಣದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೬೬ (೩೨೯೩) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಬಿ.ಎಂ.ಪಿ. ಯಲ್ಲಿ ಪೂರ್ಣಗೊಂಡ ಕಾಮಗಾರಿಗಳಿಗೆ ಡಿಸೆಂಬರ್ ೨೦೧೫ ರವರೆಗೆ ಪಾವತಿಸಬೇಕಾದ ಹಣ ಬಾಕಿ ಇರುವುದು ನಿಜವೇ;

(ಆ) ಹಾಗಿದ್ದರೆ, ಅದರ ಒಟ್ಟು ಮೊತ್ತ ಎಷ್ಟು; (ಕಾಮಗಾರಿಗಳ ಪೂರ್ಣ ಪಟ್ಟಿ ಮತ್ತು ಪಾವತಿಸಬೇಕಾದ ಹಣದ ವಿವರದ ಪಟ್ಟಿ ಒದಗಿಸುವುದು)

(ಇ) ಹಣ ಪಾವತಿಸಲು ಬಾಕಿ ಇರುವ ಕಾಮಗಾರಿಗಳು ಸ್ಥಾಯಿ ಸಮಿತಿ, ಬಿ.ಬಿ.ಎಂ.ಪಿ ಸಭೆ ಮತ್ತು ಮಂಜೂರು ಮಾಡುವ ಅಧಿಕಾರವುಳ್ಳವರಿಂದ ಮಂಜೂರಾಗಿದೆಯೇ;

(ಈ) ಹಾಗಿದ್ದರೆ, ಅಂತಹ ಕಾಮಗಾರಿಯನ್ನು ಜಾರಿಗೊಳಿಸುವಾಗ ಹಣದ ವ್ಯವಸ್ಥೆಗೆ ತಕ್ಕಂತೆ ನಿರ್ವಹಣೆ ಮಾಡಲಾಗಿದೆಯೇ ಅಥವಾ ಗುತ್ತಿಗೆದಾರ ಮತ್ತು ಅಧಿಕಾರಿಗಳು ಜೊತೆಯಾಗಿ ನಡೆಸಿರುವ ಅಕ್ರಮ ಕಾಮಗಾರಿಗಳೇ ಎಂಬುದರ ಬಗ್ಗೆ ಸ್ಪಷ್ಟತೆ ನೀಡುವುದು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸೊಳ್ಳೆಗಳ ಕಾಟ ವಿಪರೀತವಾಗಿರುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೭೦ (೩೨೯೧) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಸೊಳ್ಳೆಗಳ ಕಾಟ ವಿಪರೀತವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸೊಳ್ಳೆಗಳ ನಿಯಂತ್ರಣಕ್ಕೆ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಹಾಗಿದ್ದರೆ, ಸೊಳ್ಳೆ ನಿಯಂತ್ರಣಕ್ಕೆ ವರ್ಷಕ್ಕೆ ಬಿ.ಬಿ.ಎಂ.ಪಿ ಎಷ್ಟು ಹಣ ಖರ್ಚು ಮಾಡುತ್ತದೆ? (ಕಳೆದ ೩ ವರ್ಷಗಳ ವಿವರ ನೀಡುವುದು)

## ಬೆಳಗಾವಿ ಮತ್ತು ಹುಬ್ಬಳ್ಳಿ–ಧಾರವಾಡ ನಗರಗಳಲ್ಲಿ ಸಂಚಾರ ಸುಧಾರಣೆಗಾಗಿ ಕೈಗೊಂಡ ಕ್ರಮದ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೮೭೧ (೩೨೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ನಗರ ಸಂಚಾರ ಸುಧಾರಣೆಗಾಗಿ **ಬೆಲ್ ಟ್ರ್ಯಾಕ್** ಮತ್ತು ಹುಬ್ಬಳ್ಳಿ–ಧಾರವಾಡ ನಗರ ಸಂಚಾರ ಸುಧಾರಣೆಗಾಗಿ **ಹೆಚ್–ಟ್ರ್ಯಾಕ್** ಯೋಜನೆ ಪ್ರಾರಂಭಿಸಿರುವುದು ನಿಜವೇ;

(ಆ) ಈ ಯೋಜನೆಗೆ ಪ್ರತಿ ನಗರಕ್ಕೆ ಎಷ್ಟು ಅನುದಾನದ ಅವಶ್ಯವಿರುತ್ತದೆ;

(ಇ) ಸದರಿ ನಗರಗಳಲ್ಲಿ ಈ ಯೋಜನೆಯು ಯಾವ ಹಂತದಲ್ಲಿರುತ್ತದೆ?

## ಗ್ರಾಮೀಣ ಪ್ರದೇಶಗಳಲ್ಲಿ ಮದ್ಯ ಮಾರಾಟವನ್ನು ತಡೆಗಟ್ಟುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೮೭೨ (೩೨೯೯) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪರವಾನಗಿ ಪಡೆದು ನಡೆಸಲಾಗುತ್ತಿರುವ ಮದ್ಯದಂಗಡಿಗಳ ಸಂಖ್ಯೆ ಎಷ್ಟು;

(ಆ) ಸದರಿ ಪರವಾನಗಿ ಪಡೆದಿರುವ ಬಾರ್‌ಗಳನ್ನು ಹೊರತುಪಡಿಸಿ ಮುಖ್ಯವಾಗಿ ಗ್ರಾಮೀಣ ಭಾಗದಲ್ಲಿ ಬೇಕಾಬಿಟ್ಟಿಯಾಗಿ ಮದ್ಯಪಾನ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇದನ್ನು ತಡೆಗಟ್ಟುವಲ್ಲಿ ಇಲಾಖೆಯು ಅಧಿಕಾರಿಗಳು ವಿಫಲವಾಗುತ್ತಿದ್ದು, ಈ ಕುರಿತು ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ?

## ರಾಜ್ಯದ ನ್ಯಾಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೮೭೩ (೩೨೯೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ನ್ಯಾಯಾಲಯಗಳಲ್ಲಿ ಖಾಲಿಯಿರುವ ಮುನಸಿಪ್ ಹುದ್ದೆಗಳು ಎಷ್ಟು;

(ಆ) ಈ ಹುದ್ದೆಗಳು ಖಾಲಿಯಿರುವುದರಿಂದ ನ್ಯಾಯದಾನ ಮಾಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೂಡಲೆ ಕ್ರಮ ಕೈಗೊಳ್ಳಲಾಗುವುದೇ?

## ಬೆಳಗಾವಿ ನಗರವನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೮೭೪ (ಇ೨೯೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರ್ಥಿಕ ಮುಗ್ಗಟ್ಟಿನಿಂದ ಅಭಿವೃದ್ಧಿ ಕಾಣದ ಬೆಳಗಾವಿ ನಗರವನ್ನು ಅಭಿವೃದ್ಧಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು;

(ಆ) ಈ ನಗರವನ್ನು ಅಭಿವೃದ್ಧಿಪಡಿಸಲು ಸರ್ಕಾರ ಹೆಚ್ಚಿನ ಆರ್ಥಿಕ ನೆರವನ್ನು ನೀಡಲು ಯಾವ ಕ್ರಮ ಕೈಗೊಂಡಿರುವುದು;

(ಇ) ಕೇಂದ್ರ ಸರ್ಕಾರದ ನೆರವನ್ನು ಪಡೆಯಲು ಕೈಗೊಂಡಿರುವ ಕ್ರಮವೇನು;

(ಈ) ಕೇಂದ್ರ ಸರ್ಕಾರವು ಜಾರಿಗೆ ತರಲು ಉದ್ದೇಶಿಸಿರುವ ಸ್ಮಾರ್ಟ್ ಸಿಟಿ ಯೋಜನೆಯ ಅಡಿಯಲ್ಲಿ ಬೆಳಗಾವಿಯನ್ನು ಸೇರಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮವೇನು?

## ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೮೭೫ (ಇ೨೯೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯಗಳಲ್ಲಿ ಒಟ್ಟು ಎಷ್ಟು ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ;

(ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ;

(ಇ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅರ್ಜಿಗಳನ್ನು ಆಹ್ವಾನಿಸಿ ಒಂದು ವರ್ಷವಾದರು ಸಹ ನೇಮಕಾತಿ ವಿಳಂಬ ಮಾಡುತ್ತಿರುವುದಕ್ಕೆ ಕಾರಣವೇನು;

(ಈ) ಉಪನ್ಯಾಸಕರ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದರಿಂದ ಈ ಹುದ್ದೆಗಳನ್ನು ಭರ್ತಿ ಮಾಡುವುದು ಅತ್ಯವಶ್ಯವಾಗಿದ್ದು, ಸದರಿ ನೇಮಕಾತಿ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ?

## ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಕರೆಯಲಾದ ಟೆಂಡರ್ ಮತ್ತು ವೆಚ್ಚ ವಿವರ

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೭೬ (೩೩೦೩) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಏಪ್ರಿಲ್ ೨೦೧೩ ರಿಂದ ಇದುವರೆಗೂ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು (BWSSB) ವಿವಿಧ ಯೋಜನೆಗಳಿಗೆ ಟೆಂಡರ್ ಅನುಮೋದಿಸಲಾಗಿದೆಯೇ; ಅದರ ಸಂಪೂರ್ಣ ವಿವರ ನೀಡುವುದು;

(ಆ) ಅನುಮೋದಿಸಿದ್ದಲ್ಲಿ, ಎಷ್ಟು ಮೊತ್ತದ ಟೆಂಡರ್ ಅನುಮೋದಿಸಲಾಗಿದೆ ಹಾಗೂ ಟೆಂಡರ್ ಕರೆದ ಮತ್ತು ಪಾಲ್ಗೊಂಡ ಸಂಸ್ಥೆಗಳ ಸಂಪೂರ್ಣ ವಿವರ ನೀಡುವುದು;

(ಇ) ಕಳೆದ ೨೦೧೩ ಏಪ್ರಿಲ್‌ನಿಂದ ಇಲ್ಲಿಯವರೆಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಉನ್ನತಾಧಿಕಾರಿ ಸಮಿತಿ ಎಷ್ಟು ಯೋಜನೆಗಳಿಗೆ ಅನುಮೋದನೆ ನೀಡಿದೆ; ಅವುಗಳ ಸಂಪೂರ್ಣ ವಿವರ ನೀಡುವುದು;

(ಈ) ೨೦೧೨ ರಿಂದ ಇಂದಿನ ವರೆಗೆ ಬೆಂಗಳೂರು ಒಳಚರಂಡಿ ಕಾಮಗಾರಿಗಳಿಗಾಗಿ ಮಾಡಲಾದ ವೆಚ್ಚದ ವಿವರ ನೀಡುವುದು?

## ಕೆ.ಆರ್.ಐ.ಡಿ.ಎಲ್ ನಿಂದ ನಡೆಯುವ ಕಾಮಗಾರಿಗೆ ಅನುದಾನ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೭೭ (೩೩೦೨) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಬೃಹತ್ ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ಪ್ರದೇಶಗಳ ಅಭಿವೃದ್ಧಿಯ ದೃಷ್ಟಿಯಿಂದ ೨೦೧೨–೧೩ ರಿಂದ ೨೦೧೪–೧೫ನೇ ಸಾಲಿನವರೆಗೆ ಕೆ.ಆರ್.ಐ.ಡಿ.ಎಲ್ ನಿಂದ ನಡೆಯುತ್ತಿರುವ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು; ಬಿಡುಗಡೆ ಮಾಡಲಾದ ಹಣ ಪೂರ್ಣ ಬಳಕೆಯಾಗಿದೆಯೇ; ಬಳಕೆ ಮತ್ತು ಉಳಿಕೆಯ ವಿವರ ನೀಡುವುದು;

(ಆ) ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ಆಡಳಿತಾತ್ಮಕ ಹಾಗೂ ಗುಣಾತ್ಮಕ ಸಿಬ್ಬಂದಿಗಳೆಷ್ಟು; ಇವರು ಈ ಸಂಸ್ಥೆಗಳಿಂದ ಪಡೆದ ಕಾಮಗಾರಿಗಳಿಗೆ ಉಪ ಗುತ್ತಿಗೆ (Sub-Contract) ಮಾಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಉಪ ಗುತ್ತಿಗೆಯ ವಿವರ ನೀಡುವುದು;

(ಇ) ಕೆ.ಆರ್.ಐ.ಡಿ.ಎಲ್ ನ ಕಾರ್ಯವ್ಯಾಪ್ತಿಗೆ ಸರ್ಕಾರ ವಿಧಿಸಿರುವ ಮಾನದಂಡ ಏನು; ಸದರಿ ಸಂಸ್ಥೆಯ ಕಾರ್ಯಕ್ಷಮತೆಯ ಬಗ್ಗೆ ಸರ್ಕಾರದ ನಿಲುವೇನು; ಒಟ್ಟು ಕಾಮಗಾರಿಯ ವ್ಯಾಪ್ತಿ ಮತ್ತು ಬಿಡುಗಡೆ ಮಾಡಲಾದ ಹಣ/ಬಿಡುಗಡೆ ಮಾಡಬೇಕಿರುವ ಹಣ ಹಾಗೂ ಬಳಕೆಯ ವಿವರ ಮತ್ತು ಕಾಮಗಾರಿಯ ಗುಣಮಟ್ಟದ ಕುರಿತು ಮಾಹಿತಿ ನೀಡುವುದು;

(ಈ) ಈ ಸಂಸ್ಥೆಯಲ್ಲಿ ಖರ್ಚು ಮಾಡಿದ ಎಷ್ಟು ಕೋಟಿ ಹಣಕ್ಕೆ ಲೆಕ್ಕಪತ್ರಗಳನ್ನು ನಿರ್ವಹಿಸಿರುವುದಿಲ್ಲ?

## ರಾಜ್ಯದಲ್ಲಿ ಮಾಫಿಯಾಗಳ ಕುರಿತು ಸರ್ಕಾರದ ನಿಲುವು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೭೮ (೩೩೦೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇತ್ತೀಚೆಗೆ ಭೂಮಾಫಿಯಾ ಸೇರಿದಂತೆ ಅಕ್ರಮ ಮರಳು ,ಕೆರೆ ಒತ್ತುವರಿ ಹಾಗೂ ಕೊಲೆ, ದರೋಡೆ, ಸುಲಿಗೆ, ಅತ್ಯಾಚಾರ, ಲೈಂಗಿಕ ದೌರ್ಜನ್ಯ ಮಾಫಿಯಾಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಪ್ರಮಾಣ ಹೆಚ್ಚಾಗಿರುವುದು ಯಾವಾಗಿನಿಂದ, ಇದಕ್ಕೆ ಕಾರಣಗಳೇನು; ಈ ಮಾಫಿಯಾಗಳನ್ನು ಹತೋಟಿಗೆ ತರಲು ಸರ್ಕಾರ ಸಶಕ್ತವಾಗಿಲ್ಲವೆ; ಸದರಿ ಮಾಫಿಯಾಗಳ ನಿಗ್ರಹಕ್ಕೆ ವಿಶೇಷ ತನಿಖಾ ತಂಡ, ಕಾರ್ಯಪಡೆ ರಚಿಸಲು ಸರ್ಕಾರ ಮುಂದಾಗುವುದೇ;

(ಇ) ರಾಜ್ಯದಲ್ಲಿ ಇಂತಹ ಪ್ರಕರಣಗಳು ನಡೆದಿರುವ ಘಟನೆಗಳ ವಿವರಗಳನ್ನು ಜಿಲ್ಲಾವಾರು ನೀಡುವುದು ;

(ಈ) ಅದೇ ರೀತಿ ಸದರಿ ಮಾಫಿಯಾಗಳ ಮೂಲಕ ಇಲಾಖಾ ಅಧಿಕಾರಿಗಳನ್ನು ಹೆದರಿಸಿ–ಬೆದರಿಸಿ ಅಲ್ಲಿಂದ ಬೇರೆಡೆಗೆ ವರ್ಗಾವಣೆ ಮಾಡಿಸುವ ದಂಧೆ ನಡೆಯುತ್ತಿರುವುದು ನಿಜವೇ; ಇದರಿಂದಾಗಿ ಪ್ರಾಮಾಣಿಕ ಅಧಿಕಾರಿಗಳು ದಕ್ಷತೆಯಿಂದ ಕಾರ್ಯನಿರ್ವಹಿಸಲು ಸಾಧ್ಯವಾಗದಿರುವ ವಿಚಾರದ ಬಗ್ಗೆ ಸರ್ಕಾರದ ನಿಲುವೇನು; ಈ ವಿಚಾರದಲ್ಲಿ ಹಾವೇರಿ ಜಿಲ್ಲೆಯ ಪೂರ್ಣ ವಿವರಗಳನ್ನು ತಾಲ್ಲೂಕುವಾರು ಸರ್ಕಾರ ಕೈಗೊಂಡ ಕ್ರಮಗಳ ಕುರಿತು ವಿವರ ನೀಡುವುದು?

## ಬೆಂಗಳೂರು ನಗರದಲ್ಲಿ ಸ್ಥಿರಾಸ್ತಿ ಮಾರ್ಗಸೂಚಿ ದರ ಪರಿಷ್ಕರಿಸುವ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೭ (೩೨೦೧) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಸ್ಥಿರಾಸ್ತಿ ಮಾರ್ಗಸೂಚಿ ದರವನ್ನು ಪರಿಷ್ಕರಿಸುವ ಪ್ರಸ್ತಾಪವು ಸರ್ಕಾರದ ಮುಂದಿದೆಯೇ; ಇದಕ್ಕೆ ಕಾರಣಗಳೇನು;

(ಆ) ಇದೊಂದು ಬೊಕ್ಕಸ ತುಂಬುವ ಕಸರತ್ತು ಎಂಬ ಅಭಿಪ್ರಾಯದ ಕುರಿತು ಸರ್ಕಾರದ ನಿಲುವೇನು;

(ಇ) ಹಾಗಿದ್ದಲ್ಲಿ, ಏಕರೂಪದ ಒಂದೇ ನಿಯಮ ಸಾಮಾನ್ಯವಾಗಿ ಅನ್ವಯವಾಗಬೇಕಾಗಿದ್ದರೂ, ಇದರಲ್ಲೂ ತಾರತಮ್ಯ ನೀತಿ ಅನುಸರಿಸುತ್ತಿರುವ ವಿಚಾರ ಸರಿಯೇ;

(ಈ) ದರ ನಿಗಧಿಯಲ್ಲೂ ದ್ವಂದ್ವ ನಿಲುವು ಇರುವುದು ನಿಜವೇ; ಅಭಿವೃದ್ಧಿಯಾದ ಪ್ರದೇಶಕ್ಕೂ ಅಭಿವೃದ್ಧಿಯಾಗದ ಪ್ರದೇಶಕ್ಕೂ ಒಂದೇ ಮಾರ್ಗಸೂಚಿ ಅನ್ವಯ ಮಾಡುವುದು ಅನ್ಯಾಯವಲ್ಲವೇ;

(ಉ) ಒಳ ರಸ್ತೆ ವಸತಿ ಜಾಗಗಳಲ್ಲೂ ಅವೈಜ್ಞಾನಿಕ ದರ ನೀತಿ ಅನುಸರಿಸುತ್ತಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲ/ತೊಂದರೆ ಉಂಟಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೇ; ಹಾಗಿದ್ದಲ್ಲಿ, ಸರ್ಕಾರದ ಕ್ರಮಗಳೇನು?

## ಬಂಧಿಖಾನೆಗಳಲ್ಲಿನ ಅಕ್ರಮ ಚಟುವಟಿಕೆಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) ಮತ್ತು ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೮೦ (೩೩೦೪+೩೩೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ರಾಜ್ಯದ ಪ್ರಮುಖ ಬಂಧಿಖಾನೆಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ ವರದಿ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು; ಈ ಕೃತ್ಯಗಳು ನಡೆಯಲು ಅವಕಾಶ ನೀಡಿದವರ್ಯಾರು; ಇದು ಅಲ್ಲಿನ ಜೈಲರ್ ಸಿಬ್ಬಂದಿಗಳಿಗೆ ತಿಳಿಯುತ್ತಿಲ್ಲವೇ; ಇದರ ಪತ್ತೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಬೆಂಗಳೂರು ಹಾಗೂ ಬಳ್ಳಾರಿ ಹಾಗೂ ಹಿಂಡಲಗಾ ಜೈಲುಗಳಲ್ಲಿ ಲಂಚಾವತಾರದ ಜೊತೆಗೆ ಸಿಬ್ಬಂದಿಗಳ ಕೈಬಿಸಿ ಮಾಡಿದರೆ ಎಲ್ಲವೂ ಸರಬರಾಜು ಎನ್ನುವಂತಾಗಿರುವುದು ನಿಜವೇ;

(ಈ) ಕೆಲ ಜೈಲುಗಳಲ್ಲಿ ಖೈದಿಗಳಿಗೆ ಅಲ್ಲಿನ ಸಿಬ್ಬಂದಿಗಳೇ ಸಂಪರ್ಕ ಮಾಹಿತಿ ನೀಡುವ, ಬೇಕಾದ ವಸ್ತು ಸರಬರಾಜು ಮಾಡುವ (ಉದಾ:ಮೊಬೈಲ್ ಸಂಪರ್ಕ, ಗಾಂಜ, ಮಾದಕವಸ್ತು ಸರಬರಾಜು ಇನ್ನಿತರೆ) ಹುನ್ನಾರ ನಡೆದಿರುವ ಬಗ್ಗೆ ಸರ್ಕಾರದ ಕ್ರಮಗಳೇನು;

(ಉ) ಜೈಲಿನೊಳಗೆ ಕಾಸಿದ್ದವರು ಬೇಕಾದ್ದು ಮಾಡಿ ಕಾಂಚಾಣವಿಲ್ಲದವರ ಬದುಕು ಹೀನಾಯ ಮಾಡುವ ಕುತಂತ್ರದ ಬಗ್ಗೆ ಸರ್ಕಾರದ ನಿಲುವು ಸ್ಪಷ್ಟಪಡಿಸುವುದು?

## ಬಳ್ಳಾರಿ ಕೇಂದ್ರಿಯ ಕಾರಾಗೃಹದಲ್ಲಿರುವ ಸಿಬ್ಬಂದಿ ಕೊರತೆ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೮೧ (ಖ೫೫೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಸೆಂಟ್ರಲ್ ಜೈಲ್‌ನಲ್ಲಿರುವ ಖೈದಿಗಳ ಸಂಖ್ಯೆ ಎಷ್ಟು; ಅಲ್ಲಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಇಲ್ಲಿ ಖೈದಿಗಳ ಸಂಖ್ಯೆಗೆ ಅನುಗುಣವಾಗಿ ಜೈಲು ಸಿಬ್ಬಂದಿ ಇಲ್ಲದೆ ಇರುವುದರಿಂದ, ಬಂಧಿಖಾನೆಯಲ್ಲಿ ಪದೇ ಪದೇ ಅಹಿತಕರ ಘಟನೆಗಳು ನಡೆಯುತ್ತಿರುವುದು ನಿಜವೇ;

(ಇ) ಕಳೆದ ಮೂರು ವರ್ಷಗಳಲ್ಲಿ ಈ ಕೇಂದ್ರಿಯ ಕಾರಾಗೃಹಕ್ಕೆ ಎಷ್ಟು ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗಿದೆ; ನೇಮಿಸಿಕೊಳ್ಳದಿದ್ದರೆ, ಈ ಕೂಡಲೇ ಖಾಲಿ ಹುದ್ದೆ ಭರ್ತಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

## ರಾಜ್ಯ ಪೊಲೀಸ್ ಅಸಿಸ್ಟೆಂಟ್ ಸಬ್ ಇನ್ಸ್‌ಪೆಕ್ಟರ್‌ಗಳಿಗೆ ವೇತನದಲ್ಲಿ ನಷ್ಟ ಉಂಟಾಗಿರುವ ಬಗ್ಗೆ

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೮೨ (೩೩೧೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಪೊಲೀಸ್ ಇಲಾಖೆಯಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ಹಾಗೂ ಹೆಡ್ ಕಾನ್ಸ್‌ಟೇಬಲ್ ಗಳಿಗೆ ಪ್ರತಿ ವಾರಕ್ಕೆ ರೂ.೨೦೦ ರಂತೆ ನಾಲ್ಕು ವಾರದ ರಜಾ ಭತ್ಯೆಯಾಗಿ ರೂ.೮೦೦/-ಗಳನ್ನು ಮತ್ತು ಒಂದು ವರ್ಷದ ರಜಾ ವೇತನವನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಹೆಡ್ ಕಾನ್ಸ್‌ಟೇಬಲ್‌ನಿಂದ ಮುಂಬಡ್ತಿ ಹೊಂದಿ ಹೆಚ್ಚಿನ ಜವಾಬ್ದಾರಿ ನಿರ್ವಹಿಸುವ ಸಬ್ ಇನ್ಸ್‌ಪೆಕ್ಟರ್‌ಗಳಿಗೆ ವಾರದ ರಜೆ ಭತ್ಯೆ ನೀಡದೆ ಒಂದು ವರ್ಷದ ವೇತನದಲ್ಲಿ ಅರ್ಧವೇತನ ಮಾತ್ರ ನೀಡುತ್ತಿದ್ದು ಇದರಿಂದ ಆರ್ಥಿಕವಾಗಿ ಅಧಿಕಾರಿಗಳಿಗೆ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ತಾರತಮ್ಯವನ್ನು ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಮಾಹಿತಿ ನೀಡುವುದು)

## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಇದರ ವ್ಯಾಪ್ತಿಗೊಳಪಡುವ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೮೩ (೩೪೮೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಇದರ ವ್ಯಾಪ್ತಿಗೊಳಪಡುವ ವಿವಿಧ ಇಲಾಖೆಗಳಲ್ಲಿ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಇಲಾಖೆಗಳಲ್ಲಿ ಎಷ್ಟು ಸಿಬ್ಬಂದಿಗಳ ಕೊರತೆಯಿದೆ, ಮಂಜೂರಾದ ಹುದ್ದೆಗಳೆಷ್ಟು; ಖಾಲಿಯಿರುವ ಹುದ್ದೆಗಳೆಷ್ಟು ; (ಇಲಾಖಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸಿಬ್ಬಂದಿಗಳ ಕೊರತೆಯಿಂದಾಗಿ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ;

(ಉ) ರಾಜ್ಯದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಇದರ ವ್ಯಾಪ್ತಿಗೊಳಪಡುವ ವಿವಿಧ ಇಲಾಖೆಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಗುತ್ತಿಗೆ ಆಧಾರದಲ್ಲಿ ಎಷ್ಟು ಸಿಬ್ಬಂದಿಯನ್ನು ನೇಮಿಸಲಾಗಿದೆ ; ನೇಮಿಸಿದ್ದಲ್ಲಿ, ನೇಮಕ ಮಾಡುವಾಗ ಅನುಸರಿಸುತ್ತಿರುವ ಮಾನದಂಡಗಳೇನು ;

(ಊ) ಈ ನೌಕರರಿಗೆ ಮಾಹೆಯಾನ ನೀಡುತ್ತಿರುವ ವೇತನ ಹಾಗೂ ಇನ್ನಿತರೆ ಭತ್ಯೆಗಳ ಸಂಪೂರ್ಣ ಮಾಹಿತಿ ನೀಡುವುದು ;

(ಋ) ಈ ಗುತ್ತಿಗೆ ನೌಕರರನ್ನು ನೇಮಿಸಿಕೊಳ್ಳಲು ಇರುವ ಮಾನದಂಡಗಳೇನು ? (ವಿವರ ನೀಡುವುದು)

## ಮೇಲುಕೋಟೆ ಚೆಲುವನಾರಾಯಣಸ್ವಾಮಿ ದೇವಸ್ಥಾನದ ಧ್ವಜಸ್ತಂಭದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೮೪ (ಇಇ೨೮) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ಮೇಲುಕೋಟೆ ಚೆಲುವನಾರಾಯಣಸ್ವಾಮಿ ದೇವಸ್ಥಾನದ ಧ್ವಜಸ್ತಂಭ ತುಂಬ ಹಳೆಯದಾಗಿದ್ದು, ಭಕ್ತಾದಿಗಳ ಮೇಲೆ ಬೀಳುವ ಸಂಭವವಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹೊಸದಾಗಿ "ಧ್ವಜಸ್ತಂಭವನ್ನು" ಅಳವಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು ; ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯ ಪೊಲೀಸ್ ಸಿಬ್ಬಂದಿಗಳಿಗೆ ವೇತನದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೮೫ (೩೩೨೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಸಿಬ್ಬಂದಿಗಳಿಗೆ ಹಾಲಿ ನೀಡುತ್ತಿರುವ ವೇತನ ಶ್ರೇಣಿ ಹಾಗೂ ಹೊಸ ರಾಜ್ಯಗಳಾದ ಮಹಾರಾಷ್ಟ್ರ, ಆಂಧ್ರ, ಕೇರಳ, ತಮಿಳುನಾಡು ರಾಜ್ಯದ ಪೊಲೀಸ್ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನದಲ್ಲಿ ವ್ಯತ್ಯಾಸವಿದೆಯೇ ;

(ಆ) ಹಾಗಿದ್ದಲ್ಲಿ, ಹೆಚ್ಚು ನೀಡುತ್ತಿರುವ ಹೊರ ರಾಜ್ಯದಂತೆ ನಮ್ಮ ರಾಜ್ಯದ ಪೊಲೀಸ್ ಸಿಬ್ಬಂದಿಗಳಿಗೆ ವೇತನ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ?

## ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೮೬ (೩೩೨೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ತೆಗೆದುಕೊಳ್ಳುವ ಅಭ್ಯರ್ಥಿಗಳು ಶುಲ್ಕ ಪಾವತಿಸಿದ್ದರೂ ಸಹ ಕೆಲವು ಬಾರಿ ಪರೀಕ್ಷೆಗಳನ್ನು ರದ್ದುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪರೀಕ್ಷೆಗಳು ರದ್ದಾದ ಸಂದರ್ಭಗಳಲ್ಲಿ ಅಭ್ಯರ್ಥಿಗಳು ಪಾವತಿಸಿರುವ ಶುಲ್ಕವನ್ನು ಹಿಂತಿರುಗಿಸಲಾಗುವುದೇ ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ವಿವಿಧ ಇಲಾಖೆಗಳಿಗೆ ನಡೆಸಲಾಗಿರುವ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ತೆಗೆದುಕೊಂಡಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು; ಆಯ್ಕೆಯಾದ ಅಭ್ಯರ್ಥಿಗಳ ಸಂಖ್ಯೆ ಎಷ್ಟು; ಅಭ್ಯರ್ಥಿಗಳಿಂದ ಪಡೆಯಲಾದ ಪರೀಕ್ಷಾ ಶುಲ್ಕವೆಷ್ಟು? (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ಖಾಯಂಗೊಳಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೮೭ (೩೩೧೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಇಂತಹ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಹಾಗೂ ಖಾಯಂ ಉಪನ್ಯಾಸಕರುಗಳ ಸಂಖ್ಯೆ ಎಷ್ಟು;

(ಇ) ಈ ಕಾಲೇಜುಗಳಿಗೆ ಖಾಯಂ ಉಪನ್ಯಾಸಕರುಗಳನ್ನು ಈ ವರೆಗೆ ನೇಮಕ ಮಾಡದಿರಲು ಕಾರಣಗಳೇನು;

(ಈ) ಈ ಕಾಲೇಜುಗಳಲ್ಲಿ ಕಳೆದ ೧೦ ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ಖಾಯಂಗೊಳಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳುವುದೇ?

## ಗ್ರಂಥಪಾಲಕರ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರ ಹುದ್ದೆಗಳನ್ನು ಬೋಧಕರ ಹುದ್ದೆಗಳೆಂದು ಪರಿಗಣಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೮೮ (೩೬೨೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಪಾಲಕರ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಮೇಲ್ಕಾಣಿಸಿದ ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರ ಹುದ್ದೆಗಳನ್ನು ಬೋಧಕೇತರ ಹುದ್ದೆಗಳೆಂದು ಇಲಾಖೆ ಪರಿಗಣಿಸಿರುವುದು ನಿಜವೇ ; ನಿಜವಿದ್ದಲ್ಲಿ ಕಾರಣಗಳೇನು ;

(ಇ) ೧೯೮೬ ರಿಂದಲೇ ಯು.ಜಿ.ಸಿ ಯವರು ಈ ಹುದ್ದೆಗಳನ್ನು ಬೋಧಕ ಹುದ್ದೆಗಳೆಂದು ಪರಿಗಣಿಸಿದ್ದು, ಈಗ ಬದಲಾವಣೆ ಮಾಡಲು ಕಾರಣಗಳೇನು ?

## ರಾಜ್ಯದಲ್ಲಿ ಮೌಢ್ಯಾಚರಣೆ ನಿಷೇಧ ಕಾನೂನನ್ನು ಜಾರಿಗೊಳಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೮೯ (೩೬೨೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೌಢ್ಯಾಚರಣೆ ನಿಷೇಧ ಕಾನೂನನ್ನು ಜಾರಿಗೆ ತರಲು ಸರ್ಕಾರ ಯೋಚಿಸಿದೆಯೇ ; ಯೋಚಿಸಿದ್ದರೆ, ಅದು ಈಗ ಯಾವ ಹಂತದಲ್ಲಿದೆ ;

(ಆ) ಸದರಿ ವಿಷಯದಲ್ಲಿ ಕರಡು ಮಸೂದೆಯನ್ನು ಮಹಾರಾಷ್ಟ್ರ ಸರ್ಕಾರ ಅಂಗೀಕರಿಸಿದಂತೆ ನಮ್ಮ ರಾಜ್ಯದಲ್ಲಿಯೂ ಅದೇ ಮಾದರಿಯ ಕಾನೂನನ್ನು ಜಾರಿಗೆ ತರಲು ತೀರ್ಮಾನ ಮಾಡಲಾಗಿದೆಯೇ ;

(ಇ) ರಾಜ್ಯದಲ್ಲಿ ಮೌಢ್ಯಾಚರಣೆ ನಿಷೇಧ ಕಾನೂನು ಜಾರಿ ತರಲು ಅನೇಕ ಪ್ರತಿಭಟನೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಬಂದಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ ;

(ಈ) ಈ ದಿಶೆಯಲ್ಲಿ ರಾಜ್ಯ ಸರ್ಕಾರದ ಸ್ಪಷ್ಟವಾದ ಅಭಿಪ್ರಾಯವೇನು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ನಿರ್ದೇಶಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೯೦ (ಇ೬೨೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಖಾಲಿ ಇರುವ ದೈಹಿಕ ಶಿಕ್ಷಣ ನಿರ್ದೇಶಕರುಗಳ ಹುದ್ದೆಗಳಿಗೆ ಆತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿಲಾಗಿದೆಯೇ ;

(ಇ) ಹಾಗಿದ್ದಲ್ಲಿ, ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಎಷ್ಟು ಜನ ಅತಿಥಿ ದೈಹಿಕ ಶಿಕ್ಷಣ ಉಪನ್ಯಾಸಕರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ;

(ಈ) ಅತಿಥಿ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸದಿದ್ದಲ್ಲಿ ಕಾರಣಗಳೇನು ;

(ಉ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಇತರೆ ವಿಷಯಗಳ ಉಪನ್ಯಾಸಕರುಗಳ ಹುದ್ದೆಗಳಲ್ಲಿ ಅತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಿಕೊಂಡಂತೆ ದೈಹಿಕ ಶಿಕ್ಷಣ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಿಕೊಂಡು ಪದವಿ ವಿದ್ಯಾರ್ಥಿಗಳಲ್ಲಿ ಕ್ರೀಡಾ ಮನೋಭಾವನೆಯನ್ನು ಹೆಚ್ಚಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ರಾಯಚೂರು ಜಿಲ್ಲೆಯ ಹಳ್ಳಿಗಳಲ್ಲಿ ಕಾನೂನು ಬಾಹಿರವಾಗಿ ಸಾರಾಯಿ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೯೧ (೩೩೧೨) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ಹಳ್ಳಿಗಳಲ್ಲಿ ಕಾನೂನು ಬಾಹಿರವಾಗಿ ಸಾರಾಯಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ರಾಯಚೂರು ಜಿಲ್ಲೆಯ ಗಡಿಭಾಗದಲ್ಲಿ ಸಿ.ಎಚ್. ಫೌಡರ ಮುಖಾಂತರ ಸೇಂಧಿ ಮಾರಾಟ ಮಾಡುತ್ತಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ೨೦೧೫–೧೬ ರಲ್ಲಿ ರಾಯಚೂರು ಜಿಲ್ಲೆಗೆ ಮುಜರಾಯಿ ಇಲಾಖೆಯಿಂದ ಬಿಡುಗಡೆಯಾದ ಅನುದಾನ ಎಷ್ಟು? (ಕ್ಷೇತ್ರವಾರು ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ೨೦೧೫–೧೬ರಲ್ಲಿ ಬಿಡುಗಡೆ ಮಾಡಿರುವ ಅನುದಾನ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೨ (೩೬೦೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ರಲ್ಲಿ ಇಲ್ಲಿಯವರೆಗೂ ಹೈದರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (HKRDB)ಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು;

(ಆ) ೨೦೧೫–೧೬ರಲ್ಲಿ KUWS ಮಂಡಳಿಗೆ ಕುಡಿಯುವ ನೀರಿನ ಯೋಜನೆಗಳಿಗಾಗಿ ನಿಗಧಿಪಡಿಸಿದ ಅನುದಾನ ಎಷ್ಟು;

(ಇ) ರಾಯಚೂರು ಜಿಲ್ಲೆಗೆ ಸೇರಿರುವ ವಿವಿಧ ಇಲಾಖೆಗಳಿಗೆ ಆರ್ಥಿಕ ಇಲಾಖೆಯಿಂದ ಮಂಜೂರಾತಿಗಾಗಿ ಬಾಕಿ ಇರುವಂತಹ ಯೋಜನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ವಿವಿಧ ಇಲಾಖೆಗಳಿಂದ ಆರ್ಥಿಕ ಇಲಾಖೆಗೆ ಬಂದಿರುವ ಪ್ರಸ್ತಾವನೆಗಳನ್ನು ಉತ್ತರಿಸಲು ಹಾಗೂ ತಿರಸ್ಕರಿಸಲು ತೆಗೆದುಕೊಳ್ಳುವ ಕಾಲಮಿತಿ ಎಷ್ಟು?

# ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಗಳಿಗೆ ವಾಹನಗಳ ಕೊರತೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೯೩ (೩೬೦೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಜನಸಂಖ್ಯೆ ಹಾಗೂ ಅಪರಾಧಗಳ ಅನುಗುಣವಾಗಿ ನೂತನವಾಗಿ ಪೊಲೀಸ್ ಠಾಣೆ ಪ್ರಾರಂಭಿಸಲು ಸರಕಾರ ಉದ್ದೇಶಿಸಿದೆಯೇ ;

(ಆ) ಪೊಲೀಸ್ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿನ ಪೊಲೀಸ್ ಇಲಾಖೆಯಲ್ಲಿ ವಾಹನಗಳ ಕೊರತೆ ಇರುವುದು ನಿಜವೇ ; ಹಾಗಿದ್ದಲ್ಲಿ, ವಾಹನಗಳನ್ನು ಒದಗಿಸಲಾಗುವುದು ಯಾವಾಗ ;

(ಈ) ರಾಯಚೂರು ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಸಿಬ್ಬಂದಿಗಳಿಗೆ ಹಾಗೂ ಅಧಿಕಾರಿಗಳಿಗೆ ನೀಡಲು ವಸತಿ ಗೃಹಗಳ (Quarters) ಕೊರತೆ ಇದೆಯೇ ; ಹಾಗಿದ್ದಲ್ಲಿ, ಹೊಸದಾಗಿ ವಸತಿ ಗೃಹಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಉ) ರಾಯಚೂರು ಜಿಲ್ಲಾ ಪೊಲೀಸ್ ಅಧೀಕ್ಷಕರ ಕಛೇರಿ (S.P. Office) ಕವಾಯಿತ ಮೈದಾನದಲ್ಲಿ ಕ್ರೀಡಾಂಗಣ (Stadium) ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ರಾಯಚೂರು ಜಿಲ್ಲೆಯಲ್ಲಿ KUIDFC ವತಿಯಿಂದ ತೆಗೆದುಕೊಂಡ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೯೪ (೩೬೦೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) K.U.W.S ಮತ್ತು D.B ಮಂಡಳಿಯಿಂದ ೨೦೧೫–೧೬ ರಲ್ಲಿ ಕುಡಿಯುವ ನೀರಿಗಾಗಿ ಪ್ರಸ್ತಾವನೆ ಮಾಡಿರುವಂತಹ ಯೋಜನೆಗಳಿಗೆ ಬೇಕಾಗಿರುವ ಹಣ ಎಷ್ಟು ; ಆ ಪೈಕಿ ಬಿಡುಗಡೆ ಮಾಡಿರುವ ಮೊತ್ತ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿ K.U.I.D.F.C ವತಿಯಿಂದ ಕೈಗೊಂಡಿರುವ ಯೋಜನೆಗಳು ಯಾವುವು ; ಸದರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ವಕೀಲರ ಸಂಘದ ಸದಸ್ಯರ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೯೫ (೩೬೦೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ವಕೀಲರ ಸಂಘದ ಸದಸ್ಯರ (Bar Association) ಅನುಕೂಲಕ್ಕಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಕಾನೂನು ಕಾಲೇಜುಗಳಿಗೆ ವೇತನಾನುದಾನ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೨೮೯೬ (೩೩೧೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಡೆಯುತ್ತಿರುವ ಸರ್ಕಾರಿ, ಅನುದಾನಿತ, ಅನುದಾನರಹಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರರೆಷ್ಟು ; (ವರ್ಗವಾರು ವಿವರಗಳನ್ನು ನೀಡುವುದು)

(ಇ) ಯಾವ ಸಾಲಿನವರೆಗೆ ಪ್ರಾರಂಭವಾಗಿರುವ ಎಷ್ಟು ಕಾಲೇಜುಗಳಿಗೆ ವೇತನಾನುದಾನ ನೀಡಲಾಗುತ್ತದೆ ; ಇದಕ್ಕೆ ನಿಗದಿಪಡಿಸಿರುವ ಮೊತ್ತವೆಷ್ಟು ;

(ಈ) ಇದುವರೆಗೆ ಎಷ್ಟು ಕಾಲೇಜುಗಳಿಗೆ ವೇತನಾನುದಾನ ನೀಡಲಾಗಿದೆ ;

(ಉ) ಇನ್ನುಳಿದ ಕಾಲೇಜುಗಳಿಗೆ ಯಾವ ಕಾಲಮಿತಿಯಲ್ಲಿ ವೇತನಾನುದಾನ ನೀಡಲಾಗುತ್ತದೆ ?

## ಅತಿಥಿ ಉಪನ್ಯಾಸಕರ ಸಮಸ್ಯೆಗಳ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೨೮೯೭ (೩೩೧೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಸಾಲಿನಲ್ಲಿ ಎಷ್ಟು ಮಂದಿ ಅತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿತ್ತು ; (ವರ್ಗಾವಾರು ವಿವರಗಳೊಡನೆ)

(ಆ) ಸದರಿಯವರುಗಳನ್ನು ಈ ಹಿಂದೆ ಯಾವ ಮಾನದಂಡಗಳನ್ವಯ ನೇಮಕಾತಿ ಮಾಡಿಕೊಳ್ಳಲಾಗಿದೆ ;

(ಇ) ಸದರಿಯವರುಗಳಿಗೆ ನೀಡುತ್ತಿರುವ ಗೌರವ ಧನದ ಮೊತ್ತವೆಷ್ಟು ; ಸದರಿ ಅತಿಥಿ ಉಪನ್ಯಾಸಕರಿಗೆ ಪ್ರತಿ ತಿಂಗಳು ವೇತನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಪ್ರತಿ ತಿಂಗಳು ವೇತನ ನೀಡಲು ಯಾವ ಕ್ರಮ ಕೈಗೊಳ್ಳಲಾಗುವುದು ;

(ಉ) ಸರ್ಕಾರ ಮಾಡುತ್ತಿರುವ ಉಪನ್ಯಾಸಕರ ನೇಮಕಾತಿಯಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಆದ್ಯತೆ ನೀಡಲಾಗುತ್ತಿದೆಯೇ ?

## ವಿಧಾನಸೌಧದಲ್ಲಿ ಇಲಿಗಳನ್ನು ಹಿಡಿಯಲು ಖರ್ಚು ಮಾಡಿರುವ ಹಣದ ಬಗ್ಗೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೯೮ (೩೩೨೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಶಕ್ತಿ ಸೌಧ, ಆಡಳಿತ ಸೌಧ ಎಂದು ಕರೆಸಿಕೊಳ್ಳುವ ಬೆಂಗಳೂರಿನ ವಿಧಾನಸೌಧದಲ್ಲಿ ಇಲಿ, ಹೆಗ್ಗಣಗಳ ಕಾಟ ಹೆಚ್ಚಾಗಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ೦೫ ವರ್ಷಗಳಲ್ಲಿ ವಿಧಾನ ಸೌಧದಲ್ಲಿ ಇಲಿ, ಹೆಗ್ಗಣಗಳನ್ನು ಹಿಡಿಯಲು ಖರ್ಚು ಮಾಡಿರುವ ಹಣವೆಷ್ಟು ; (ವಿವರ ನೀಡುವುದು)

(ಇ) ಹಾಗಾದರೆ, ಈ ಇಲಿ, ಹೆಗ್ಗಣಗಳಿಂದ ಕಳೆದ ಐದು ವರ್ಷಗಳಲ್ಲಿ ಹಾನಿಗೊಳಗಾಗಿರುವ ಕಡತ/ಇನ್ನಿತರೆ ಬೆಲೆಬಾಳುವ ವಸ್ತುಗಳಾವುವು ಹಾಗೂ ಹಾನಿಗೊಳಗಾದ ವಸ್ತುಗಳ ಅಂದಾಜು ಒಟ್ಟು ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಈ ಇಲಿ, ಹೆಗ್ಗಣಗಳನ್ನು ಹಿಡಿಯಲು ಸರ್ಕಾರ ಕಳೆದ ಐದು ವರ್ಷಗಳಿಂದ ಯಾವ ಯಾವ ಸಂಸ್ಥೆಗೆ ಟೆಂಡರ್ ನೀಡಿದೆ ; (ವಿವರ ನೀಡುವುದು)

(ಉ) ಇಲಿ, ಹೆಗ್ಗಣ ಹಿಡಿಯಲು ಟೆಂಡರ್ ಪಡೆದ ಸಂಸ್ಥೆಗಳು ಎಷ್ಟು ಇಲಿ, ಹೆಗ್ಗಣಗಳನ್ನು ಹಿಡಿದು ಕಛೇರಿಗಳಲ್ಲಾಗಿರುವ ಅನಾಹುತಗಳನ್ನು ತಪ್ಪಿಸಲಾಗಿದೆ ಎಂಬುದರ ಬಗ್ಗೆ ವಿವರ ನೀಡುವುದು ?

## ಸಿ.ಇ.ಟಿ. ತರಬೇತಿ ಕಾರ್ಯಕ್ರಮ ಡಿ.ಡಿ. ಚಂದನಕ್ಕೆ ನೀಡುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೯೯ (೩೩೨೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸಿ.ಇ.ಟಿ. ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಈ ಹಿಂದೆ ಕಿಯೋನಿಕ್ಸ್ ಸಂಸ್ಥೆಗೆ ನೀಡಲಾದ ಮೊಬಲಗೆಷ್ಟು ; ಮತ್ತು ಸರ್ಕಾರಿ ಸಂಸ್ಥೆಯಾದ ಡಿ.ಡಿ. ಚಂದನಕ್ಕೆ ನೀಡಿದ ಮೊಬಲಗೆಷ್ಟು ;

(ಆ) ಪ್ರಸ್ತುತ ಸಾಲಿನಲ್ಲಿ ಸಿ.ಇ.ಟಿ. ತರಬೇತಿಯನ್ನು ಗ್ರಾಮೀಣ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಯಾವಾಗ ಪ್ರಾರಂಭಿಸಲಾಗುವುದು ; ಮತ್ತು ಯಾವ ಸಂಸ್ಥೆಗೆ ಎಷ್ಟು ಮೊಬಲಿಗೆ ನೀಡಲಾಗಿದೆ ;

(ಇ) ಪ್ರತಿ ವರ್ಷ ಸಿ.ಇ.ಟಿ. ತರಬೇತಿ ಕಾರ್ಯಕ್ರಮವನ್ನು ವಿಳಂಬವಾಗಿ ಪ್ರಾರಂಭ ಮಾಡಲು ಕಾರಣವೇನು ;

(ಈ) ಸರ್ಕಾರಿ ಸಂಸ್ಥೆಯ ಬದಲಿಗೆ ಖಾಸಗಿ ಸಂಸ್ಥೆಗಳಿಗೆ ಸಿ.ಇ.ಟಿ. ತರಬೇತಿ ಕಾರ್ಯಕ್ರಮ ನೀಡಿ ಲೂಟಿ ಮಾಡಿರುವುದನ್ನು ತನಿಖೆ ಮಾಡಲಾಗಿದೆಯೇ ; ಇಂತಹ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೆಂಗಳೂರು ನಗರದ ರಸ್ತೆಗಳ ಅಸಮರ್ಪಕ ನಿರ್ವಹಣೆಯಿಂದ ಆಗುತ್ತಿರುವ ತೊಂದರೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೦೦ (೩೩೨೬) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿನ ರಸ್ತೆಗಳ ಅಭಿವೃದ್ಧಿ, ನಿರ್ವಹಣೆ ದೃಷ್ಟಿಯಿಂದ ಒದಗಿಸಲಾದ ಅನುದಾನ ಎಷ್ಟು ; ಅಭಿವೃದ್ಧಿ, ನಿರ್ವಹಣೆಗೊಂಡ ರಸ್ತೆಗಳ ಕುರಿತಾದ ಸಂಪೂರ್ಣ ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಕಳಪೆ ರಸ್ತೆ ನಿರ್ವಹಣೆಯಿಂದಾಗಿ ಗುಂಡಿಗಳು ಹೆಚ್ಚುತ್ತಿದ್ದು ಇದರಿಂದ ವಾಹನ ಸವಾರರು ಅಪಘಾತಕ್ಕೊಳಗಾಗಿ ಮರಣವನ್ನಪ್ಪುತ್ತಿರುವ ಅಂಶವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಬಿ.ಬಿ.ಎಂ.ಪಿ. ಒಡೆತನದ ಖಾಲಿ ಜಾಗ ಕಟ್ಟಡಗಳ ಬಾಡಿಗೆ ನಿಗಧಿ ನಿರ್ವಹಣೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೦೧ (೩೩೨೫) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಬಿ.ಬಿ.ಎಂ.ಪಿ ಒಡೆತನ ಮತ್ತು ನಿರ್ವಹಣೆಗೆ ಒಳಪಟ್ಟ ಖಾಲಿ ಜಾಗಗಳು ಮತ್ತು ಕಟ್ಟಡಗಳು ಎಷ್ಟು ; ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು ;

(ಆ) ಈ ಖಾಲಿ ಜಾಗಗಳು ಮತ್ತು ಕಟ್ಟಡಗಳನ್ನು ವಾಣಿಜ್ಯ ಉದ್ದೇಶಗಳಿಗಾಗಿ ಬಾಡಿಗೆಗೆ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಬಾಡಿಗೆಗೆ ನೀಡಲಾದ ಜಾಗ ಮತ್ತು ಕಟ್ಟಡಗಳ ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಇ) ಬಾಡಿಗೆ ನಿಗಧಿಗಾಗಿ ಅನುಸರಿಸಲಾಗುತ್ತಿರುವ ಮಾನದಂಡವೇನು ; ಕಳೆದ ೩ ವರ್ಷಗಳ ಅವಧಿಯಲ್ಲಿ ಈ ನಿಟ್ಟಿನಲ್ಲಿ ಸಂಗ್ರಹಿಸಲಾದ ಬಾಡಿಗೆ ಮೊತ್ತ, ಸ್ಥಳ ಕಟ್ಟಡಗಳ ಕುರಿತಾಗಿ ಸಂಪೂರ್ಣ ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಈ) ತೀರಾ ಕಡಿಮೆ ಬಾಡಿಗೆ ನಿಗಧಿಯಿಂದಾಗಿ ಬಿ.ಬಿ.ಎಂ.ಪಿ. ಆರ್ಥಿಕ ಸಂಕಷ್ಟ ಪರಿಸ್ಥಿತಿ ಅನುಭವಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ ಬಾಡಿಗೆ ಪರಿಷ್ಕರಣೆ ಕುರಿತಾಗಿ ಸರ್ಕಾರ ಕೈಗೊಂಡ ಕ್ರಮಗಳು ಏನು ? (ವಿವರ ಒದಗಿಸುವುದು)

## ಆಯೋಗಗಳ ರಚನೆ ಮತ್ತು ಕಾರ್ಯನಿರ್ವಹಣೆ ಬಗ್ಗೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೦೨ (೩೩೨೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶ್ರೀ ಸಾಮಾನ್ಯರ ಸಾಂವಿಧಾನಿಕ ಹಕ್ಕುಗಳನ್ನು ರಕ್ಷಿಸುವ ದೃಷ್ಟಿಯಿಂದ ಪ್ರತ್ಯೇಕವಾಗಿ ರಚನೆಯಾಗಿರುವ ರಕ್ಷಣಾ ಆಯೋಗಗಳು ಎಷ್ಟು ; ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು ;

(ಆ) ಆಯೋಗಗಳು ರಚನೆಯಾದರೂ ಸಹ ಸುಗಮ ಕಾರ್ಯನಿರ್ವಹಣೆಗಾಗಿ ಅಧ್ಯಕ್ಷರು, ಸದಸ್ಯರ ನೇಮಕಾತಿಯಲ್ಲಿ ವಿಳಂಬವಾಗುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಪ್ರಸ್ತುತ ರಚನೆಯಾಗಿರುವ ವಿವಿಧ ಆಯೋಗಗಳಲ್ಲಿನ

ಅಧ್ಯಕ್ಷರು, ಸದಸ್ಯರು, ವರ್ಷ, ವರದಿ ಸಲ್ಲಿಕೆ, ಕೈಗೊಂಡ ಕ್ರಮಗಳ ಕುರಿತಾದ ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು ?

## ಪೊಲೀಸರ ರಕ್ಷಣೆಗಾಗಿ ಕ್ರಮ ಕೈಗೊಳ್ಳುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦೩ (೩೪೭೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೦ ರಿಂದ ೨೦೧೫ ರ ವರೆಗೆ ಅಪರಾಧಿಗಳ (ಆರೋಪಿಗಳ) ಬಂದೋಬಸ್ತ್‌ಗಾಗಿ ಅಥವಾ ರಕ್ಷಣೆಗಾಗಿ ರಾಜ್ಯ ಸರ್ಕಾರ ಮಾಡಿರುವ ವೆಚ್ಚವೆಷ್ಟು ;

(ಆ) ಈ ಅವಧಿಯಲ್ಲಿ ಪೊಲೀಸರ ರಕ್ಷಣೆಗಾಗಿ ಸರ್ಕಾರ ಮಾಡಿರುವ ವೆಚ್ಚವೆಷ್ಟು ;

(ಇ) ಪೊಲೀಸರ ರಕ್ಷಣೆಗಾಗಿ ಯಾವ ಯಾವ ಸಾಮಾಗ್ರಿಗಳನ್ನು ಒದಗಿಸಲಾಗಿದೆ ;

(ಈ) ಈ ಸಾಮಾಗ್ರಿಗಳಿಂದ ಪೊಲೀಸರ ರಕ್ಷಣೆ ಸಾಧ್ಯವೇ ?

## ರಾಜ್ಯದಲ್ಲಿರುವ ಪೊಲೀಸ್ ಠಾಣೆ ಮತ್ತು ಸಿಬ್ಬಂದಿಯ ಕೊರತೆ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦೪ (೩೪೭೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೧ ರ ಜನಗಣತಿಯಂತೆ ಎಷ್ಟು ಜನಸಂಖ್ಯೆಗೆ ಒಂದು ಪೊಲೀಸ್ ಠಾಣೆ ಇದೆ ;

(ಆ) ಈ ಪೊಲೀಸ್ ಠಾಣೆಗಳಿಗೆ ಮಂಜೂರಾದ ಒಟ್ಟು ಹುದ್ದೆಗಳೆಷ್ಟು ; ಖಾಲಿಯಿರುವ ಹುದ್ದೆಗಳೆಷ್ಟು ;

(ಇ) ಈ ಪೊಲೀಸ್ ಠಾಣೆಗಳಲ್ಲಿ ಸಿಬ್ಬಂದಿ ಕೊರತೆಯಿದೆಯೇ ;

(ಈ) ಕೊರತೆಯಿದ್ದಲ್ಲಿ, ಯಾವಾಗ ನೇಮಕ ಮಾಡಲಾಗುವುದು ?

## BDA ನೌಕರರ ಸಂಘದ ಅವ್ಯವಹಾರಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ), ಶ್ರೀಮತಿ ತಾರಾಅನೂರಾಧ (ನಾಮ ನಿರ್ದೇಶನ ಹೊಂದಿದವರು), ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) ಮತ್ತು ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೯೦೫ (೩೬೩೧+೩೬೩೨+೩೬೩೩) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನಾಂಕ: ೧೯–೦೪–೨೦೦೬ರ ಸರ್ಕಾರಿ ಆದೇಶದನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನೌಕರರಿಗೆ ನಿವೇಶನ ರಚಿಸಿ ಹಂಚಿಕೆ ಮಾಡಲು ಬಿಡಿಎ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಒಟ್ಟು ೪೫ ಎಕರೆಗಳಲ್ಲಿ ೪೨ ಎಕರೆ ಜಮೀನನ್ನು ಬಿಡುಗಡೆ ಮಾಡಿದ್ದು, ಇದರಲ್ಲಿ ಅವ್ಯವಹಾರವು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಂಘದಲ್ಲಿ ಅವ್ಯವಹಾರ ನಡೆದಿರುವುದು ಸಾಬೀತಾಗಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಕ ಮಾಡಲು ಕಂದಾಯ ಇಲಾಖೆಯ ಜಿಲ್ಲಾ ನೋಂದಣಾಧಿಕಾರಿಗಳು (District Registrar) ಗಾಂಧಿನಗರ ನೋಂದಣಿ ಜಿಲ್ಲೆ, ರವರು ಸರ್ಕಾರಕ್ಕೆ ಪತ್ರ ಬರೆದಿರುವುದು ನಿಜವೇ ; ಯಾವ ದಿನಾಂಕದಂದು ಪತ್ರ ಬರೆದಿದ್ದಾರೆ ಮತ್ತು ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬಿಡಿಎ ನೌಕರರ ಕ್ಷೇಮಾಭಿವೃದ್ಧಿ ಸಂಘದಲ್ಲಿ ನಡೆದಿರುವ ಅವ್ಯವಹಾರಗಳು ಸಾಬೀತಾಗಿ ಆಡಳಿತಾಧಿಕಾರಿ ನೇಮಕ ಮಾಡಲು

ಶಿಫಾರಸ್ಸು ಮಾಡಿರುವುದರಿಂದ ಇನ್ನು ಉಳಿದಿರುವ ವಸಂತಪುರ ಗ್ರಾಮಗದ ೦೩ ಎಕರೆ ಜಮೀನನ್ನು ಬಿಡುಗಡೆ ಮಾಡದಂತೆ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಇಲ್ಲಿಯವರೆಗೂ ಬಿಡುಗಡೆಯಾಗಿರುವ ಜಮೀನಿನಲ್ಲಿ ಇಲ್ಲಿಯವರೆಗೂ ಯಾವ ಯಾವ ಅಳತೆಯ ಎಷ್ಟೆಷ್ಟು ನಿವೇಶನಗಳನ್ನು ರಚಿಸಲಾಗಿದೆ ; ಇದಕ್ಕೆ ತಗಲಿರುವ ವೆಚ್ಚ ಎಷ್ಟು ಮತ್ತು ಯಾವ ಯಾವ ಅಳತೆಯ ನಿವೇಶನಗಳನ್ನು ಯಾರ್‍ಯಾರಿಗೆ ಹಂಚಲಾಗಿದೆ ; ಇವರಲ್ಲಿ ಪ್ರಾಧಿಕಾರದ ಹಾಲಿ ನೌಕರರೆಷ್ಟು ; ನಿವೃತ್ತ ನೌಕರರೆಷ್ಟು ; ಬಿಡಿಎಗೆ ಎರವಲು ಸೇವೆ ಮೇಲೆ ಬಂದಿರುವ ನೌಕರರೆಷ್ಟು ; ಇತರೆ ಇಲಾಖೆಗಳ ನೌಕರರೆಷ್ಟು ಮತ್ತು ಸಾರ್ವಜನಿಕರೆಷ್ಟು ; (ಹೆಸರು, ಸಂಘದ ಸದಸ್ಯತ್ವ ಸಂಖ್ಯೆ, ಹಂಚಿಕೆಯಾದ ನಿವೇಶನ ಸಂಖ್ಯೆ ಮತ್ತು ವಿಸ್ತೀರ್ಣ ಹಾಗೂ ವಿಳಾಸವಾರು ವಿವರ ನೀಡುವುದು) ಇನ್ನೂ ಎಷ್ಟು ಬಿಡಿಎನ ಹಾಲಿ ಮತ್ತು ನಿವೃತ್ತ ನೌಕರರಿಗೆ ನಿವೇಶನ ಹಂಚಿಕೆ ಮಾಡಬೇಕಾಗಿದೆ ?

## ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ಅವ್ಯವಹಾರಗಳ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦೬ (೩೬೫೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನಾಂಕ: ೧೯–೪–೨೦೦೬ ರ ಸರ್ಕಾರಿ ಆದೇಶದನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನೌಕರರಿಗೆ ನಿವೇಶನ ರಚಿಸಿ ಹಂಚಿಕೆ ಮಾಡಲು ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್‌ಗೆ ಒಟ್ಟು ೪೫ ಎಕರೆಗಳಲ್ಲಿ ೪೨ ಎಕರೆ ಜಮೀನನ್ನು ಬಿಡುಗಡೆ ಮಾಡಿದ್ದು, ಈ ಜಮೀನಿನಲ್ಲಿ ನಿವೇಶನ ರಚಿಸಿ ಹಂಚಿಕೆ ಮಾಡಿರುವುದರಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದಲ್ಲದೇ ವಂಚನೆಗೊಳಗಾಗಿರುವ ನೊಂದ ಬಿಡಿಎ ನಿವೃತ್ತ ನೌಕರರು ಅಸೋಸಿಯೇಷನ್ ವಿರುದ್ಧ ದೂರು ಸಲ್ಲಿಸಿದ್ದು, ಈ ದೂರಿನಂತೆ ಗಾಂಧಿನಗರ ಡಿಸ್ಟ್ರಿಕ್ಟ್ ರಿಜಿಸ್ಟ್ರಾರ್‌ರವರು ತನಿಖೆ ನಡೆಸಿ ವರದಿ ಕೊಡುವಂತೆ ಹೆಸರುಘಟ್ಟ ಸಬ್‌ರಿಜಿಸ್ಟ್ರಾರ್‌ರವರನ್ನು ಯಾವ ದಿನಾಂಕದಂದು ನೇಮಕ ಮಾಡಿ ಎಷ್ಟು ದಿನದೊಳಗೆ ಆದೇಶಿಸಿದ್ದಾರೆ ; ಇದರ ಬಗ್ಗೆ ಇಲ್ಲಿಯವರೆಗೂ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ನಿವೃತ್ತ ನೌಕರರು ದೂರು ಅರ್ಜಿಗಳನ್ನು ಐದಾರು ತಿಂಗಳುಗಳಿಂದ ನೀಡುತ್ತಿದ್ದರೂ ಅಸೋಸಿಯೇಷನ್ ವಿರುದ್ದ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ; ಯಾವ ನಿಗದಿತ ದಿನಾಂಕದೊಳಗೆ ತನಿಖಾ ವರದಿಯನ್ನು ನೀಡಲಾಗುವುದು ;

(ಈ) ಅಸೋಸಿಯೇಷನ್‌ನಲ್ಲಿ ಅವ್ಯವಹಾರ ನಡೆದಿರುವುದರಿಂದ ಉಳಿದ ಜಮೀನನ್ನು ಅಸೋಸಿಯೇಷನ್‌ಗೆ ಬಿಡುಗಡೆ ಮಾಡದಂತೆ ಕೈಗೊಳ್ಳುವ ಕ್ರಮಗಳೇನು ?

## ಮುಜರಾಯಿ ಇಲಾಖೆಯ ವ್ಯಾಪ್ತಿಯ ದೇವಸ್ಥಾನಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦೭ (೩೪೭೫) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಬರುವ ದೇವಸ್ಥಾನಗಳ ಸಂಖ್ಯೆಯೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ದೇವಸ್ಥಾನಗಳಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಬರುವ ಆದಾಯವೆಷ್ಟು ;

(ಇ) ಈ ದೇವಾಲಯಗಳಿಗೆ ಸರ್ಕಾರ ಮಾಡುತ್ತಿರುವ ವೆಚ್ಚವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ವಿಶ್ವವಿದ್ಯಾಲಯಗಳ ನೌಕರರ Take Home Salary ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೨೯೦೮ (೩೪೭೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವವಿದ್ಯಾಲಯಗಳ ಸಿಬ್ಬಂದಿಗಳು ವಿವಿಧ ಬ್ಯಾಂಕುಗಳ ಸಾಲಗಳ ನಂತರ ಮಾಹೇಯಾನ ಕನಿಷ್ಟ Take home Salary ಬಗ್ಗೆ ಅನುಸರಿಸುತ್ತಿರುವ ನಿಯಮಗಳೇನು ;

(ಆ) ಈ ನಿಯಮಗಳನ್ನು ಜಾರಿಗೆ ತರದಿರುವ ವಿಶ್ವವಿದ್ಯಾಲಯಗಳ ಮಾಹಿತಿ ಒದಗಿಸುವುದು ;

(ಇ) ಈ ವಿಶ್ವವಿದ್ಯಾಲಯಗಳ ವಿರುದ್ದ ಸರ್ಕಾರದ ಕ್ರಮಗಳೇನು ;

(ಈ) ಸಂಬಳದ ಶೇ. ೫೦ಕ್ಕೂ ಕಡಿಮೆ Take home Salary ಪಡೆಯುತ್ತಿರುವ ಸಿಬ್ಬಂದಿಗಳ ಬಗ್ಗೆ ಸರ್ಕಾರದ ಕ್ರಮಗಳೇನು ?

## ಪೊಲೀಸರ ರಿಯಲ್ ಎಸ್ಟೇಟ್ ದಂಧೆ ತಡೆಗಟ್ಟುವ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೨೯೦೯ (೩೪೭೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸರು ರಿಯಲ್ ಎಸ್ಟೇಟ್ ದಂಧೆಯಲ್ಲಿ ಹಾಗೂ ಈ ದಂಧೆ ನಡೆಸುವವರ ಜೊತೆ ಪಾಲ್ಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಹಾಗೂ ತೆಗೆದುಕೊಳ್ಳುವ ಕ್ರಮಗಳೇನು ;

(ಆ) ಅಕ್ರಮವಾಗಿ ಈ ದಂಧೆಯಲ್ಲಿ ಪಾಲ್ಗೊಳ್ಳುತ್ತಿರುವ ಪೊಲೀಸ್ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ನೇರವಾಗಿ ದೂರು ನೀಡಲು ಭಯಪಡುತ್ತಿರುವುದರಿಂದ ಸಾರ್ವಜನಿಕರಿಗೆ ರಕ್ಷಣೆ ಒದಗಿಸುವ ನಿಟ್ಟಿನಲ್ಲಿ ಬೇನಾಮಿ ಹೆಸರಿನಲ್ಲಿ ದೂರು ಪಡೆಯುವ ವ್ಯವಸ್ಥೆ ಸರ್ಕಾರ ಮಾಡುವುದೇ ; ಹಾಗಿದ್ದಲ್ಲಿ, ಹಾನಿಗೊಳಿಸದಿರಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ?

## BBMP ಯ ೧೯೮ನೇ ವಾರ್ಡಿನಲ್ಲಿರುವ ಗಂಗಶೆಟ್ಟಿಕೆರೆ ಅಂಗಳ ಒತ್ತುವರಿ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೨೯೧೦ (೩೪೮೧) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) “BBMP ವ್ಯಾಪ್ತಿಯಲ್ಲಿ ೧೯೮ನೇ ವಾರ್ಡಿನ ಗಂಗಶೆಟ್ಟಿಕೆರೆ ಅಂಗಳ ಒತ್ತುವರಿ ಮಾಡುತ್ತಿರುವ ಖಾಸಗಿ ಬಿಲ್ಡರ್ ಪರ ಪೊಲೀಸರು ಅಕ್ರಮವಾಗಿ ಸಹಕಾರ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಖಾಸಗಿ ಬಿಲ್ಡರ್ ಸದರಿ ಕೆರೆಗೆ ಹೊಂದಿಕೊಂಡಿರುವ (ಸಿ.ವಿ. ರಾಮನ್ ಎಸ್ಟೇಟ್ ಬಳಿ) ಜಮೀನಿನಲ್ಲಿ ಅಭಿವೃದ್ಧಿಪಡಿಸಿರುವ ನಿವೇಶನಗಳನ್ನು ಬಹುತೇಕ ಪೊಲೀಸ್ ಇಲಾಖೆಯವರಿಗೆ ಮಾರಾಟ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಬಿಲ್ಡರ್‌ನಿಂದ ಒತ್ತುವರಿಯಾಗಿರುವ ಕೆರೆ ಅಂಗಳವನ್ನು ಸರ್ಕಾರ ತೆರವುಗೊಳಿಸುವುದೇ ;

(ಈ) ಕೆರೆ ಅಂಗಳ ಒತ್ತುವರಿ ಬಗ್ಗೆ ಹಿಂದಿನ Google ಚಿತ್ರಗಳ ಆಧಾರವನ್ನು ಸರ್ಕಾರ ಪಡೆಯಲು ಯಾವ ಕ್ರಮ ಅನುಸರಿಸುತ್ತದೆ ?

## ಮಹಿಳೆಯರ ಮೇಲಿನ ದೌರ್ಜನ್ಯ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧೧ (೩೬೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ರಾಜ್ಯದಲ್ಲಿ ನಡೆದ ಮಹಿಳೆಯರ ಮತ್ತು ಅಪ್ರಾಪ್ತ ಹೆಣ್ಣು ಮಕ್ಕಳ ಮೇಲಿನ ಕೊಲೆ, ಅತ್ಯಾಚಾರ, ಸುಲಿಗೆ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ಭಾಗಿಯಾದ ಎಷ್ಟು ಜನ ಆರೋಪಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆ ;

(ಇ) ಅತ್ಯಾಚಾರ ಮತ್ತು ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಮತ್ತು ಅಪ್ರಾಪ್ತ ಮಕ್ಕಳಿಗೆ ಸರ್ಕಾರ ನೀಡಿರುವ ಪರಿಹಾರವೇನು ;

(ಈ) ಇತ್ತೀಚೆಗೆ ರಾಜ್ಯದೆಲ್ಲೆಡೆ ಸರಗಳ್ಳರ ಹಾವಳಿಯಿಂದ ಹೆಚ್ಚಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಉ) ಸರಗಳ್ಳತನ ಪ್ರಕರಣಗಳನ್ನು ನಿಯಂತ್ರಣದಲ್ಲಿಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ; ಇದನ್ನು ನಿಯಂತ್ರಣಕ್ಕೆ ತರಲು ಕಳೆದ ಮೂರು ವರ್ಷಗಳಿಂದ ಇಲಾಖೆ ಸಂಪೂರ್ಣ ವಿಫಲವಾಗಿರುವುದು ನಿಜವೇ ? (ವಿವರ ನೀಡುವುದು)

## ವಾರ್ಡ್ ನಂ.೮, CQAL ಬಡಾವಣೆಯ ನಿವಾಸಿಗಳ ತೊಂದರೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧೨ (೩೪೮೩) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಸಹಕಾರ ನಗರ CQAL ಬಡಾವಣೆ (ವಾರ್ಡ್ ನಂ–೮) ರಲ್ಲಿನ ನಿವೇಶನ ಸಂಖ್ಯೆ ೪೩೭, ೪೩೮ ಮತ್ತು ೪೩೯ರಲ್ಲಿ ಅತಿಯಾಗಿ ಗಿಡ–ಗಂಟೆಗಳು ಬೆಳೆದು ಕಸದ ರಾಶಿಯನ್ನು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಾರಣದಿಂದ ಸದರಿ ನಿವೇಶನಗಳಲ್ಲಿ ಸೊಳ್ಳೆಗಳು, ಇಲಿ–ಹೆಗ್ಗಣಗಳು ಮತ್ತು ವಿಷಜಂತುಗಳು ಹೆಚ್ಚಾಗಿ ಇವುಗಳು ಸುತ್ತಮುತ್ತಲ ವಾಸದ ಮನೆಗಳಿಗೆ ನುಸುಳುತ್ತಿರುವುದು ಅಲ್ಲಿನ ನಿವಾಸಿಗಳೂ ತೊಂದರಗೆ ಒಳಗಾಗಿದ್ದು ಈ ಸಮಸ್ಯೆಗೆ ಸರ್ಕಾರದ ಪರಿಹಾರವೇನು ; ಯಾವ ಕಾಲಮಿತಿಯಲ್ಲಿ ಪರಿಹಾರ ಒದಗಿಸಲಾಗುವುದು ;

(ಇ) ಸೊಳ್ಳೆಯ ಕಾರಣದಿಂದ ಅಲ್ಲಿನ ಮಕ್ಕಳು ಡೆಂಗ್ಯೂ ಜ್ವರದ ಸೋಂಕಿಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ವತಿಯಿಂದ ಪರಿಹಾರವೇನು ;

(ಈ) ಈ ಎಲ್ಲಾ ಸಮಸ್ಯೆಗಳ ಬಗ್ಗೆ ಸಂಬಂಧಪಟ್ಟ B.B.M.P. ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳದೇ ಬೇಜಾವಾಬ್ದಾರಿ ಮತ್ತು ಹಾರಿಕೆಯ ಉತ್ತರವನ್ನು ನೀಡುತ್ತಾ, ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದ ಈ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ಯಾವ ಕ್ರಮ ಮತ್ತು ಯಾವಾಗ ? (ವಿವರ ಒದಗಿಸುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸೈಟ್ ಹಂಚಿಕೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧೩ (೩೬೦೬) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಕಳೆದ ಎರಡು ವರ್ಷಗಳಲ್ಲಿ ಸಾರ್ವಜನಿಕರಿಗೆ ಹಂಚಿಕೆ ಮಾಡಿರುವ ನಿವೇಶನ ಮತ್ತು ಫ್ಲಾಟ್‌ಗಳ ಸಂಖ್ಯೆ ಎಷ್ಟು;

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಕೆಂಪೇಗೌಡ ಬಡಾವಣೆಯ ಅಭಿವೃದ್ಧಿಪಡಿಸಿ ನಿವೇಶನಗಳನ್ನು ಹಂಚಿಕೆ ಮಾಡುತ್ತಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ಸದರಿ ಸ್ಥಳದಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು ಮತ್ತು ಚದರ ಅಡಿಗೆ ನಿಗಧಿಪಡಿಸಿರುವ ಹಣ ಎಷ್ಟು;

(ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನಗಳನ್ನು ಹಂಚಿಕೆ ಮಾಡುವ ಸಮಯದಲ್ಲಿ ಕೈಗೊಳ್ಳುವ ಮಾನದಂಡಗಳೇನು;

(ಉ) ರಾಜ್ಯದ ಜನರಿಗಿಂತ ಹೊರ ರಾಜ್ಯಗಳಿಂದ ಬಂದವರಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಿವೇಶನಗಳು ಹೆಚ್ಚಿನ ಪ್ರಮಾಣದಲ್ಲಿ ಹಂಚಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿದೇ? (ವಿವರಿಸುವುದು)

## ಪೊಲೀಸ್ ಠಾಣೆಗಳಲ್ಲಿ ಮೂಲ ಸೌಕರ್ಯಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧೪ (೩೪೮೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅನೇಕ ಪೊಲೀಸ್ ಠಾಣೆಗಳಲ್ಲಿ ಮೂಲ ಸೌಕರ್ಯಗಳಿಲ್ಲದೆ ಸಿಬ್ಬಂದಿಗಳು ಕಾರ್ಯನಿರ್ವಹಿಸುವ ಪರಿಸ್ಥಿತಿ ಇರುವುದು ಸರ್ಕಾರಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದನ್ನು ನಿವಾರಿಸಲು ಕೈಗೊಂಡಿರುವ ಕ್ರಮಗಳೇನು; ಹಾಲಿ ಎಷ್ಟು ಪೊಲೀಸ್ ಠಾಣೆಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ; (ವಿವರ ನೀಡುವುದು)

(ಇ) ಪ್ರತಿದಿನ ಸಂಚಾರಿ ಪೊಲೀಸರು ರಸ್ತೆಗಳಲ್ಲೇ ಕಾರ್ಯನಿರ್ವಹಿಸುತ್ತಿರುವುದರಿಂದ, ವಾಯು ಮಾಲಿನ್ಯದಿಂದ ಅವರುಗಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಆರೋಗ್ಯ ಸುರಕ್ಷತಾ ದೃಷ್ಟಿಯಿಂದ ಅವರುಗಳಿಗೆ ಮಾಸ್ಕ್ ಮತ್ತಿತರೆ ಸಲಕರಣೆಯನ್ನು ನೀಡಲಾಗಿದೆಯೇ?

## ಸರಗಳ್ಳರ ಹಾವಳಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧೫ (೩೬೨೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ನಗರದಲ್ಲಿ ಸರಗಳ್ಳರ ಹಾವಳಿ ಜಾಸ್ತಿಯಾಗಿದ್ದು, ಇದನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಹಾಗಿದ್ದಲ್ಲಿ, ಕಳೆದ ೧ ವರ್ಷದಿಂದ ದಾಖಲಾಗಿರುವ ದೂರಗಳು ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ಆ ಪೈಕಿ ಪತ್ತೆ ಹಚ್ಚಲಾದ ಪ್ರಕರಣಗಳು ಎಷ್ಟು;

(ಇ) ಕಳ್ಳರಿಂದ ವಶಪಡಿಸಿಕೊಂಡಿರುವ ಆಭರಣಗಳ ಮೌಲ್ಯ ಎಷ್ಟು; ಅವುಗಳನ್ನು ಸಂಬಂಧಪಟ್ಟವರಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ? (ವಿವರ ನೀಡುವುದು)

## ವಿವಿಧ ಇಲಾಖೆಗಳಲ್ಲಿ ಸರ್ಕಾರದ ಕಡತ ವಿಲೇವಾರಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧೬ (೩೬೨೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಸರ್ಕಾರ ಕಡತ ವಿಲೇವಾರಿ ನಡೆಸಿದಾಗ ಎಷ್ಟು ಕಡತಗಳನ್ನು ವಿಲೇವಾರಿ ಮಾಡಲಾಯಿತು; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಕಡತ ವಿಲೇವಾರಿಯ ನಂತರ ವಿವಿಧ ಇಲಾಖೆಗಳಲ್ಲಿ ಇನ್ನೂ ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಬಾಕಿ ಇರುವ ಕಡತಗಳಲ್ಲಿ ಒಂದು ತಿಂಗಳಿಗೂ ಹೆಚ್ಚು ಕಾಲ ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು; (ಇಲಾಖಾವಾರು ಮಾಹಿತಿ ನೀಡುವುದು)

(ಈ) ಬಾಕಿ ಇರುವ ಕಡತಗಳನ್ನು ವಿಲೇವಾರಿ ಮಾಡಲು ನಿಗಧಿಪಡಿಸಿರುವ ಕಾಲಮಿತಿ ಎಷ್ಟು?

## ಉಡುಪಿ ಜಿಲ್ಲೆಯಲ್ಲಿನ ಪೊಲೀಸ್ ಇಲಾಖೆಯಿಂದ ನಿರ್ವಹಿಸಲ್ಪಡುತ್ತಿರುವ ಸಿ.ಸಿ. ಕ್ಯಾಮರಾಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೧೭ (ಇಳಲಜ) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಯಿಂದ ನಿರ್ವಹಿಸಲ್ಪಡುತ್ತಿರುವ ಸಿ.ಸಿ. ಕ್ಯಾಮರಾಗಳ ಸಂಖ್ಯೆ ಎಷ್ಟು ಮತ್ತು ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿ.ಸಿ. ಕ್ಯಾಮರಾಗಳ ಸಂಖ್ಯೆ ಎಷ್ಟು;

(ಆ) ಅಕ್ರಮ ಚಟುವಟಿಕೆಗಳನ್ನು ಮತ್ತು ಕಳವು ಪ್ರಕರಣಗಳನ್ನು ಬೇಧಿಸುವಲ್ಲಿ ಸಿ.ಸಿ. ಕ್ಯಾಮರಾಗಳು ಮಹತ್ತರವಾದ ಕುರುಹುಗಳನ್ನು ನೀಡುವುದನ್ನು ಇಲಾಖೆಯು ಗಮನಿಸಿದೆಯೇ;

(ಇ) ಸಾರ್ವಜನಿಕ ಹಿತದೃಷ್ಟಿಯಿಂದ, ಸಾರ್ವಜನಿಕ ಸ್ವತ್ತುಗಳ ರಕ್ಷಣೆಗಾಗಿ ಸಾರ್ವಜನಿಕರ ಸ್ಥಳಗಳಲ್ಲಿ ಸರ್ಕಾರಿ, ಅರೆಸರ್ಕಾರಿ ಮತ್ತು ಸಂಘ ಸಂಸ್ಥೆಗಳಿಗೆ ಸಿ.ಸಿ. ಕ್ಯಾಮರಾಗಳ ಅಳವಡಿಕೆ ಮತ್ತು ನಿರ್ವಹಣೆಯ ಹೊಣೆಯನ್ನು ವಹಿಸುವ ಚಿಂತನೆಯು ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಕ್ರಮ ಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ ಕಾರಣಗಳೇನು;

(ಈ) ಪಾರದರ್ಶಕ ಆಡಳಿತಕ್ಕಾಗಿ ಪೊಲೀಸ್ ಠಾಣೆಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಲಾಗಿದೆಯೇ?

## ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿರುವ ಮಹಿಳಾ ಪೊಲೀಸ್ ಠಾಣೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೧೮ (೩೪೮೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; ಅವು ಯಾವುವು;

(ಆ) ರಾಜ್ಯದಲ್ಲಿ ಮಹಿಳಾ ಪೊಲೀಸ್ ಠಾಣೆಗಳು ಇಲ್ಲದಿರುವ ಜಿಲ್ಲಾ ಕೇಂದ್ರಗಳು ಎಷ್ಟು; ಅವು ಯಾವುವು;

(ಇ) ಮಹಿಳಾ ಪೊಲೀಸ್ ಠಾಣೆಗಳು ಇಲ್ಲದಿರುವ ಜಿಲ್ಲಾ ಕೇಂದ್ರಗಳಲ್ಲಿ ಮಹಿಳಾ ಪೊಲೀಸ್ ಠಾಣೆಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ ಕಾರಣವೇನು;

(ಈ) ರಾಜ್ಯದಲ್ಲಿ ಸ್ವಂತ ನಿವೇಶನ ಮತ್ತು ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಪೊಲೀಸ್ ಠಾಣೆಗಳು ಎಷ್ಟು; ಅವು ಯಾವುವು;

(ಉ) ಉಡುಪಿ ಜಿಲ್ಲಾ ಕೇಂದ್ರದಲ್ಲಿ ನೂತನ ಮಹಿಳಾ ಪೊಲೀಸ್ ಠಾಣೆಯನ್ನು ಪ್ರಾರಂಭಿಸುವ ಬದಲು ಕುಂದಾಪುರದ ಮಹಿಳಾ ಪೊಲೀಸ್ ಠಾಣೆಯನ್ನು ಉಡುಪಿಗೆ ಸ್ಥಳಾಂತರಿಸುವುದು ಸಮಂಜಸ; ಕುಂದಾಪುರದ ಮಹಿಳಾ ಪೊಲೀಸ್ ಠಾಣೆಯನ್ನು ಸದರಿ ಸ್ಥಳದಲ್ಲೇ ಮುಂದುವರಿಸಲು ಕ್ರಮ ಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ ಕಾರಣವೇನು?

## "ನೋಟರಿಗಳ ನೇಮಕ"

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೧೯ (ಇಳಲಿ೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ಎಷ್ಟು ಜನ ವಕೀಲರನ್ನು ನೋಟರಿಯಾಗಿ ನೇಮಿಸಲಾಗಿದೆ; ಆ ಪೈಕಿ ಮಹಿಳೆಯರ ಸಂಖ್ಯೆ ಎಷ್ಟು; (ನೇಮಕಗೊಂಡ ವಕೀಲರ ಹೆಸರು, ಅವರು ಸೇವೆ ಸಲ್ಲಿಸುತ್ತಿರುವ ವಕೀಲರ ಸಂಘದ ವಿಳಾಸ ವಿವರ ನೀಡುವುದು)

(ಆ) ಸರ್ಕಾರವು ನೋಟರಿಯುವರ ಆಯ್ಕೆಗೆ ಅರ್ಜಿಯುನ್ನು ಆಹ್ವಾನಿಸಿದೆಯೇ; ಆಹ್ವಾನಿಸಿದಲ್ಲಿ, ಅದರ ಮಾನದಂಡಗಳೇನು; ಆಯ್ಕೆ ಪ್ರಕ್ರಿಯೆಯು ಯಾವ ಹಂತದಲ್ಲಿದೆ;

(ಇ) ಸರ್ಕಾರವು ನೋಟರಿಯವರ ಆಯ್ಕೆಗೆ ಅರ್ಜಿ ಆಹ್ವಾನಿಸಿ ಹಲವು ತಿಂಗಳುಗಳು ಕಳೆದರೂ ಇಲ್ಲಿಯತನಕ ಆಯ್ಕೆ ಪ್ರಕ್ರಿಯೆ ನಡೆಸದಿರಲು ಕಾರಣವೇನು; ಶೀಘ್ರ ನೋಟರಿಯವರ ಆಯ್ಕೆ ಪ್ರಕ್ರಿಯೆಯನ್ನು ಪುನರಾರಂಭಿಸಲು ಕ್ರಮಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ, ಕಾರಣವೇನು?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಮುಜರಾಯಿ ಇಲಾಖಾ ವ್ಯಾಪ್ತಿಯ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೨೦ (ಇಳಲಲ) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ದೇವಸ್ಥಾನಗಳಿಂದ ನಡೆಸಲ್ಪಡುತ್ತಿರುವ

ಶಿಕ್ಷಣ ಸಂಸ್ಥೆಗಳು ಎಷ್ಟು; ಅವು ಯಾವುವು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಇ) ಈ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಭೋದಕೇತರ ಸಿಬ್ಬಂದಿಗಳಲ್ಲಿ, ಸೇವಾ ಖಾಯಂಯಾತಿ ಹೊಂದಿದವರ ಸಂಖ್ಯೆ ಎಷ್ಟು; ಸೇವಾ ಖಾಯಂಯಾತಿ ಹೊಂದಿದವರ ಸಂಖ್ಯೆ ಎಷ್ಟು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಈ) ಈ ಶಿಕ್ಷಣ ಸಂಸ್ಥೆಗಳಲ್ಲಿ ಸೇವಾ ಖಾಯಂಯಾತಿ ಹೊಂದದೆ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸೇವಾ ಖಾಯಂಯಾತಿಗೆ ಏನು ಕ್ರಮಕೈಗೊಳ್ಳಲಾಗಿದೆ; ಇಲ್ಲವಾದಲ್ಲಿ ಕಾರಣವೇನು;

(ಉ) ಈ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸೇವಾ ಖಾಯಂಯಾತಿ ಹೊಂದಿದ ಮತ್ತು ಸೇವಾ ಖಾಯಂಯಾತಿ ಹೊಂದದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಸೇವೆಗೆ ಸೇರ್ಪಡೆಗೊಂಡ ತಿಂಗಳು ಮತ್ತು ವರ್ಷ ಯಾವುದು?

## ಕರ್ನಾಟಕ ಆಡಳಿತ ಪ್ರಾಧಿಕಾರದಲ್ಲಿರುವ ಪ್ರಕರಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೨೧ (ಇ೫೬೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಆಡಳಿತ ಪ್ರಾಧಿಕಾರಕ್ಕೆ ಬಂದ ಪ್ರಕರಣಗಳ ಸಂಖ್ಯೆ ಎಷ್ಟು; ಅದರಲ್ಲಿ ಇತ್ಯರ್ಥಗೊಂಡ ಪ್ರಕರಣಗಳು ಎಷ್ಟು; ಮತ್ತು ಇತ್ಯರ್ಥಗೊಳ್ಳದ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ಕರ್ನಾಟಕ ಆಡಳಿತ ಪ್ರಾಧಿಕಾರಕ್ಕೆ ಕಳೆದ ಎರಡು ವರ್ಷಗಳಲ್ಲಿ ಬಂದ ಪ್ರಕರಣಗಳ ಸಂಖ್ಯೆ ಎಷ್ಟು; ಮತ್ತು ಅದರಲ್ಲಿ ಇತ್ಯರ್ಥಗೊಂಡ ಪ್ರಕರಣಗಳು ಎಷ್ಟು; ಇತ್ಯರ್ಥಗೊಳ್ಳದ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ಕರ್ನಾಟಕ ಆಡಳಿತ ಪ್ರಾಧಿಕಾರಕ್ಕೆ ಕಳೆದ ಒಂದು ವರ್ಷದಲ್ಲಿ ಬಂದ ಪ್ರಕರಣಗಳ ಸಂಖ್ಯೆ ಎಷ್ಟು; ಮತ್ತು ಅದರಲ್ಲಿ ಇತ್ಯರ್ಥಗೊಂಡ ಪ್ರಕರಣಗಳು ಎಷ್ಟು; ಇತ್ಯರ್ಥಗೊಳ್ಳದ ಬಾಕಿ ಇರುವ ಪ್ರಕರಣಗಳೆಷ್ಟು;

(ಈ) ಕರ್ನಾಟಕ ಆಡಳಿತ ಪ್ರಾಧಿಕಾರದಲ್ಲಿ ಇತ್ಯರ್ಥಗೊಳ್ಳದೆ ಬಾಕಿ ಇರುವ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಬೆಂಗಳೂರು ನಗರದ ವಿಜಯನಗರ ಕ್ಷೇತ್ರದಲ್ಲಿ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೨೨ (೩೬೩೬) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯನಗರ ವಿಧಾನಸಭಾ ಕ್ಷೇತ್ರದ ಹಂಪಿನಗರ ವಾರ್ಡ್ ವ್ಯಾಪ್ತಿಗೆ ಬರುವ ಕವಿಕಾ ಬಡಾವಣೆಯಲ್ಲಿ ಒಳಚರಂಡಿಯ ಸೂಕ್ತ ವ್ಯವಸ್ಥೆ ಇಲ್ಲದೆ, ಸಮಸ್ಯೆ ಸೃಷ್ಠಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಸದರಿ ಸ್ಥಳದಲ್ಲಿ ಬೃಹತ್ ಗಾತ್ರದ ಪೈಪ್‌ಗಳನ್ನು ಅಳವಡಿಸುವುದಾಗಿ ಭರವಸೆ ನೀಡಲಾಗಿತ್ತು. ಇದರ ಬಗ್ಗೆ ತೆಗೆದುಕೊಂಡ ಕ್ರಮವೇನು;

(ಆ) ಬೆಂಗಳೂರು ನಗರ ದೀಪಾಂಜಲಿನಗರ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮುನೇಶ್ವರ ಬ್ಲಾಕ್, ಬಿಡಿಎ ಬಡಾವಣೆ, ಗಣಪತಿನಗರ,

ವೀರಭದ್ರನಗರದಲ್ಲಿ ಹದಗೆಟ್ಟ ರಸ್ತೆಗಳ ಅಭಿವೃದ್ಧಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅನುಮೋದನೆಯನ್ನು (Work Order) ನೀಡಿದ್ದರೂ ಕಾಮಗಾರಿ ಪ್ರಾರಂಭಿಸದಿರಲು ಕಾರಣವೇನು;

(ಇ) ದೀಪಾಂಜಲಿನಗರ ವಾರ್ಡ್‌ನ ಶನಿಮಹಾತ್ಮ ದೇವಸ್ಥಾನದ ಬಳಿ ಬೆಂಗಳೂರು ಮಹಾ ಪೌರರ ನಿಧಿಯಿಂದ ೨೦೧೨-೧೩ನೇ ಸಾಲಿನಲ್ಲಿ ರೂ.೨೫ ಲಕ್ಷಗಳನ್ನು ಬಿಡುಗಡೆ ಮಾಡಿದ್ದರೂ ಕಾಮಗಾರಿ ಪ್ರಾರಂಭವಾಗದಿರಲು ಕಾರಣವೇನು;

(ಈ) ದೀಪಾಂಜಲಿನಗರ ವಾರ್ಡ್‌ನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಬಡಾವಣೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ರೂ.೧೨ ಲಕ್ಷ ಅಂದಾಜಿನ ಪಾರ್ಕ್‌ನಲ್ಲಿ ಹಿರಿಯ ನಾಗರೀಕರಿಗೆ ಗಜೀಬ್ ನಿರ್ಮಿಸಲು ಹಣ ಬಿಡುಗಡೆಯಾಗಿದ್ದರೂ ಕಾಮಗಾರಿ ಪ್ರಾರಂಭವಾಗದಿರಲು ಕಾರಣವೇನು?

## ಅಬಕಾರಿ ಗಾರ್ಡ್‌ಗಳ ನೇಮಕಾತಿ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೯೨೩ (೩೬೩೫) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಬಕಾರಿ ಇಲಾಖೆಯಲ್ಲಿ ಗಾರ್ಡ್‌ಗಳ ನೇಮಕಾತಿಗಾಗಿ ಯಾವಾಗ ಅರ್ಜಿಗಳನ್ನು ಆಹ್ವಾನಿಸಲಾಯಿತು; ನೇಮಕಾತಿಗಾಗಿ ಪರೀಕ್ಷೆ ನಡೆದದ್ದು ಯಾವಾಗ; ಲಿಖಿತ ಪರೀಕ್ಷೆ ಫಲಿತಾಂಶ ಪ್ರಕಟ ಮಾಡಿದ್ದು ಯಾವಾಗ, ದೈಹಿಕ ಪರೀಕ್ಷೆಯಲ್ಲಿ ಉತ್ತೀರ್ಣಾಕರಾರಾದವರ ದಾಖಲೆ ಪರಿಶೀಲನೆ ನಡೆಸಲಾಗುತ್ತಿದೆಯೇ;

(ಆ) ಕರ್ನಾಟಕ ಲೋಕಸೇವಾ ಆಯೋಗ ನೀಡಿದ ಅರ್ಹರ ಪಟ್ಟಿಯನ್ನು ಇಲಾಖೆ ಪರಿಶೀಲಿಸಿ ಯಾವಾಗ ಗಾರ್ಡ್‌ಗಳ ನೇಮಕ ಮಾಡಲಾಗುವುದು;

(ಇ) ಆಯ್ಕೆಯಾದ ಅಭ್ಯರ್ಥಿಗಳಿಗೆ ಸಿಂಧುತ್ವ ಪತ್ರ ನೀಡುವಲ್ಲಿ ಅವ್ಯವಹಾರವಾಗಿದೆಯೇ?

## ಹಲಗೆವಡೇರಹಳ್ಳಿ ಮುಖ್ಯರಸ್ತೆ ಅಗಲೀಕರಣ ಯೋಜನೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೨೪ (೩೪೮೯) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ, ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಸ್ತುತ ಇರುವ ಹಲಗೆವಡೇರಹಳ್ಳಿ ಮುಖ್ಯರಸ್ತೆಯನ್ನು ಅಗಲೀಕರಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದರೆ, ಎಷ್ಟು ಉದ್ದದ ರಸ್ತೆಯನ್ನು ಅಗಲೀಕರಣ ಮಾಡಲಾಗುತ್ತಿದೆ; ಎಲ್ಲಿಂದ ಎಲ್ಲಿಯವರೆಗೆ ಎಷ್ಟು ಅಡಿ ರಸ್ತೆ ಅಗಲೀಕರಣಗೊಳ್ಳಲಿದೆ; (ವಿವರ ನೀಡುವುದು)

(ಆ) ರಸ್ತೆ ಅಗಲೀಕರಣ ಮಾಡುವಾಗ ಎಷ್ಟು ಮಂದಿ ಮನೆಗಳನ್ನು ಕಳೆದುಕೊಳ್ಳುತ್ತಿದ್ದಾರೆ, ಮನೆ ಅಥವಾ ನಿವೇಶನಗಳನ್ನು ಒತ್ತುವರಿ ಮಾಡಿಕೊಂಡವರಿಗೆ ಯಾವ ಆಧಾರದ ಮೇಲೆ ಪರಿಹಾರವನ್ನು ನೀಡಲಾಗುತ್ತದೆ;

(ಇ) ಈಗಾಗಲೇ ಪರಿಹಾರವನ್ನು ನೀಡಿದ್ದರೆ ಅಡಿ ಅಳತೆಗೆ ಎಷ್ಟು ಹಣವನ್ನು ನೀಡಲಾಗಿದೆ; ಫಲಾನುಭವಿಗಳ ಹೆಸರುಗಳ ಸಹಿತ ಮಾಹಿತಿಯನ್ನು ನೀಡುವುದು?

## ಕರ್ನಾಟಕದಲ್ಲಿರುವ ಪೊಲೀಸ್ ಮತ್ತು ಅಂಗರಕ್ಷಕರ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೯೨೫ (೩೫೫೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಪೊಲೀಸ್ ಪೇದೆಗಳ ಸಂಖ್ಯೆ ಎಷ್ಟು; ಇದರಲ್ಲಿ (DAR, CAR & Civil Police) ಹಾಗೂ ಇನ್ನಿತರೆ ವಿಭಾಗಗಳಿಗೆ ಸಂಬಂಧಪಟ್ಟಂತೆ ವಿವರಗಳನ್ನು ನೀಡುವುದು;

(ಆ) ಈ ಇಲಾಖೆಯಲ್ಲಿ ಪೊಲೀಸ್ ಮಹಾ ನಿರ್ದೇಶಕರಿಂದ ಹಿಡಿದು ವೃತ್ತ ಆರಕ್ಷಕ ನಿರೀಕ್ಷಕರ ತನಕ ಅಧಿಕಾರಿಗಳ ಮನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪೊಲೀಸ್ ಪೇದೆಗಳ ಸಂಖ್ಯೆ ಎಷ್ಟು;

(ಇ) ಈ ರಾಜ್ಯದ ಕಾನೂನು ಸುವ್ಯವಸ್ಥೆ ಕಾಪಾಡಲು ಬೇಕಾಗಿರುವ ಪೊಲೀಸ್ ಪೇದೆಗಳ ಸಂಖ್ಯೆ ಎಷ್ಟು;

(ಈ) ಹಿರಿಯ ಪೊಲೀಸ್ ಅಧಿಕಾರಿಗಳ ಮನೆಗಳಲ್ಲಿ ಈ ಪೊಲೀಸ್ ಪೇದೆಗಳನ್ನು ನಿಯೋಜಿತ ಕೆಲಸಕ್ಕಿಂತ ಹೆಚ್ಚಾಗಿ ಬೇರೆ ಬೇರೆ ಕೆಲಸಗಳಿಗೆ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಕೆಲ ಹಿರಿಯ ಅಧಿಕಾರಿಗಳ ಮನೆಗಳಲ್ಲಿ ಪೊಲೀಸ್ ಪೇದೆಗಳನ್ನು ಪೌರ ಕಾರ್ಮಿಕರಿಗಿಂತ ಅಮಾನುಷವಾಗಿ ಬಳಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿವರಗಳನ್ನು ನೀಡುವುದು?

## ಬೆಂಗಳೂರು ನಗರದಲ್ಲಿರುವ ನೀರು ಕಾಲುವೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೯೨೬ (೩೫೫೫) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಮಳೆ ನೀರು ಕಾಲುವೆಗಳಲ್ಲಿ (Staram water draim) ಕೊಳಚೆ ನೀರು ಹರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಯಾವ ಯಾವ ಕಾಲುವೆಗಳಲ್ಲಿ ಕೊಳಚೆ ನೀರು ಹರಿಯುತ್ತಿದೆ; (ವಿವರಗಳನ್ನು ನೀಡುವುದು)

(ಇ) ಈ ಕೊಳಚೆ ನೀರು ಹರಿಯುವಿಕೆಯಿಂದ ಬೆಂಗಳೂರು ನಗರ ವಾಸಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಬೆಂಗಳೂರು ನಗರ ನೀರು ಸರಬರಾಜು ಮಂಡಳಿಯ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೯೨೭ (೩೫೫೬) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ನೀರು ಸರಬರಾಜು ಮಂಡಳಿ ಅಸ್ಥಿತ್ವಕ್ಕೆ ಬಂದಿದ್ದು ಯಾವಾಗ;

(ಆ) ಈ ಮಂಡಳಿಯಿಂದ ಬೆಂಗಳೂರು ನಗರ ನೀರು ಸರಬರಾಜಿಗಾಗಿ ಕಾವೇರಿ ನದಿಯಿಂದ ವಾರ್ಷಿಕವಾಗಿ ಎಷ್ಟು ನೀರನ್ನು ಪೂರೈಕೆ ಮಾಡಿಕೊಳ್ಳಲಾಗುತ್ತಿದೆ;

(ಇ) ಬೆಂಗಳೂರು ನಗರದ ಈ ಮಂಡಳಿಯ ವ್ಯಾಪ್ತಿಗೆ ಒಳಪಡುವ ನೀರಿನ ಸಂಪರ್ಕಗಳು ಎಷ್ಟು ಹಾಗೂ ಎಷ್ಟು ಪ್ರಮಾಣದ ನೀರನ್ನು ಪ್ರತಿ ಸಂಪರ್ಕಕ್ಕೆ ಪೂರೈಸಲಾಗುತ್ತಿದೆ;

(ಈ) ಪ್ರತಿ ಲೀಟರ್ ನೀರಿನ ದರ ಎಷ್ಟು; (ವಿವರಗಳನ್ನು (ವಾಣಿಜ್ಯ ಕೈಗಾರಿಕೆ ಹಾಗೂ ವಸತಿ) ನೀಡುವುದು)

(ಉ) ಈ ಮಂಡಳಿಯು ಕಳೆದ ಮೂರು (೩) ವರ್ಷಗಳ ಅವಧಿಯಲ್ಲಿನ ಲಾಭ–ನಷ್ಟಗಳ ವಿವರಗಳನ್ನು ನೀಡುವುದು?

## ರಾಜ್ಯದಲ್ಲಿ ಅಂಗರಕ್ಷಕರ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೯೨೮ (೩೫೫೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ರಾಜ್ಯದಲ್ಲಿ ಅಂಗರಕ್ಷಕರನ್ನು ಹೊಂದಿರುವ VVIP ಹಾಗೂ VIP ಮತ್ತಿತರ ಗಣ್ಯವ್ಯಕ್ತಿಗಳ ಹೆಸರುಗಳ ಪಟ್ಟಿಯನ್ನು ನೀಡುವುದು;

(ಆ) ಮೇಲ್ಕಂಡ ಗಣ್ಯವ್ಯಕ್ತಿಗಳಿಗೆ ಎಷ್ಟು ಜನ ಅಂಗರಕ್ಷಕರನ್ನು ನಿಂಯೋಜಿಸಲಾಗಿದೆ; (ಪ್ರತಿಂಯೊಬ್ಬರ ವಿವರಗಳನ್ನು ನೀಡುವುದು)

(ಇ) ಅದೇ ರೀತಿ ಈ ರಾಜ್ಯದಲ್ಲಿ ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಗಳಿಗೆ ಹಾಗೂ ಜೀವ ಬೆದರಿಕೆ ಇರುವ ವ್ಯಕ್ತಿಗಳಿಗೆ ಕೊಟ್ಟಿರುವ ಅಂಗರಕ್ಷಕರ ಸಂಖ್ಯೆ ಎಷ್ಟು; (ವ್ಯಕ್ತಿವಾರು ಹಾಗೂ ಅವರಿಗೆ ನೀಡಲಾಗಿರುವ ಅಂಗರಕ್ಷಕರ ವಿವರವನ್ನು ನೀಡುವುದು)

(ಈ) ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಗಳಿಗೆ ಸರ್ಕಾರಿ ಅಂಗರಕ್ಷಕರನ್ನು ನೀಡಲು ಯಾವ ನಿಯಮಗಳಲ್ಲಿ ಉಲ್ಲೇಖ ಇದೆ; (ಆ ನಿಯಮಗಳ ವಿವರಗಳನ್ನು ತಿಳಿಸುವುದು)

(ಉ) ಸಾರ್ವಜನಿಕ ಜೀವನದಲ್ಲಿರುವ MP/MLA/MLC ಗಳಿಗೆ ಅಂಗರಕ್ಷಕರನ್ನು ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು; ತೊಂದರೆ ಇದ್ದರೆ ವಿವರವಾಗಿ ತಿಳಿಸುವುದು?

## ಕರ್ನಾಟಕ ಸಚಿವಾಲಯದ ನೌಕರರ ಮಾಹಿತಿ ನೀಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೨೯ (೩೫೫೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಒಂದೇ ಇಲಾಖೆಯಲ್ಲಿ ನಿರಂತರವಾಗಿ ೫ ವರ್ಷ ಹಾಗೂ ೫ ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಮುಂದುವರೆದಿರುವ ಅಧಿಕಾರಿ/ನೌಕರರ ವೃಂದ ಹಾಗೂ ಇಲಾಖೆವಾರು ಮಾಹಿತಿಯನ್ನು ಒದಗಿಸುವುದು;

(ಆ) ಈ ರೀತಿ ಒಂದೇ ಇಲಾಖೆಯಲ್ಲಿ ೫ ವರ್ಷಗಳಿಗಿಂತ ಹೆಚ್ಚಿನ ಅವಧಿಗೆ ನಿರಂತರ ಒಬ್ಬರೇ ನೌಕರರು ಮುಂದುವರೆದಲ್ಲಿ ಇತರರಿಗೆ ಅವಕಾಶ ತಪ್ಪಿಸಿದಂತಾಗುವುದಿಲ್ಲವೇ;

(ಇ) ಹಾಗಿದ್ದಲ್ಲಿ, ಈ ಪ್ರವೃತ್ತಿಯನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು;

(ಈ) ಶಿಕ್ಷಣ ಇಲಾಖೆಯಲ್ಲಿ ಜಾರಿಯಲ್ಲಿರುವಂತೆ ಕೌನ್ಸಿಲಿಂಗ್ ವ್ಯವಸ್ಥೆಯನ್ನು ಕರ್ನಾಟಕ ಸರ್ಕಾರದ ಸಚಿವಾಲಯದ ನೇಮಕದಲ್ಲಿ ಜಾರಿ ತರಲು ಸರ್ಕಾರ ಚಿಂತಿಸುತ್ತಿದೆಯೇ?

## ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಿಗೆ ನೀಡಿದ ಅನುದಾನ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೩೦ (೩೫೮೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ೩೭೧(ಜೆ) ತಿದ್ದುಪಡಿ ಜಾರಿಗೆ ಬಂದಾಗಿನಿಂದ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಜಿಲ್ಲೆಗಳಿಗೆ ಒದಗಿಸಲಾದ ಅನುದಾನ ಎಷ್ಟು; (ವರ್ಷವಾರು ಕಾಮಗಾರಿವಾರು ವಿವರ ಒದಗಿಸುವುದು)

(ಆ) ಈ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಬಾಕಿ ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿಯೇ ಪೂರ್ಣಗೊಳಿಸಲು ತೆಗೆದುಗೊಂಡಿರುವ ಕ್ರಮಗಳೇನು?

## ಬೀದರ್ ಜಿಲ್ಲೆಯಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೩೧ (೩೫೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನ ಅಕ್ಟೋಬರ್ ತಿಂಗಳ ಕೊನೆಯವರೆಗೆ

ನಡೆದ ಮನೆಗಳ್ಳತನ/ಸರ ವಿವಿಧ ಕಳ್ಳತನ ಪ್ರಕರಣಗಳ ಸಂಖ್ಯೆ ಎಷ್ಟು; (ಠಾಣಾಗಳವಾರು, ತಾಲ್ಲೂಕುಗಳವಾರು ವಿವರವಾದ ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಇದುವರೆಗೂ ಪತ್ತೆ ಹಚ್ಚಿ ವಾರಸುದಾರರಿಗೆ/ಮಾಲೀಕರಿಗೆ ನೀಡಿರುವ ವಸ್ತುಗಳ ಪ್ರಕರಣಗಳ ಸಂಖ್ಯೆ ಎಷ್ಟು; ಮತ್ತು ಇದುವರೆವಿಗೂ ಪತ್ತೆ ಹಚ್ಚದೇ ಇರುವ ಪ್ರಕರಣಗಳೆಷ್ಟು; ಹಾಗೆ ಕೆಲವು ಪ್ರಕರಣಗಳು ಪತ್ತೆ ಹಚ್ಚದೇ ಇರಲು ಕಾರಣಗಳೇನು? (ವಿವರ ಒದಗಿಸುವುದು)

## ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಬಗ್ಗೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೩೨ (೩೫೬೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ;

(ಆ) ಸದರಿ ಕಾಲೇಜುಗಳಲ್ಲಿ ಎಷ್ಟು ಉಪನ್ಯಾಸಕರ ಹುದ್ದೆಗಳು ಖಾಲಿಯಿವೆ; (ಕಾಲೇಜುವಾರು ವಿವರ ನೀಡುವುದು)

(ಇ) ಖಾಲಿಯಾಗಿರುವ ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಬೆಂಗಳೂರಿನ ಬಸವೇಶ್ವರ ವೃತ್ತದಿಂದ ಹೆಬ್ಬಾಳದವರೆವಿಗೆ ಮೇಲುರಸ್ತೆ ನಿರ್ಮಾಣ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೩೩ (೩೫೬೫) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿನ ವಾಹನಗಳ ಸಂಚಾರ ಹೆಚ್ಚಾಗಿರುವ ಪ್ರಯುಕ್ತ ಹೆಚ್ಚು ಮೇಲುರಸ್ತೆಗಳನ್ನು ನಿರ್ಮಿಸಲು ಸರ್ಕಾರವು ಕ್ರಮಗಳನ್ನು ಕೈಗೊಳ್ಳುವುದೇ;

(ಆ) ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ; (ವಿವರಗಳನ್ನು ಒದಗಿಸುವುದು)

(ಇ) ಬಸವೇಶ್ವರ ವೃತ್ತದಿಂದ ಹೆಬ್ಬಾಳದವರೆವಿಗೆ ಮೇಲುರಸ್ತೆಯನ್ನು ನಿರ್ಮಿಸಲಾಗುವುದೇ;

(ಈ) ಹಾಗಿದ್ದಲ್ಲಿ, ಯಾವಾಗ? ಯೋಜನೆಯ ಪೂರ್ಣ ವಿವರಗಳನ್ನು ನೀಡುವುದು?

## ಬೆಂಗಳೂರಿನಲ್ಲಿ ಅತ್ಯಾಧುನಿಕ ಕಸಾಯಿಖಾನೆ ನಿರ್ಮಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೩೪ (೩೫೬೬) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರದಲ್ಲಿನ ಅನಿಯಂತ್ರಿತ ಮಾಂಸ ಮಾರಾಟ ಮಾಡುತ್ತಿರುವ ಕಾರಣ ಅನಾರೋಗ್ಯಕರ ವಾತಾವರಣ ನಿರ್ಮಾಣವಾಗಿ ರೋಗ–ರುಜಿನಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಬೆಂಗಳೂರಿನಲ್ಲಿ ಅತ್ಯಾಧುನಿಕ ಕಸಾಯಿಖಾನೆಯನ್ನು ನಿರ್ಮಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು;

(ಇ) ಅನಿಯಂತ್ರಿತ ಮಾಂಸ ಮಾರಾಟ ಮಾಡುವುದನ್ನು ತಡೆಗಟ್ಟಿ ಪರಿಸರ ನೈರ್ಮಲ್ಯವನ್ನು ಕಾಪಾಡುವಲ್ಲಿ ಸರ್ಕಾರವು ಕೈಗೊಳ್ಳುವ ಕ್ರಮಗಳೇನು;

(ಈ) ಈ ನಿಟ್ಟಿನಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ "ವಿಶೇಷ ಆದ್ಯತೆ" ಮೇರೆಗೆ ಕ್ರಮಗಳನ್ನು ಕೈಗೊಳ್ಳಲಾಗುವುದೇ?

## ಬೆಂಗಳೂರು ಮಹಾನಗರದಲ್ಲಿ ಮಲ್ಟಿಲೆವೆಲ್ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಡಾ|| ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೩೫ (೩೫೬೪) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಾಹನಗಳ ದಟ್ಟಣೆ ಗಣನೀಯವಾಗಿ ಹೆಚ್ಚಾಗಿದ್ದು, ಪಾರ್ಕಿಂಗ್ ಸ್ಥಳದ ಕೊರತೆಯಿಂದಾಗಿ ಸಾರ್ವಜನಿಕರು ತೊಂದರೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ನಾಗರಿಕರಿಗೆ ಹೆಚ್ಚಿನ ಪಾರ್ಕಿಂಗ್ ವ್ಯವಸ್ಥೆ ಒದಗಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ;

(ಇ) ಆಧುನಿಕ ತಂತ್ರಜ್ಞಾನ ಅಳವಡಿಸಿ ಕಡಿಮೆ ಸ್ಥಳದಲ್ಲಿ (ಮಲ್ಟಿಲೆವೆಲ್) ಒಂದರ ಮೇಲೆ ಇನ್ನೊಂದರಂತೆ ಪಾರ್ಕಿಂಗ್ ವ್ಯವಸ್ಥೆಯನ್ನು ಜನದಟ್ಟಣೆ ಇರುವ ಸ್ಥಳಗಳಲ್ಲಿ ರೂಪಿಸಲಾಗುವುದೇ?

## ನೌಕರರ ಜೇಷ್ಠತಾ ಪಟ್ಟಿ ತಯಾರಿಸುವಲ್ಲಿ ಅಕ್ರಮವಾಗುತ್ತಿರುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೩೬ (೩೫೮೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೌಕರರ ಜೇಷ್ಠತಾ ಪಟ್ಟಿಯನ್ನು ಇಲಾಖೆಯ "ಮುಖ್ಯಸ್ಥರುಗಳು" ವರ್ಷವಾರು ಇಲಾಖೆಯ ಅಂತರ್ಜಾಲ ತಾಣದಲ್ಲಿ ಪ್ರಕಟಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ತೆಗೆದುಕೊಂಡ ಕ್ರಮಗಳೇನು;

(ಆ) ಎಲ್ಲಾ ಇಲಾಖೆಯ :"ಮುಖ್ಯಸ್ಥರುಗಳಿಗೆ" ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಆದೇಶ ನೀಡಲಾಗಿದೆಯೇ; ಗ್ರೂಪ್ ಎ.ಬಿ.ಸಿ.ಡಿ. ನೌಕರರ ಜೇಷ್ಠತಾ ಪಟ್ಟಿಯನ್ನು ವರ್ಷವಾರು ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು ಇರುವ ತೊಂದರೆಗಳೇನು;

(ಇ) ಜೇಷ್ಠತಾ ಪಟ್ಟಿ ನಿಗದಿಪಡಿಸುವಲ್ಲಿ ಇಲಾಖೆಯ "ಮುಖ್ಯಸ್ಥರುಗಳು" ಅಕ್ರಮ ಎಸಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಗ್ರೂಪ್ ಸಿ. ಡಿ. ನೌಕರರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಕರಾವಳಿ ಜಿಲ್ಲೆಗಳಲ್ಲಿ ಭೂಗತ ಜಗತ್ತಿನವರು ಹೆಚ್ಚುತ್ತಿರುವ ಗ್ಯಾಂಗ್‌ವಾರುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೯೩೭ (೩೪೫೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಗಳಲ್ಲಿ ಭೂಗತ ಜಗತ್ತಿನವರ ಹೆಚ್ಚುತ್ತಿರುವ ಗ್ಯಾಂಗ್‌ವಾರುಗಳು ಹಾಗೂ ನಡೆದ ಕೊಲೆಗಳ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು;

(ಆ) ೨೦೧೪-೧೫ ರಿಂದ ಇಲ್ಲಿಯವರೆಗೆ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ನಡೆದ ಕೊಲೆಗಳ ಸಂಖ್ಯೆ ಎಷ್ಟು; ಇದರಲ್ಲಿ ಭಾಗಿಯಾದ ಆರೋಪಿಗಳ ಸಂಖ್ಯೆ ಎಷ್ಟು; ಭೂಗತ ಚಟುವಟಿಕೆ ನಡೆಸುತ್ತಿರುವ ಕೈವಾಡದಿಂದ ನಡೆದ ಕೊಲೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೨೦೧೪ ರಿಂದ ಇಲ್ಲಿಯವರೆಗೆ ನಡೆದ ನೈತಿಕ ಪೊಲೀಸಗಿರಿ ಪ್ರಕರಣಗಳು ಎಷ್ಟು; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## 10 ವರ್ಷಕ್ಕೂ ಮೇಲ್ಪಟ್ಟ ಸೇವಾವಧಿಯ 64 ಮಂದಿ ಪೌರಕಾರ್ಮಿಕರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೯೩೮ (೩೫೯೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಗಳೂರು ಮಹಾನಗರ ಪಾಲಿಕೆಯಲ್ಲಿ ೦೧-೦೫-೨೦೦೦ ರಂದು ೧೦ ವರ್ಷಕ್ಕೂ ಮೇಲ್ಪಟ್ಟ ಸೇವಾವಧಿಯ ೬೪ ಮಂದಿ ಪೌರಕಾರ್ಮಿಕರನ್ನು ಖಾಯಂಗೊಳಿಸಿ ಆದೇಶವನ್ನು ಜಾರಿಗೊಳಿಸಲಾಗಿದೆಯೇ; ಇಲ್ಲದಿದ್ದರೆ, ಕಾರಣವೇನು;

(ಆ) ೬೪ ಮಂದಿಯಲ್ಲಿ ೧೨ ಮಂದಿ ಮೃತಪಟ್ಟಿದ್ದು, ಅವರ ಕುಟುಂಬಗಳಿಗೆ ಅನುಕಂಪದ ಆಧಾರದಲ್ಲಿ ನೌಕರಿಯನ್ನು ನೀಡಲಾಗಿದೆಯೇ; ಕುಟುಂಬಗಳಿಗೆ ಶಾಸನಬದ್ಧ ಸೇವಾವಧಿಯಂತೆ ಪರಿಹಾರ ನೀಡಲಾಗಿದೆಯೇ;

(ಇ) ಪೌರಕಾರ್ಮಿಕರನ್ನು ಮಧ್ಯವರ್ತಿಗಳ ಆಧಾರದಲ್ಲಿ ನೇಮಕ ಮಾಡುವುದನ್ನು ನಿಲ್ಲಿಸಲು ಇಲಾಖೆ ಕೈಗೊಂಡ ಕ್ರಮಗಳೇನು;

(ಈ) ೨೦೧೪–೧೫ರಲ್ಲಿ ಪೌರಕಾರ್ಮಿಕರಿಗೆ ಮನೆ ನಿವೇಶನಗಳನ್ನು ನೀಡಲು ಬಿಡುಗಡೆಯಾಗಿರುವ ಅನುದಾನ ಎಷ್ಟು; ನಿಖರವಾಗಿ ಜಾರಿಗೊಳಿಸಿದ ಯೋಜನೆಗಳಾವುವು;

(ಉ) ಪೌರಕಾರ್ಮಿಕರಿಗೆ ರಕ್ಷಣೆ ನೀಡಲು ವಿಮಾ ಯೋಜನೆ ಜಾರಿಗೆ ತರಲಾಗಿದೆಯೇ? (ವಿವರ ನೀಡುವುದು)

## ಮಂಗಳೂರು ನಗರದಲ್ಲಿರುವ ಜೈಲನ್ನು ಬಾಳೆಕುಣಿ ಪ್ರದೇಶಕ್ಕೆ ಸ್ಥಳಾಂತರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೯೩೯ (೩೫೯೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದಲ್ಲಿರುವ ಜೈಲನ್ನು ಬಾಳೆಕುಣಿ ಪ್ರದೇಶಕ್ಕೆ ಸ್ಥಳಾಂತರಿಸುವ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು; ವಿಳಂಬಕ್ಕೆ ಕಾರಣಗಳೇನು;

(ಆ) ಜೈಲಿನಲ್ಲಿ ಮೊಬೈಲ್ ಜಾಮರ್‌ಗಳನ್ನು ಅಳವಡಿಸದೇ ಇರಲು ಕಾರಣಗಳೇನು; ಜೈಲಿನ ಒಳಭಾಗದಲ್ಲಿ ಕೊಲೆಗಳಿಗೆ ಭಾಗಿಯಾದವರಿಗೆ ಮಾರಕ ಆಯುಧಗಳನ್ನು ನೀಡಿದವರು ಯಾರು; ಈ ಬಗ್ಗೆ ಕೈಗೊಂಡ ಕ್ರಮಗಳೇನು;

(ಇ) ಜೈಲುಗಳ ಒಳಗಡೆ ಧರ್ಮಕ್ಕೆ ಸಂಬಂಧಪಟ್ಟ ಪೈಟಿಂಗ್‌ಗಳನ್ನು ಗೋಡೆಗಳಲ್ಲಿ ಚಿತ್ರೀಕರಿಸುವುದು ಸರಿಯೇ; ಈ ಬಗ್ಗೆ ಇಲಾಖೆ ಮಾಹಿತಿ ಪಡೆಯಲಾಗಿದೆಯೇ; ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು;

(ಈ) ನಿಗದಿತ ಆರೋಪಿಗಳಿಗಿಂತ ಹೆಚ್ಚಿನ ಆರೋಪಿಗಳನ್ನು ಜೈಲಿನಲ್ಲಿ ಇಡುವ ಸಂದರ್ಭದಲ್ಲಿ ಉಂಟಾಗುವ ಅನಾಹುತಗಳಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು;

(ಉ) ಜೈಲಿನಲ್ಲಿ ಮೃತಪಟ್ಟ ಆರೋಪಿಗಳಿಗೆ ಪರಿಹಾರ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ ಯಾವ ಕಾರಣಕ್ಕಾಗಿ? (ವಿವರ ನೀಡುವುದು)

## ವಾಲ್‌ಮೆನ್‌ಗಳನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೯೪೦ (ಇ೫೯೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದಲ್ಲಿ ನೀರು ಸರಬರಾಜು ವಿಭಾಗದಲ್ಲಿ ವಾಲ್‌ಮೆನ್‌ಗಳಾಗಿ (Walmen) ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಹಾಗಿದ್ದಲ್ಲಿ, ಇವರ ಸೇವೆಯನ್ನು ಖಾಯಂಗೊಳಿಸಲಾಗಿದೆಯೇ;

(ಆ) ನೀರು ಸರಬರಾಜು ಮಾಡುವ ವಾಲ್‌ಮೆನ್‌ಗಳನ್ನು ಖಾಯಂಗೊಳಿಸಬೇಕೆಂದು ನಗರ ಪಾಲಿಕೆ ನಿರ್ಣಯ ಕೈಗೊಂಡಿದ್ದರು ಇಲಾಖೆ ಈ ಬಗ್ಗೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಮಂಗಳೂರು ನಗರಪಾಲಿಕೆಯ ಈಜುಕೊಳದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವರು ಖಾಯಂ ನೌಕರರೇ; ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ; ಖಾಯಂಗೊಳಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಮಂಗಳೂರು ನಗರದ ಮಹಾಕಾಳಿಪಡ್ಪುನಲ್ಲಿರುವ ಪೌರಕಾರ್ಮಿಕರಿಗೆ ವಸತಿ ಗೃಹಗಳ ನಿರ್ಮಾಣ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೯೪೧ (೩೫೯೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದ ಮಹಾಕಾಳಿಪಡ್ಪುವಿನಲ್ಲಿರುವ ಪೌರಕಾರ್ಮಿಕರ ಕಟ್ಟಡ ಶಿಥಿಲಗೊಂಡು ವಾಸಿಸಲು ಅಪಾಯಕಾರಿ ಪರಿಸ್ಥಿತಿಯಲ್ಲಿರುವುದರಿಂದ ಇಲಾಖೆ ಈ ಬಗ್ಗೆ ಹೊಸ ಮನೆಗಳನ್ನು ರಚಿಸಲು ಭರವಸೆ ನೀಡಿದ್ದರೂ, ಈಡೇರಿಸದೇ ಇರಲು ಕಾರಣಗಳೇನು;

(ಆ) ರಾಜ್ಯದಲ್ಲಿರುವ ಪೌರಕಾರ್ಮಿಕರಿಗೆ ಎಷ್ಟು ಮನೆ/ ನಿವೇಶನಗಳನ್ನು ಒದಗಿಸಲಾಗಿದೆ; (ವಿವರ ನೀಡುವುದು)

(ಇ) ಪೌರಕಾರ್ಮಿಕರಿಗೆ ಮನೆ/ನಿವೇಶನ ನೀಡಲು ಮಂಗಳೂರು ನಗರದಲ್ಲಿ ಸ್ಥಳ ಗುರುತಿಸಲಾಗಿದೆಯೇ; ವಸತಿ ಗೃಹಗಳ ಪುನರ್‌ನಿರ್ಮಾಣ ಮಾಡಲು ಇಲಾಖೆ ಕೈಗೊಂಡ ಕ್ರಮಗಳೇನು?

## ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಕಛೇರಿಗಳು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೪೨ (೩೫೯೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಾಡಿಗೆ ಕಟ್ಟಡದಲ್ಲಿ ಯಾವ ಯಾವ ಇಲಾಖೆಗಳು, ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ; (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

(ಆ) ಎಷ್ಟು ವರ್ಷಗಳಿಂದ ಈ  ಕಛೇರಿಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ; (ಜಿಲ್ಲಾವಾರು ಇಲಾಖಾವಾರು ಮಾಹಿತಿ ನೀಡುವುದು)

(ಇ) ಪ್ರತಿ ಮಾಹೆ ಈ ಕಛೇರಿಗಳಿಗೆ ಪಾವತಿಸುತ್ತಿರುವ ಬಾಡಿಗೆ ಮೊತ್ತ ಎಷ್ಟು; (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

(ಈ) ಸ್ವಂತ ಕಟ್ಟಡಗಳಿದ್ದರೂ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಛೇರಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು, ಇಲಾಖಾವಾರು ವಿವರ ನೀಡುವುದು)

## ಜ್ಯೋತಿ ಸಂಜೀವಿನಿ ಯೋಜನೆ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೪೩ (೩೫೯೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನಲ್ಲಿ ಸರ್ಕಾರದ ಜ್ಯೋತಿ ಸಂಜೀವಿನಿ ಯೋಜನೆಯ ಅಡಿಯಲ್ಲಿ ಸೌಲಭ್ಯ ಪಡೆದವರ ಸಂಖ್ಯೆ ಎಷ್ಟು; ಯಾವ ಯಾವ ಆಸ್ಪತ್ರೆಗಳಲ್ಲಿ ಯಾವ ಯಾವ ಸೌಲಭ್ಯಗಳಿರುತ್ತವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಉಚಿತವಾಗಿ ನೀಡುತ್ತಿರುವ ಈ ಯೋಜನೆಗೆ ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ನಿಗಧಿಪಡಿಸಿರುವ ಹಣ ಎಷ್ಟು;

(ಇ) ಆರೋಗ್ಯ ಮಿತ್ರರ ನೇಮಕಾತಿ, ಆಸ್ಪತ್ರೆಯನ್ನು ನಿಗಧಿಪಡಿಸುವಂತಹ ಕಾರ್ಯಗಳಿಗೆ ಸರ್ಕಾರ ಯಾವ ಮಾನದಂಡ ನಿಗಧಿಪಡಿಸಿದೆ; (ವಿವರ ನೀಡುವುದು)

(ಈ) ಸರ್ಕಾರದ ಎಲ್ಲಾ ಇಲಾಖೆಗಳ, ಎಲ್ಲ ಶ್ರೇಣಿಯ ನೌಕರರಿಗೂ ಒಂದೇ ರೀತಿಯ ಅನುಕೂಲತೆಗಳನ್ನು ಯೋಜನೆಯಲ್ಲಿ ಕಲ್ಪಿಸಿದೆಯೇ?

## ಶಿವಮೊಗ್ಗ ಜಿಲ್ಲೆಯಲ್ಲಿನ ಮುಜರಾಯಿ ದೇವಸ್ಥಾನಗಳು

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೪೪ (೩೫೫೫) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗದಲ್ಲಿನ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮುಜರಾಯಿ ದೇವಾಲಯಗಳಲ್ಲಿ ರಚಿಸಿರುವ ಆಡಳಿತ ಮಂಡಳಿಗಳ ಸದಸ್ಯರು ಹಾಗೂ ಆಡಳಿತಾಧಿಕಾರಿಗಳು ಯಾರು; (ತಾಲ್ಲೂಕುವಾರು ಹೆಸರು ಹಾಗೂ ವಿಳಾಸ ಸಹಿತ ವಿವರ ನೀಡುವುದು)

(ಇ) ಮುಜರಾಯಿ ದೇವಾಲಯಗಳಲ್ಲಿ ಭಕ್ತಾದಿಗಳಿಂದ ಯಾವ ಯಾವ ರೂಪದಲ್ಲಿ ಹಣವನ್ನು ಸಂಗ್ರಹ ಮಾಡುಲಾಗುತ್ತಿದೆ; ಅದರ ಲೆಕ್ಕ ಪತ್ರಗಳನ್ನು ಯಾವ ರೀತಿ ನಿರ್ವಹಿಸಲಾಗುತ್ತಿದೆ? (ವಿವರ ನೀಡುವುದು)

## ರಾಜ್ಯದಲ್ಲಿನ ಮುಜರಾಯಿ ದೇವಸ್ಥಾನಗಳ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೪೫ (೩೫೫೬) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ  ಯಾವ ಯಾವ ವರ್ಗದ ಶ್ರೇಣಿಯ ಖಾಸಗೀ ದೇವಾಲಯಗಳನ್ನು ಸರ್ಕಾರ ತನ್ನ ಸುಪರ್ದಿಗೆ ತೆಗೆದುಕೊಂಡಿದೆ; (ಜಿಲ್ಲಾವಾರು ವಶಪಡಿಸಿಕೊಂಡಿರುವ ದೇವಸ್ಥಾನಗಳ ಹೆಸರು ಸಹಿತ ವಿವರ ನೀಡುವುದು)

(ಆ) ವಶಪಡಿಸಿಕೊಳ್ಳಲು ಕಾರಣಗಳೇನು; ಇವುಗಳ ವಾರ್ಷಿಕ ಆದಾಯ ಎಷ್ಟು; ಆದಾಯದ ಮೂಲ ಯಾವುದು; ಆ ಪೈಕಿ ವಿವಾದ ಭ್ರಷ್ಟಾಚಾರ, ವಂಚನೆ ಪ್ರಕರಣಗಳು ಬೆಳಕಿಗೆ ಬಂದಿರುವ ದೇವಾಲಯಗಳು ಯಾವುವು; (ವಿವರ ನೀಡುವುದು)

(ಇ) ಸದರಿ ದೇವಾಲಯಗಳು ಖಾಸಗೀ ಒಡೆತನದಲ್ಲಿರುವುದೇ ಅಥವಾ ವೈಯುಕ್ತಿಕ ಟ್ರಸ್ಟ್ ರಚಿಸಿಕೊಳ್ಳಲಾಗಿತ್ತೆ; ಸುರ್ಪದಿಗೆ ಪಡೆದ ನಂತರ ಸದರಿ ದೇವಾಲಯಗಳಿಗೆ ಆಡಳಿತಾಧಿಕಾರಿಯನ್ನು ಸರ್ಕಾರ ನೇಮಕ ಮಾಡಿದೆಯೇ;

(ಈ) ಸರ್ಕಾರ ವಶಕ್ಕೆ ಪಡೆದ ನಂತರ ಅಲ್ಲಿ ಬರುತ್ತಿರುವ ಆದಾಯದ ಪ್ರಮಾಣ ಎಷ್ಟು; ಇದನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಲಾಗುತ್ತಿದೆ; (ವಿವರ ಒದಗಿಸುವುದು)

(ಉ) ತಪ್ಪಿತಸ್ಥ ಆಡಳಿತ ಮಂಡಳಿಯವರ ಅಥವಾ ಟ್ರಸ್ಟ್‌ಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಮಹಾನಗರ ಪಾಲಿಕೆಗೆ ವಿಶೇಷ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೪೬ (೩೬೦೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಅಭಿವೃದ್ಧಿಗೆ ರಾಜ್ಯ ಸರ್ಕಾರವು ವಿಶೇಷ ಅನುದಾನವಾಗಿ ರೂ. ೧೦೦.೦೦ ಕೋಟಿಗಳನ್ನು ಬಿಡುಗಡೆಗೊಳಿಸುವುದಾಗಿ ಆಶ್ವಾಸನೆ ನೀಡಿದ್ದು ಈ ಅನುದಾನವು ಹುಬ್ಬಳಿ ಮಹಾನಗರ ಪಾಲಿಕೆಗೆ

ಬಿಡುಗಡೆಯಾಗಿದೆಯೇ; ಬಿಡುಗಡೆಯಾಗಿದ್ದಲ್ಲಿ ಯಾವಾಗ;

(ಆ) ಬಿಡುಗಡೆಯಾಗದಿದ್ದಲ್ಲಿ, ಕಾರಣಗಳೇನು; ಸರ್ಕಾರವು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು;

## ಕಲಬುರಗಿ ಯಾದಗಿರಿ ಜಿಲ್ಲೆಯ ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೪೭ (೩೬೧೦) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿಗೆ ಕೈಗೊಂಡ ಕ್ರಮಗಳೇನು;

(ಆ) ಈ ದೇವಸ್ಥಾನಗಳಿಗೆ ೨೦೧೪–೧೫ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಈ ಅನುದಾನ ಸಂಪೂರ್ಣ ಬಳಕೆಯಾಗಿದೆಯೇ;

(ಇ) ಇಲ್ಲಿಗೆ ಬರುವ ಯಾತ್ರಿಕರಿಗೆ ಮೂಲಭೂತ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಹಿಂದುಳಿದ ಹೈದ್ರಾಬಾದ್ ಕರ್ನಾಟಕದ ಸರ್ಕಾರಿ ಹುದ್ದೆಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೪೮ (೩೬೦೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಸರ್ಕಾರಿ ಹುದ್ದೆಗಳು ಖಾಲಿಯಿರುತ್ತವೆ; (ಇಲಾಖಾವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಆ) ಕಲಬುರಗಿಯಲ್ಲಿ ಕಳೆದ ಬಾರಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಾನ್ಯ ಮುಖ್ಯ ಮಂತ್ರಿಗಳು ೪-೫ ತಿಂಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವುದಾಗಿ ಘೋಷಣೆ ಮಾಡಿದ್ದರೂ ಸಹ ಇಲ್ಲಿಯವರೆಗೂ ಹುದ್ದೆಗಳನ್ನು ಭರ್ತಿ ಮಾಡದೆ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು;

(ಇ) ಇಲ್ಲಿಯವರೆಗೂ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗಿರುತ್ತದೆ ಮತ್ತು ಈಗ ಎಷ್ಟು ಹುದ್ದೆಗಳು ಖಾಲಿ ಇರುತ್ತವೆ;

(ಈ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಈ ಭಾಗದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಳ್ಳುತ್ತಿರುವುದಲ್ಲದೆ, ಉದ್ಯೋಗಾಕಾಂಕ್ಷಿಗಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಹೈದ್ರಾಬಾದ್-ಕರ್ನಾಟಕ ಭಾಗದ ಜನರು ಮತ್ತೆ ಹೋರಾಟದ ಹಾದಿ ಹಿಡಿಯುವ ಮುನ್ನ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ; ಇದಕ್ಕೆ ಇನ್ನು ಎಷ್ಟು ದಿನ ಬೇಕಾಗುವುದು?

## ಪೊಲೀಸ್ ಕಮೀಷನರ್ ಆಯುಕ್ತಾಲಯದ ಸ್ಥಾಪನೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೪೯ (೩೬೦೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ನಗರದಲ್ಲಿ ಪೊಲೀಸ್ ಕಮೀಷನರ್ ಆಯುಕ್ತಾಲಯ ಸ್ಥಾಪನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಕಲಬುರಗಿ ಮತ್ತು ಯಾದಗಿರಿಯಲ್ಲಿ ಹೊಸ ಪೊಲೀಸ್ ಠಾಣೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಇದ್ದರೆ, ಯಾವ ಯಾವ ಸ್ಥಳಗಳಲ್ಲಿ ಸ್ಥಾಪನೆ ಮಾಡಲಾಗುವುದು? (ತಾಲ್ಲೂಕುವಾರು ವಿವರ ನೀಡುವುದು)

## ಬೆಂಗಳೂರು ಮೆಟ್ರೋ ರೈಲ್ವೆ ನಿಗಮದಲ್ಲಿ ಅಧಿಕಾರಿಗಳಿಂದ ಅಧೀನ ಸಿಬ್ಬಂದಿಗಳಿಗೆ ಕಿರುಕುಳ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೫೦ (೩೬೧೬) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲ್ವೆ ನಿಗಮದಲ್ಲಿ (ಬಿ.ಎಂ.ಆರ್.ಸಿ.ಎಲ್.) ಅಧೀನ ಸಿಬ್ಬಂದಿಗಳಿಗೆ ಕಿರುಕುಳ ನೀಡಿದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; (ಸಿಬ್ಬಂದಿವಾರು ಮಾಹಿತಿ ನೀಡುವುದು)

(ಆ) ಬೇರೆ ಬೇರೆ ಇಲಾಖೆ ಹಾಗೂ ನಿಗಮಗಳಿಂದ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಂದ ಅಧೀನ ಸಿಬ್ಬಂದಿಗಳ ಮೇಲೆ ಅನವಶ್ಯಕ ಹಾಗೂ ಉದ್ದೇಶಪೂರ್ವಕವಾಗಿ ಕಿರುಕುಳ ಉಂಟಾಗುತ್ತಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ಸಿಬ್ಬಂದಿವರ್ಗದವರು ನೆಮ್ಮದಿಯಿಂದ ಕಾರ್ಯ–ನಿರ್ವಹಿಸುವ ವಾತಾವರಣ ನಿರ್ಮಿಸಲು ನಿಗಮವು ಕೈಗೊಳ್ಳಲಿರುವ ಕ್ರಮಗಳು ಯಾವುವು;

(ಈ) ನಿಗಮದಲ್ಲಿ ದೂರು ನಿವಾರಣಾ ಸಮಿತಿ ರಚನೆಯಾಗಿದೆಯೇ;

(ಉ) ಹಾಗಿದ್ದಲ್ಲಿ, ಎಷ್ಟು ಸಲ ಸಭೆ ನಡೆಸಲಾಗಿದೆ; ಎಷ್ಟು ಸಿಬ್ಬಂದಿಗಳ ಸಮಸ್ಯೆಗಳನ್ನು ಪರಿಹರಿಸಲಾಗಿದೆ?

## ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೫೧ (೩೬೨೧) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿರುವ ದೇಸ್ಥಾನಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ದೇವಸ್ಥಾನಗಳಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು;

(ಇ) ಈ ದೇವಸ್ಥಾನಗಳ ನಿರ್ವಹಣೆಗೆ ಸರ್ಕಾರ ವೆಚ್ಚ ಮಾಡಿದ ಹಣ ಎಷ್ಟು;

(ಈ) ಈ ದೇವಸ್ಥಾನಗಳ ಅರ್ಚಕರಿಗೆ ಪ್ರತಿ ತಿಂಗಳು ನೀಡುತ್ತಿರುವ ತಸ್ಥೀಕ್ ಮೊತ್ತವೆಷ್ಟು;

(ಉ) ತಸ್ಥೀಕ್ ಮೊತ್ತವನ್ನು ಕಡಿತಗೊಳಿಸಲು ಉದ್ದೇಶಿಸಲಾಗಿದೆಯೇ?

## ಪ್ರಾಂಶುಪಾಲರ ಹುದ್ದೆ ಭರ್ತಿ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೫೨ (೩೬೨೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುವುದರಿಂದ ಆಡಳಿತಾತ್ಮಕ ತೊಂದರೆಗಳು ಉದ್ಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

## ಆಧಾರ್ ಕಾರ್ಡ್ ಪ್ರೋತ್ಸಾಹ ಧನ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೫೩ (೩೬೨೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಆಧಾರ್ ಕಾರ್ಡ್ ವಿತರಣೆಗೆ ಯಾವ ಜಿಲ್ಲೆಗಳನ್ನು ಪೈಲೆಟ್ ಆಧಾರದ ಮೇಲೆ ಆಯ್ಕೆ ಮಾಡಲಾಗಿತ್ತು;

(ಆ) ಈ ಕಾರ್ಡ್‌ಗಳನ್ನು ಪಡೆಯುವ ಬಿ.ಪಿ.ಎಲ್ ಕಾರ್ಡುದಾರರಿಗೆ ಪ್ರತಿ ಕಾರ್ಡಿಗೆ ಪ್ರೋತ್ಸಾಹಧನ ಕೊಡಲು ಅವಕಾಶವಿತ್ತೆ;

(ಇ) ಹಾಗಿದ್ದಲ್ಲಿ, ಎಷ್ಟು ಜನ ಫಲಾನುಭವಿಗಳಿಗೆ ಪ್ರೋತ್ಸಾಹಧನ ನೀಡಲಾಗಿದೆ;

(ಈ) ಪ್ರತಿ ಫಲಾನುಭವಿಗೆ ನೀಡಿದ ಪ್ರೋತ್ಸಾಹಧನ ಎಷ್ಟು; ಇದಕ್ಕೆ ಖರ್ಚು ಮಾಡಿದ ಅನುದಾನ ಎಷ್ಟು?

## ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಅನುದಾನ ಮತ್ತು ಯೋಜನೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೯೫೪ (೩೬೧೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಮಂಜೂರಾದ ಯೋಜನೆಗಳು ಯಾವುವು; (ಇಲಾಖಾವಾರು ವಿವರ ನೀಡುವುದು)

(ಆ) ಸದರಿ ಯೋಜನೆಗಳ ಅಡಿಯಲ್ಲಿ ಕಳೆದ ಐದು ವರ್ಷಗಳಿಂದ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬಿಡುಗಡೆಯಾದ ಅನುದಾನ ಎಷ್ಟು? (ಇಲಾಖಾವಾರು ವರ್ಷವಾರು ವಿವರ ನೀಡುವುದು)

## ಕಲಬುರಗಿ ಹಾಗೂ ಬೆಳಗಾವಿಯಲ್ಲಿ ಪೊಲೀಸ್ ಕಮೀಷನರ್ ಕಛೇರಿ ಪ್ರಾರಂಭಿಸುವ ಬಗ್ಗೆ

ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–

೨೯೫೫ (೩೬೧೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಕಲಬುರಗಿ ಹಾಗೂ ಬೆಳಗಾವಿಯಲ್ಲಿ ಪೊಲೀಸ್ ಕಮೀಷನರ್ ಕಾರ್ಯಾಲಯ ಪ್ರಾರಂಭಿಸುವ ಘೋಷನೆ ಮಾಡಿದೆಯೇ; ಮಾಡಿದ್ದರೆ, ವಿವರ ನೀಡುವುದು;

(ಆ) ರಾಜ್ಯ ಸರ್ಕಾರ ಮಾಡಿರುವ ಸದರಿ ಘೋಷಣೆ ಕಾರ್ಯ ರೂಪಕ್ಕೆ ತರಲಾಗಿದೆಯೇ; (ವಿವರ ನೀಡುವುದು)

(ಇ) ಕಲಬುರಗಿಯಲ್ಲಿ ಪೊಲೀಸ್ ಕಮೀಷನರ್ ಕಾರ್ಯಾಲಯ ಪ್ರಾರಂಭಿಸದೆ ಇರಲು ಕಾರಣಗಳೇನು? (ವಿವರ ನೀಡುವುದು)

## ಕಲಬುರಗಿಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೯೫೬ (೩೬೭೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸುಮಾರು ಒಂದು ದಶಕದಿಂದ ನೆನೆಗುದಿಗೆ ಬಿದ್ದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಲಬುರಗಿಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ಮುಂದಾಗುವುದೆ; ಈ ನಿಟ್ಟಿನಲ್ಲಿ ಈವರೆಗೆ ಕೈಗೊಂಡ ಕ್ರಮದ ವಿವರ ನೀಡುವುದು?

## 371 (ಜೆ) ಅಡಿಯಲ್ಲಿ ನೇರ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಪ್ರಕ್ರಿಯೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೯೫೭ (೩೬೧೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೩೭೧(ಜೆ) ಅಡಿಯಲ್ಲಿ ನೇರ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಪ್ರಕ್ರಿಯೆ ಬಹಳ ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಸದರಿ ನೇರ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವ ಪ್ರಯುಕ್ತ ಹಲವಾರು ಅಭ್ಯರ್ಥಿಗಳ ವಯೋಮಿತಿ ಮೀರಿ ಅನರ್ಹವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು;

(ಇ) ಈ ನಿಟ್ಟಿನಲ್ಲಿ ವಿಶೇಷವಾಗಿ ಹೈದ್ರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ವಯೋಮಿತಿಯಲ್ಲಿ ಸಡಿಲಿಕೆ ಮಾಡಲು ಮುಂದಾಗುವುದೇ? (ವಿವರ ನೀಡುವುದು)

## ಬಳ್ಳಾರಿಯಲ್ಲಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡ ಮತ್ತು ಸಿಬ್ಬಂದಿಗಳ ಕೊರತೆ ಇರುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–**

೨೯೫೮ (೩೬೩೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನಲ್ಲಿ ಬಳ್ಳಾರಿ ಜಿಲ್ಲಾ ಕೇಂದ್ರದಲ್ಲಿ ಮಂಜೂರಾಗಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಇದುವರೆಗೂ ಸ್ವಂತ ಕಟ್ಟಡವಾಗಲೀ ಅಥವಾ ಸ್ಥಳವಾಗಲೀ ಮಂಜೂರಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದೆ ಇರುವುದರಿಂದ, ಸದರಿ ಕಾಲೇಜನ್ನು ಸರ್ಕಾರಿ ಪ್ರಾಥಮಿಕ ಶಾಲೆಯ ೨೦*೩೦ರ ಎರಡು ಕೊಠಡಿಗಳಲ್ಲಿ ನಡೆಸಲಾಗುತ್ತಿದ್ದು, ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚಾಗಿದ್ದು, ಕೂಡಲು ಸಹ ಸ್ಥಳಾವಕಾಶ ಇಲ್ಲದೇ ಇರುವುದರಿಂದ ವಿದ್ಯಾರ್ಥಿನಿಯರ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ;

(ಇ) ಸದರಿ ಕಾಲೇಜಿನಲ್ಲಿ ೩ ವಿಭಾಗಗಳಿದ್ದು, ಮೂಲಭೂತ ಸೌಲಭ್ಯಗಳಾದ ಪೀಠೋಪಕರಣ ಪಾಠೋಪಕರಣಗಳಿಲ್ಲದೆ ಇರುವುದು ಹಾಗೂ ಇನ್ನಿತರ ಹಲವಾರು ಸಮಸ್ಯೆಗಳು ಇರುವುದು ನಿಜವೇ;

(ಈ) ಸದರಿ ಕಾಲೇಜಿನಲ್ಲಿ ಒಬ್ಬ ಖಾಯಂ ಪ್ರಾಂಶುಪಾಲರನ್ನು ಹೊರತುಪಡಿಸಿ ಉಳಿದ ಉಪನ್ಯಾಸಕರು ಖಾಯಂ ನೌಕರರಾಗಿಲ್ಲದಿರುವುದು ಮತ್ತು ಸಿಬ್ಬಂದಿ ಕೊರತೆ ಇರುವುದು ನಿಜವೇ;

(ಉ) ಸರ್ಕಾರವು ಕೂಡಲೇ ಬಳ್ಳಾರಿ ಜಿಲ್ಲೆಯ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡ ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳುವುದೇ? (ಇದಕ್ಕೆ ಎಷ್ಟು ದಿನಗಳ ಕಾಲಾವಕಾಶ ಬೇಕಾಗುವುದು)

## ಪದವೀಧರರ ನಿರುದ್ಯೋಗ ಸಮಸ್ಯೆ ಬಗೆಹರಿಸುವ ಕುರಿತು

**ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) :–**

೨೯೫೯ (೩೬೩೪) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡೂವರೆ ವರ್ಷಗಳಲ್ಲಿ ಸರ್ಕಾರದ ಜ್ವಲಂತ ಸಮಸ್ಯೆಯಾಗಿರುವ ಪದವೀಧರರ ನಿರುದ್ಯೋಗ ಸಮಸ್ಯೆ ಪರಿಹಾರಕ್ಕೆ ಯಾವುದಾದರೂ ಯೋಜನೆಯನ್ನು ರೂಪಿಸಿದೆಯೇ;

(ಆ) ರಾಜ್ಯದ ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ ಸಾಫಿಂಗ್ ಪ್ಯಾಟರ್ನ್ ಪ್ರಕಾರ ಮಂಜೂರಾದ ಹುದ್ದೆಗಳೆಷ್ಟು; ಈ ಹುದ್ದೆಗಳಲ್ಲಿ ಎಷ್ಟು ಜನ ಕಾರ್ಯನಿರ್ವಹಿಸುತ್ತಿರುವರು; (ವಿವರ ನೀಡುವುದು)

(ಇ) ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾದ ಹುದ್ದೆಗಳನ್ನು ವಿಳಂಬ ಮಾಡದೆ ೩ ತಿಂಗಳ ಒಳಗಾಗಿ ನೇಮಕ ಮಾಡಿಕೊಳ್ಳಲು ಸದ್ಯ ಇರುವ ತೊಂದರೆಗಳೇನು; ತೊಂದರೆಗಳು ಇದ್ದಲ್ಲಿ, ನಿಯಮಾವಳಿಗಳಲ್ಲಿ ಸೂಕ್ತ ತಿದ್ದುಪಡಿ ತರಲು ಸಾಧ್ಯವೆ:

(ಈ) ನಿರುದ್ಯೋಗ ಪದವೀಧರರಿಗೆ ಪ್ರತಿ ತಿಂಗಳು ಗೌರವ ಧನ ಅಥವಾ ಸ್ಟೈಫಂಡ್ ನೀಡಿ ಅವರನ್ನು ಸರ್ಕಾರದ ಬೇರೆ ಬೇರೆ ಇಲಾಖೆಗಳಲ್ಲಿ ಸ್ಥಳೀಯವಾಗಿರುವ ಕೆಲಸ ಕಾರ್ಯಗಳಿಗೆ ಬಳಸಿಕೊಂಡು ಸಮಸ್ಯೆಗೆ ಪರಿಹಾರ ಒದಗಿಸಲು ಸಾಧ್ಯವೇ?

## ಮಹಿಳಾ ಪೊಲೀಸ್ ಠಾಣೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬೦ (೩೬೩೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬೆಳಗಾವಿ ಮಹಾನಗರದಲ್ಲಿ ಇರುವ ಮಹಿಳಾ ಪೊಲೀಸ್ ಠಾಣೆಯು ನಿಷ್ಕ್ರಿಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮಹಿಳಾ ಪೊಲೀಸ್ ಠಾಣೆಯು ಸಾರ್ವಜನಿಕರಿಗೆ ಸ್ಪಂದಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು;

(ಇ) ಬೆಳಗಾವಿ ಮಹಾನಗರದಲ್ಲಿರುವ ಮಹಿಳಾ ಪೊಲೀಸ್ ಠಾಣೆಗೆ ಅವಶ್ಯವಿರುವ ಸಿಬ್ಬಂದಿ ನೇಮಕಾತಿ ಮಾಡಲಾಗಿದೆಯೇ; ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; ಖಾಲಿ ಇರುವ ಅವಶ್ಯವಿರುವಷ್ಟು ಮಹಿಳಾ ಪೊಲೀಸ್ ಸಿಬ್ಬಂದಿ ನೇಮಕಾತಿ ಮಾಡಲು ಕೈಗೊಂಡ ಕ್ರಮಗಳೇನು;

(ಈ) ಶಾಲಾ ಕಾಲೇಜುಗಳಲ್ಲಿ ಯುವತಿಯರ ಮೇಲೆ ನಡೆಯುವ ರ್‍ಯಾಗಿಂಗ್, ಲೈಂಗಿಕ ಶೋಷಣೆ ಮುಂತಾದವುಗಳ ಬಗ್ಗೆ ದೂರು ನೀಡಲು ಕಾಲೇಜುಗಳಲ್ಲಿ ಪಿಂಕ್ ಬಾಕ್ಸ್ ಇರುವ ವ್ಯವಸ್ಥೆ ಇದ್ದರೂ ಬೆಳಗಾವಿ ನಗರದ ಕಾಲೇಜುಗಳಲ್ಲಿ ಇವು ಕಾಣುತ್ತಿಲ್ಲದಿರುವುದಕ್ಕೆ ಕಾರಣವೇನು? (ವಿವರ ನೀಡುವುದು)

## ವ್ಯಾಕ್ಸಿನ್ ಡಿಪೋ ಅಭಿವೃದ್ಧಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬೧ (೩೬೪೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಮಹಾನಗರದಲ್ಲಿರುವ 'ವ್ಯಾಕ್ಸಿನ್ ಡಿಪೋ' ಅಭಿವೃದ್ಧಿ ಆಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ 'ವ್ಯಾಕ್ಸಿನ್ ಡಿಪೋ' ಅಭಿವೃದ್ಧಿಗೆ ಸರ್ಕಾರವು ಕೈಗೊಂಡ ಅಭಿವೃದ್ಧಿ ಯೋಜನೆಗಳು ಯಾವುವು;

(ಇ) ಕಳೆದ ೫ ವರ್ಷಗಳಲ್ಲಿ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಈ) ೨೦೧೧ರಲ್ಲಿ ವಿಶ್ವ ಕನ್ನಡ ಸಮ್ಮೇಳನದಲ್ಲಿ ಘೋಷಿಸಿದ ಅಭಿವೃದ್ಧಿ ಕಾಮಗಾರಿಗಳನ್ನು ಸರ್ಕಾರವು ಪೂರ್ಣಗೊಳಿಸಿದೆಯೇ;

(ಉ) ಒಂದು ವೇಳೆ ಅಭಿವೃದ್ಧಿ ಕಾಮಗಾರಿಗಳು ಅಪೂರ್ಣ –ಗೊಂಡಿದ್ದರೆ ಅವುಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು?

## ಮಂಜುನಾಥ ನಗರದ ರಸ್ತೆ ಅವ್ಯವಸ್ಥೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೯೬೨ (೩೬೪೩) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ರಾಜಾಜಿನಗರ ವ್ಯಾಪ್ತಿಯಲ್ಲಿ ಬರುವ ಮಂಜುನಾಥ ನಗರದ ತಿಮ್ಮಯ್ಯ ರಸ್ತೆಯಲ್ಲಿನ ಕಾಡೆ ಆಸ್ಪತ್ರೆಯ ಅಕ್ಕ ಪಕ್ಕದಲ್ಲಿನ ವ್ಯಾಯಾಮ ಶಾಲೆ ಮತ್ತು ಇನ್ನಿತರ ರಸ್ತೆ ಬದಿಯ ಕಟ್ಟಡಗಳಿಗೆ ಮಳೆನೀರಿನ ಚರಂಡಿಯ ಗೋಡೆಯೊಳಗಿನಿಂದ ಕಟ್ಟಡಗಳೊಳಗೆ ಚಕೀಟುಗಟ್ಟಲೆ ನೀರು ಸೋರಿಕೆಯಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸಂಬಂಧ ಪರಿಶೀಲಿಸಿ ಅಲ್ಲಿನ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯನ್ನು ನೀಗಿಸಲಾಗುವುದೇ;

(ಇ) ತತ್‌ಕ್ಷಣಕ್ಕೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು?

## ಉಲ್ಲಾಳ ಕೆರೆ ಅಭಿವೃದ್ಧಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೯೬೩ (೩೬೪೪) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು, ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಉಪಕಾರ್ ಬಡಾವಣೆಗೆ ಹೊಂದಿಕೊಂಡಂತಿರುವ ಉಲ್ಲಾಳು ಕೆರೆಯ ಅಭಿವೃದ್ಧಿ ಕಾರ್ಯ ಸಂಪೂರ್ಣವಾಗಿ ಮುಗಿದಿದೆಯೇ; (ವಿವರ ನೀಡುವುದು)

(ಆ) ಪ್ರಸ್ತುತ ಅಭಿವೃದ್ಧಿ ಕಾರ್ಯ ಅಪೂರ್ಣಗೊಂಡಿರುವ ಪರಿಣಾಮ ಕೆರೆಯಲ್ಲಿ ಕೊಳಚೆ ನೀರು ತುಂಬಿಕೊಂಡು ಸುತ್ತಮುತ್ತಲಿನವರಿಗೆ ವಾಯ ಮಾಲಿನ್ಯದಿಂದಾಗಿ ತೊಂದರೆಯಾಗಿರುವುದು ಹಾಗೂ ಸುತ್ತಲು ಗಿಡ ಗಂಟೆಗಳ ಜೊತೆ ಹುತ್ತ ಬೆಳೆದು ಹಾವುಗಳ ವಾಸ ಸ್ಥಾನವಾಗಿರುವ ಪರಿಣಾಮ, ಇದರ ಸುತ್ತ ಬೆಳಗಿನ ವಾಯು ವಿಹಾರ ಮಾಡುವ ಸಾರ್ವಜನಿಕರಿಗೆ ಭಯದ ವಾತಾವರಣ ಸೃಷ್ಠಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸದರಿ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳಲು ಇರುವ ಅಡೆತಡೆಗಳೇನು? ಪೂರ್ಣಗೊಳಿಸಲು ಬೇಕಾಗುವ ಕಾಲಾವಧಿ ಏನು?

## ಅತಿಥಿ ಉಪನ್ಯಾಸಕರ ವೇತನ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೯೬೪ (೩೬೪೨) ಮಾನ್ಯ ಕಾನೂನು, ಸಂಸದೀಯ ಮತ್ತು ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಕನಿಷ್ಠ ವೇತನವೆಷ್ಟು;

(ಆ) ಅತಿಥಿ ಉಪನ್ಯಾಸಕರ ವೇತವನ್ನು ೨೫೦೦೦/– ರೂಗಳಿಗೆ ಹೆಚ್ಚಿಸಬೇಕೆಂಬ ಬೇಡಿಕೆ ಇರುವುದು ನಿಜವೇ;

(ಇ) ವೇತನವನ್ನು ಹೆಚ್ಚಿಸಿದಲ್ಲಿ, ಸರ್ಕಾರಕ್ಕೆ ಆಗುವ ಹೆಚ್ಚುವರಿ ಹೊರೆ ಎಷ್ಟು;

(ಈ) ವೇತನವನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ನಿಲುವು ಏನು?

## ಶ್ರೀ ಭೋದೇವಿ ಸಹಿತ ಭೂ ವರಾಹನಾಥ ಸ್ವಾಮಿ ದೇವಸ್ಥಾನದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೯೬೫ (೩೬೪೧) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ, ಕೆ.ಆರ್. ಪೇಟೆ ತಾಲ್ಲೂಕು, ಕಲ್ಲಹಳ್ಳಿ ಗ್ರಾಮದಲ್ಲಿ ಶ್ರೀ ಭೂದೇವಿ ಸಹಿತ ಶ್ರೀ ಲಕ್ಷ್ಮೀ ಭೂ ವರಾಹನಾಥ ಸ್ವಾಮಿ ದೇವಸ್ಥಾನವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ನಿರ್ಮಾಣ ಮತ್ತು ಇತಿಹಾಸವೇನು;

(ಆ) ನೂರಾರು ವರ್ಷಗಳಷ್ಟು ಪುರಾತನವಾದ ಈ ದೇವಾಲಯವನ್ನು ವೀಕ್ಷಿಸಲು ಬರುವ ಭಕ್ತಾದಿಗಳ ಹಾಗೂ ಅಲ್ಲಿನ ಅರ್ಚಕರ ಅನುಕೂಲಕ್ಕೆ ಕಳೆದ ಎರಡು ವರ್ಷಗಳಿಂದ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ಬೆಂಗಳೂರು ನಗರದ ಟ್ರಾಫಿಕ್ ಸಿಗ್ನಲ್‌ಗಳಲ್ಲಿನ ಸಿ.ಸಿ.ಟಿವಿ. ಕ್ಯಾಮರ ನಿರ್ವಹಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೯೬೬ (೩೬೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಸಂಚಾರಿ ಸುವ್ಯವಸ್ಥೆ ದೃಷ್ಟಿಯಿಂದ ಟ್ರಾಫಿಕ್ ಸಿಗ್ನಲ್‌ಗಳು ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಅಳವಡಿಸಲಾಗಿರುವ ಸಿ.ಸಿ. ಕ್ಯಾಮರಾಗಳು ಎಷ್ಟು; ಎಲ್ಲೆಲ್ಲಿ ಅಳವಡಿಸಲಾಗಿದೆ;

(ಆ) ವಾರ್ಡ್ ನಂ. ೬೯ರ ಮುನೇಶ್ವರ ಬಡಾವಣೆಯ ರಿಂಗ್ ರಸ್ತೆ ಪಕ್ಕದ ೮೦ ಅಡಿ ೫೦ ಅಡಿ ಸೇರುವ ಜಕ್ಷನ್ ೪ ದಿಕ್ಕುಗಳಿಗೆ ದಾರಿಯಾಗಿದ್ದು ಪಕ್ಕದ ಸ್ಲಂ ಕ್ಲಿಯೇರನ್ಸ್ ಬೋರ್ಡ್ ಫುಟ್‌ಫಾತ್ ಆಟೋ ಗ್ಯಾರೇಜ್‌ನವರು ಸಂಚರಿಸುತ್ತಿರುವುದರಿಂದ ಇಲ್ಲಿ ಹೆಚ್ಚು ಅಪರಾಧಗಳು ನಡೆಯುತ್ತಿರುವುದನ್ನು ತಡೆಯಲು ಸದರಿ ಸರ್ಕಲ್‌ನಲ್ಲಿ ಸಿ.ಸಿ.ಟಿ.ವಿ. ಅಳವಡಿಸಲು ಇಲಾಖೆ ಕೈಗೊಳ್ಳುವ ಕ್ರಮವೇನು;

(ಇ) ಅಳವಡಿಕೆಯ ಬಹುತೇಕ ಸಿ.ಸಿ. ಕ್ಯಾಮರಾಗಳು ಸಮರ್ಪಕ ನಿರ್ವಹಣೆ ವೈಫಲ್ಯದಿಂದ ನಿಷ್ಕ್ರಿಯವಾಗಿರುವುದನ್ನು ಸರ್ಕಾರ ಗಮನಿಸದಿರಲು ಕಾರಣವೇನು;

(ಈ) ಯಾವಾಗ ಕ್ರಮ ಕೈಗೊಂಡು ಸರಿಪಡಿಸಲಾಗುವುದು?

## ರಾಜ್ಯ ಸರ್ಕಾರದ ನಿವೃತ್ತ ನೌಕರರ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೯೬೭ (೩೬೪೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ವಯೋನಿವೃತ್ತಿ ಹಾಗೂ ಸ್ವಯಂ ನಿವೃತ್ತಿ ಪಡೆದ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; (ಇಲಾಖಾವಾರು ವಿವರ ನೀಡುವುದು)

(ಆ) ಇದರಿಂದಾಗಿ ಖಾಲಿಯಾಗಿರುವ ಎಷ್ಟು ಹುದ್ದೆಗಳನ್ನು ಸರ್ಕಾರ ಭರ್ತಿ ಮಾಡಿರುತ್ತದೆ; (ಇಲಾಖಾವಾರು ವಿವರ ನೀಡುವುದು)

(ಇ) ಉಳಿದಿರುವ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು;

(ಈ) ಭರ್ತಿ ಮಾಡಲು ಯಾವ ಮಾನದಂಡ ಉಪಯೋಗಿಸಲಾಗುವುದು?

## ರಾಜ್ಯದಲ್ಲಿನ ಮುಜರಾಯಿ ಇಲಾಖೆಯ ದೇವಸ್ಥಾನಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೯೬೮ (೩೬೫೦) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳ ಸಂಖ್ಯೆ ಎಷ್ಟು; (ದೇವಾಲಯವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಈ ದೇವಾಲಯಗಳ ಅರ್ಚಕರಿಗೆ ನೀಡುತ್ತಿರುವ ಸಂಭಾವನೆ/ ವೇತನ ಎಷ್ಟು; (ವಿವರಗಳನ್ನು ನೀಡುವುದು) ತಸ್ತಿಕ್ ಹಣದ ಬಗ್ಗೆ ಮಾಹಿತಿ ನೀಡುವುದು; ಕಡಿಮೆ ಮಾಡಲು ಕಾರಣಗಳನ್ನು ತಿಳಿಸುವುದು;

(ಇ) ದೇವಾಲಯಗಳ ಆಸ್ತಿ ಆಭರಣಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಮೆಟ್ರೋ ರೈಲು ನಿಗಮದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೯೬೯ (೩೬೪೯) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲು ಕೆಲಸ ಯಾವಾಗಿನಿಂದ ಪ್ರಾರಂಭವಾಯಿತು; ಪೂರ್ಣಗೊಳ್ಳುವುದು ಯಾವಾಗ; (ಯಾವಾಗ ಮುಗಿಯಲಿದೆ)

(ಆ) ಮೆಟ್ರೋ ರೈಲು ಸಂಪರ್ಕ ಎಲ್ಲಿಂದ ಎಲ್ಲಿಯವರೆಗೆ ಮಾಡಲಾಗಿದೆ;

(ಇ) ಬೆಂಗಳೂರು ಮೆಟ್ರೋ ರೈಲು ನಿಗಮದಲ್ಲಿ ಹಾಲಿ ಎಷ್ಟು ಜನ ನೌಕರರು ಯಾವ ಯಾವ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ? (ಹುದ್ದೆವಾರು ವಿವರ ನೀಡುವುದು)

## ಸವದತ್ತಿ ಎಲ್ಲಮ್ಮ ದೇವಸ್ಥಾನ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೯೭೦ (೩೬೪೮) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ ಸವದತ್ತಿ ಎಲ್ಲಮ್ಮ ದೇವಸ್ಥಾನಕ್ಕೆ ಭೇಟಿ ನೀಡುವ ಭಕ್ತರಿಗೆ ವಾಸ್ತವ್ಯ ಮಾಡಲು ಸುಸಜ್ಜಿತವಾದ ಕಟ್ಟಡ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಭಕ್ತಾಧಿಗಳು ವಾಸಿಸಲು ಯಾತ್ರಿ ನಿವಾಸ ಮತ್ತು ವಸತಿ ಗೃಹ, ಕಾಂಕ್ರಿಟ್ ರಸ್ತೆ, ಪಾರ್ಕಿಂಗ್ ವ್ಯವಸ್ಥೆ, ಬೆಳಕಿನ ವ್ಯವಸ್ಥೆ, ದಾಸೋಹ ವ್ಯವಸ್ಥೆ, ಸ್ನಾನಗೃಹ ಸುಲಭ ಶೌಚಾಲಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು;

(ಈ) ಬಂದಂತಹ ಆದಾಯುವನ್ನು ಯಾವ ರೀತಿ ಉಪಯೋಗಿಸಲಾಗುವುದು;

(ಉ) ಆ ಕ್ಷೇತ್ರದ ಅಭಿವೃದ್ಧಿ ಮಾಡಲಾಗುವುದೇ?

## B.M.R.C.L. ನಲ್ಲಿ T.B.M. ಯಂತ್ರಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭೧ (೨೮೦೬) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲ್ವೆ ನಿಗಮ (B.M.R.C.L.) ವು ಟಿ.ಬಿ.ಎಂ. ಯಂತ್ರಗಳನ್ನು ಖರೀದಿಸಿದೆಯೇ/ಗುತ್ತಿಗೆ ಪಡೆದಿದೆಯೇ/ಬಾಡಿಗೆ ಪಡೆದಿದೆಯೇ; (ವಿವರವಾದ ಮಾಹಿತಿ ಕೊಡುವುದು)

(ಆ) ಖರೀದಿಸಿದ್ದರೆ ಅದರ ಮೊತ್ತವೆಷ್ಟು; ಗುತ್ತಿಗೆ ಪಡೆದಿದ್ದರೆ ಅದರ ಮೊತ್ತವೆಷ್ಟು; ಬಾಡಿಗೆಗೆ ಪಡೆದಿದ್ದರೆ ಬಾಡಿಗೆಯ ಮೊತ್ತವೆಷ್ಟು; (ವಿವರವಾದ ಮಾಹಿತಿ ಕೊಡುವುದು)

(ಇ) ಟಿ.ಬಿ.ಎಂ. ಯಂತ್ರವು ಕೆಟ್ಟು ನಿಂತಿದ್ದರಿಂದ ನಿಗಮಕ್ಕಾದ ನಷ್ಟವೆಷ್ಟು; ಇದಕ್ಕೆ ಜವಾಬ್ದಾರರು ಯಾರು ಮತ್ತು ಟಿ.ಬಿ.ಎಂ. ಯಂತ್ರ ಕೆಡಲು ತಾಂತ್ರಿಕ ಕಾರಣಗಳೇನು;

(ಈ) ಸುರಂಗ ಕೊರೆಯುವ ಮಾರ್ಗದ ಮೇಲ್ಭಾಗದ ಮನೆಗಳ ಗೋಡೆಗಳು ಬಿರುಕು ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದರೆ, ಸರ್ಕಾರವು ಇದರ ಬಗ್ಗೆ ಯಾವ ಕ್ರಮ ಕೈಗೊಂಡಿದೆ? (ವಿವರವಾದ ಮಾಹಿತಿ ನೀಡುವುದು)

## ಅಗ್ನಿ ಶಾಮಕ ದಳದ ಸಿಬ್ಬಂದಿಗಳಿಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೮೨ (೩೬೧೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಅಗ್ನಿಶಾಮಕ ಠಾಣೆಗಳ ಸಂಖ್ಯೆ ಎಷ್ಟು; ತುರುವೇಕೆರೆ ತಾಲ್ಲೂಕಿನಲ್ಲಿ ಅಗ್ನಿ ಶಾಮಕಠಾಣೆ ತೆರೆಯುವಲ್ಲಿ ವಿಳಂಬಕ್ಕೆ ಕಾರಣವೇನು; ಯಾವಾಗ ತೆರೆಯಲಾಗುವುದು;

(ಆ) ಹಾಲಿ ಅಗ್ನಿಶಾಮಕ ಠಾಣೆಗಳಲ್ಲಿ ಖಾಲಿ ಇರುವ ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿಗಳ ಸಂಖ್ಯೆ ಎಷ್ಟು;

(ಇ) ಖಾಲಿ ಹುದ್ದೆಗಳಿಗೆ ಪ್ರಮುಖ ಅಗ್ನಿಶಾಮಕ ಸಿಬ್ಬಂದಿಗಳಿಂದ ಬಡ್ತಿ ನೀಡದಿರಲು ಕಾರಣಗಳೇನು;

(ಈ) ಖಾಲಿ ಹುದ್ದೆಗಳಿಗೆ ಯಾವಾಗ ಬಡ್ತಿ ನೀಡಲಾಗುವುದು;

(ಉ) ಅಗ್ನಿಶಾಮಕ ಸೇವೆಯ ಸಾರಿಗೆ ವಿಭಾಗದಲ್ಲಿ ಮಂಜೂರಾದ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು;

(ಊ) ಈ ಹುದ್ದೆಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಹತೆ ವೇತನ ಶ್ರೇಣಿಗಳು ಯಾವುವು? (ವಿವರವಾದ ಮಾಹಿತಿ ನೀಡುವುದು)

## ಕಾಲೇಜುಗಳಲ್ಲಿ ಖಾಲಿ ಇರುವ ಸಿ ಮತ್ತು ಡಿ ದರ್ಜೆಯ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೨೯೭೩ (೩೬೧೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಡಿಯಲ್ಲಿ ಬರುವ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳಲ್ಲಿ ಖಾಲಿ ಇರುವ ಸಿ ಮತ್ತು ಡಿ ದರ್ಜೆ ಸಿಬ್ಬಂದಿಗಳ ಹುದ್ದೆಗಳೆಷ್ಟು ;

(ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ವಿ.ವಿ. ಯಲ್ಲಿ ಉಪನ್ಯಾಸಕರ ಕೊರತೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೨೯೭೪ (೩೬೧೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಪೊಲೀಸ್ ವಸತಿ ಗೃಹ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭೫ (೩೬೧೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಮತ್ತು ಗದಗ, ವಿಜಯಪುರ ಜಿಲ್ಲೆಯಲ್ಲಿರುವ ಪೊಲೀಸ್ ವಸತಿ ಗೃಹಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಾಗಲಕೋಟೆ ಮತ್ತು ಗದಗ, ವಿಜಯಪುರ ಜಿಲ್ಲೆಯಲ್ಲಿ ಹೊಸದಾಗಿ ಪೊಲೀಸ್ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಸರ್ಕಾರವು ಮೇಲ್ಕಂಡ ಜಿಲ್ಲೆಗಳಿಗೆ ಕಳೆದ ೨ ವರ್ಷಗಳಿಂದ ನೀಡಿರುವ ಅನುದಾನ ಎಷ್ಟು ?

## ಮದ್ಯದ ಅಂಗಡಿಗಳಿಂದ ಬಾಕಿ ಇರುವ ಮೊತ್ತ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭೬ (೩೬೧೨) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಮತ್ತು ಗದಗ, ವಿಜಯಪುರ ಜಿಲ್ಲೆಗಳಲ್ಲಿರುವ ಅಬಕಾರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ೩ ವರ್ಷಗಳಿಂದ ಬಾಗಲಕೋಟೆ ವಿಜಯಪುರ ಜಿಲ್ಲೆಗಳಿಂದ ಮದ್ಯದ ಅಂಗಡಿಗಳಿಂದ ದಂಡ ರೂಪದಲ್ಲಿ ಸಂಗ್ರಹಿಸಲಾಗಿರುವ ಮೊತ್ತ ಎಷ್ಟು ;

(ಇ) ಬಾಗಲಕೋಟೆ ಜಿಲ್ಲೆಯಲ್ಲಿ ದಂಡದ ಮೊತ್ತವನ್ನು ಪಾವತಿಸದೆ ಬಾಕಿ ಉಳಿಸಿಕೊಂಡಿರುವ ಮದ್ಯದ ಅಂಗಡಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು, ವರ್ಷಾವಾರು ಮಾಹಿತಿ ನೀಡುವುದು)

## ದಕ್ಷ ಪೊಲೀಸ್ ಅಧಿಕಾರಿಗಳಿಗೆ ರಕ್ಷಣೆ ಒದಗಿಸುವ ಕುರಿತು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೨೯೭೭ (೩೫೮೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಪರಾಧಿಗಳ ಜಾಡು ಹಿಡಿದು ಹೊರಟ ದಕ್ಷ ಪೊಲೀಸ್ ಅಧಿಕಾರಿಗಳು ಸಮಾಜ ಕಂಟಕರಿಂದ ಹತರಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಹಾಗಿದ್ದಲ್ಲಿ, ಕರ್ತವ್ಯ ನಿರತ ಅಧಿಕಾರಿ/ಸಿಬ್ಬಂದಿಗಳಿಗೆ ಸೂಕ್ತ ರಕ್ಷಣೆ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇವರ ಕುಟುಂಬಗಳಿಗೆ ಸರ್ಕಾರ ನೀಡಿದ ಭದ್ರತೆ ಹಾಗೂ ಪರಿಹಾರಗಳೇನು ? (ಪ್ರಕರಣವಾರು ವಿವರ ನೀಡುವುದು)

## ಬೆಂಗಳೂರಿನಲ್ಲಿ ದ್ವಿಚಕ್ರ ಸವಾರರ ನಿಯಮ ಉಲ್ಲಂಘನೆ ಕುರಿತು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೨೯೭೮ (೩೫೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದಲ್ಲಿ ದ್ವಿಚಕ್ರ ವಾಹನ ಸವಾರರು ಹಾಗೂ ಆಟೋ ಚಾಲಕರು One Way ರಸ್ತೆಗಳಲ್ಲಿ ಅಡ್ಡಾದಿಡ್ಡಿ ನುಗ್ಗಿ ಟ್ರಾಫಿಕ್ ಜಾಮ್ ಮಾಡುವುದರಿಂದ ಅಪಘಾತಗಳಿಗೆ ಕಾರಣವಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಹಾಗಿದ್ದರೆ, ರಸ್ತೆ ನಿಯಮ ಉಲ್ಲಂಘಿಸುತ್ತಿರುವವರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಹಾಲಿ ಇರುವ ಕಾನೂನಿನ ವಿವರ ನೀಡುವುದು ?

## ಬೆಂಗಳೂರು ನಗರದಲ್ಲಿ ಗುಂಡಿ ಬಿದ್ದ ರಸ್ತೆಗಳು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೨೯೭೯ (೩೪೮೪) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದಲ್ಲಿ ಗುಂಡಿ ಬಿದ್ದ ರಸ್ತೆಗಳಿಂದ ಅನಾಹುತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಗುಂಡಿ ಮುಕ್ತ ರಸ್ತೆಗಳ ಬೆಂಗಳೂರು ನಗರ ಮಾಡುತ್ತೇವೆ ಎನ್ನುವ ಸರ್ಕಾರದ ಘೋಷಣೆ ಎಂದು ಸಾಕಾರಗೊಳ್ಳುತ್ತದೆ ?

## ಬೆಂಗಳೂರಿನಲ್ಲಿ ಟ್ರಾಫಿಕ್ ಜಾಮ್ ಕುರಿತು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೨೯೮೦ (೩೪೮೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದಲ್ಲಿ ಮಿತಿಮೀರಿದ ವಾಹನ ದಟ್ಟಣೆಯಿಂದಾಗಿ ದಿನನಿತ್ಯವೂ ಸಾರ್ವಜನಿಕರಿಗೆ ಸಮಸ್ಯೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಹಾಗಿದ್ದರೆ, ಟ್ರಾಫಿಕ್ ಜಾಮ್ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ರೂಪಿಸಿರುವ ನೀತಿ ನಿಯಮಗಳೇನು ; ಯಾವ ಕಾಲಮಿತಿಯೊಳಗೆ ಟ್ರಾಫಿಕ್ ಸಮಸ್ಯೆಯನ್ನು ಸರಿಪಡಿಸಲಾಗುವುದು ?

## ಕರ್ನಾಟಕ ಲೋಕಾಯುಕ್ತ ದಾಳಿ ಕುರಿತು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೨೯೮೧ (೩೫೮೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕಾಯುಕ್ತ ಸಂಸ್ಥೆ ಈವರೆಗೆ ಎಷ್ಟು ಮಂದಿ ಸರ್ಕಾರಿ ಅಧಿಕಾರಿಗಳನ್ನು ತಪ್ಪಿತಸ್ಥರೆಂದು ತೀರ್ಪು ನೀಡಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಿದೆ ಎಷ್ಟು ಮಂದಿಯ ಮೇಲೆ ಕ್ರಮ ಜರುಗಿಸಲಾಗಿದೆ ; (ವಿವರ ನೀಡುವುದು)

(ಆ) ಸದರಿ ಸಂಸ್ಥೆಯು ಈವರೆಗೆ ದಾಳಿ ನಡೆಸಿ ವಶಪಡಿಸಿಕೊಂಡ ಸಂಪತ್ತಿನ ಮೊತ್ತವೆಷ್ಟು ; ಸರ್ಕಾರದ ಬೊಕ್ಕಸಕ್ಕೆ ಸೇರಿದ ಮೊತ್ತ ಎಷ್ಟು ; ಇದರ ವಿಲೇವಾರಿ ಹೇಗೆ ? (ವಿವರ ನೀಡುವುದು)

## ಬಹುಕೋಟಿ ಮೊತ್ತದ ಒಂದಂಕಿ ಲಾಟರಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೮೨ (೩೩೦೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಹುಕೋಟಿ ಮೊತ್ತದ ಒಂದಂಕಿ ಲಾಟರಿ ಹಗರಣ ತನಿಖೆಗೆ ಸರ್ಕಾರ ನಿಧಾನಗತಿ ಅನುಸರಿಸುತ್ತಿದ್ದು, ಪ್ರಕರಣದ ತನಿಖೆ ಚುರುಕುಗೊಳಿಸದಿರಲು ಕಾರಣಗಳೇನು ;

(ಆ) ಈ ಪ್ರಕರಣದಲ್ಲಿ ಇದುವರೆಗೂ ಬಂದಿಸಿರುವ ವ್ಯಕ್ತಿಗಳು ಎಷ್ಟು; ಈ ರೀತಿಯ ದಂಧೆಯಲ್ಲಿ ತೊಡಗಿದ್ದಾರೆಂದು ಸರ್ಕಾರಕ್ಕೆ ತಿಳಿದು ಬಂದಿದ್ದು ಯಾವಾಗಿನಿಂದ ;

(ಇ) ಸರ್ಕಾರ ಕಣ್ಗೊರೆಸುವ ತಂತ್ರಗಾರಿಕೆಯಿಂದ ಪೊಲೀಸ್ ಅಧಿಕಾರಿಯನ್ನು ಅಮಾನತ್ತು ಮಾಡಿ ಸಾಕ್ಷಿ ನಾಶ ಮಾಡುವ ಹುನ್ನಾರ ನಡೆದಿದೆ ಎಂಬ ಬಗ್ಗೆ ಅನುಮಾನಗಳಿಗೆ ಪುಷ್ಠಿ ನೀಡಿರುವುದು ನಿಜವೇ ;

(ಈ) ಈ ಹಗರಣ ಹಿಂದಿರುವವರು ಯಾರೆಂದು ಪತ್ತೆ ಮಾಡಲಾಗಿದೆಯೇ ; ಇದು ಅಧಿಕಾರಿಗಳ ಮೇಲೆ ತೂಗುಗತ್ತಿಯಾಗುವ ಸಂಭವವಿರುವ ಕಾರಣ ತನಿಖೆಯ ದಿಕ್ಕನ್ನು ತಪ್ಪಿಸಲು ಸರ್ಕಾರ ಮುಂದಾಗಿದೆಯೇ ;

(ಉ) ಇದುವರೆಗಿನ ಪ್ರಕರಣದ ವಿವರಗಳನ್ನು ತನಿಖೆಯ ಪ್ರಗತಿ ವಿವರಗಳನ್ನು ಒದಗಿಸುವುದು ?

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪದವಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೮೩ (೩೩೦೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪದವಿಗಳ ಬಗ್ಗೆ ಯುಜಿಸಿ ನಿಯಮ ಮಾನದಂಡ ಉಲ್ಲಂಘನೆ ಪ್ರಕರಣದಿಂದ ಶಿಕ್ಷಣ ಪಡೆದ ಅಭ್ಯರ್ಥಿಗಳು ಅತಂತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಇತ್ತೀಚಿನ ಕೆಪಿಎಸ್‌ಸಿಯ ಕೆಎಎಸ್ ಪರೀಕ್ಷೆಗಳಿಗೂ ತೊಂದರೆಯಾಗಿದ್ದು ನಿಜವೇ ; ವಿವರ ನೀಡುವುದು ;

(ಇ) ವಿಶ್ವವಿದ್ಯಾಲಯದ ಮಾನ್ಯತೆ ಬಗ್ಗೆ ಇರುವ ಗೊಂದಲ ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಅದೇ ರೀತಿ ಈ ವಿ.ವಿ. ಯಲ್ಲಿ ನಡೆದ ಅಕ್ರಮ–ಅವ್ಯವಹಾರ ಹಾಗೂ ಅಂಕಪಟ್ಟಿ ಹಗರಣದ ಕುರಿತ ತನಿಖೆ ಯಾವ ಹಂತದಲ್ಲಿದೆ ; ತನಿಖಾ ವರದಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದರೆ ಅದರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಎಸ್‌ಓಯು ನಲ್ಲಿ ಈಗಾಗಲೇ ಹಲವು ನೌಕರ–ಸಿಬ್ಬಂದಿಗಳು ಮುಂಬಡ್ತಿ, ಪದೋನ್ನತಿಯಿಲ್ಲದೇ ಇರುವ ವಿಚಾರದ ಬಗ್ಗೆ ಸರ್ಕಾರದ ಕ್ರಮಗಳೇನು ; ಖಾಲಿ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು ಯಾವಾಗ ; ವಿಳಂಬಕ್ಕೆ ಕಾರಣಗಳೇನು ?

## ರಾಜ್ಯದಲ್ಲಿ ವ್ಯಾಪಕವಾಗಿ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೮೪ (೩೩೦೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಇತ್ತೀಚೆಗೆ ರಾಜ್ಯದಲ್ಲಿ ವ್ಯಾಪಕವಾಗಿ ಅತ್ಯಾಚಾರ ಹಾಗೂ ಲೈಂಗಿಕ ದೌರ್ಜನ್ಯ ಪ್ರಕರಣಗಳು ನಡೆಯುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಪ್ರಕರಣಗಳ ಸಂಖ್ಯಾ ವಿವರಗಳನ್ನು ಜಿಲ್ಲಾವಾರು ಒದಗಿಸುವುದು)

(ಆ) ಬಂದಿದ್ದಲ್ಲಿ, ಈ ಪೈಕಿ ಎಷ್ಟು ಪ್ರಕರಣಗಳಲ್ಲಿ ಅಪರಾಧಿಗಳು ಪತ್ತೆಯಾಗಿದ್ದಾರೆ ; ಅಪರಾಧಿಗಳು ಪತ್ತೆಯಾಗದಿರುವ ಪ್ರಕರಣಗಳೆಷ್ಟು ;

(ಇ) ಇಂತಹ ಪ್ರಕರಣಗಳ ತ್ವರಿತ ವಿಚಾರಣೆಗೆ ಸರ್ಕಾರ ವಿಶೇಷ ನಿಗಾವಹಿಸಲು ಮುಂದಾಗುವುದೇ ; ಇದಕ್ಕಾಗಿ ಪ್ರತ್ಯೇಕ ಕೋರ್ಟ್ ಸ್ಥಾಪಿಸುವ ಇರಾದೆ ಸರ್ಕಾರದ ಮುಂದಿದೆಯೇ ; ವಿವರಗಳನ್ನು ಒದಗಿಸುವುದು ;

(ಈ) ಈ ನಿಟ್ಟಿನಲ್ಲಿ ಸ್ವಯಂಪ್ರೇರಿತ ದೂರು ದಾಖಲಿಸಿಕೊಳ್ಳಲು ಇರುವ ತೊಂದರೆಗಳೇನು ; ಅತ್ಯಾಚಾರ ಪ್ರಕರಣಗಳಲ್ಲಿ ಇದುವರೆಗೂ ಶಿಕ್ಷೆಯಾಗಿರುವ ಪ್ರಕರಣಗಳೆಷ್ಟು ;

(ಉ) ಅಪರಾಧಿಗಳಿಗೆ ಜಾಮೀನು ಸಿಗದಿರುವಂತೆ ಮಾಡಲು ಕಾನೂನಿನಲ್ಲಿರುವ ತೊಡಕುಗಳೇನು ? (ವಿವರ ಒದಗಿಸುವುದು)

## ರಾಜ್ಯ ಸರ್ಕಾರಿ ನೌಕರರ ವೇತನ ತಾರತಮ್ಯ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೮೫ (೩೩೭೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರ ವೇತನ ತಾರತಮ್ಯ ನಿವಾರಣೆಗೆ ವೇತನ ಆಯೋಗ ರಚನೆ ಮಾಡಲು ಸರ್ಕಾರ ಮುಂದಾಗುವುದೇ ; ಹಾಗಿದ್ದಲ್ಲಿ, ಯಾವಾಗ ಆಯೋಗ ರಚನೆ ಮಾಡಲಾಗುವುದು, ಇಲ್ಲದಿದ್ದಲ್ಲಿ ಕಾರಣಗಳೇನು ;

(ಆ) ವೇತನ ಆಯೋಗ ರಚಿಸಲು ಅನುಸರಿಸುವ ಮಾನದಂಡಗಳೇನು ; ಎಷ್ಟು ವರ್ಷಗಳಿಗೊಮ್ಮೆ ಈ ವೇತನ ಆಯೋಗ ರಚಿಸಲಾಗುತ್ತದೆ ; 5 ವರ್ಷಕ್ಕೊಮ್ಮೆಯಾದರೂ ಕೇಂದ್ರದ ನೀತಿಯಂತೆ ರಾಜ್ಯವು ಕೂಡಲೇ ಸ್ಪಂದಿಸದಿರಲು ಕಾರಣವೇನು ;

(ಇ) ಬೇರೆ ಬೇರೆ ರಾಜ್ಯಗಳಲ್ಲಿ ಈ ನಿಯಮ ಯಾವ ರೀತಿ ಇದೆ ; ವೇತನ ಆಯೋಗ ರಚನೆ ಮಾಡಿದ ನಂತರ ಅದು ಅನುಷ್ಠಾನಕ್ಕೆ ಬರುವುದು ಯಾವಾಗ ; ಇದರಿಂದ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಉಂಟಾಗುವ ಆರ್ಥಿಕ ಹೊರೆ ಎಷ್ಟು ;

(ಈ) ಈ ನಿಟ್ಟಿನಲ್ಲಿ ರಾಜ್ಯದಲ್ಲಿರುವ ರಾಜ್ಯ ಸರ್ಕಾರಿ ನೌಕರರ ಸಂಖ್ಯೆ ಮಂಜೂರಾದ ಹಾಗೂ ಹಾಲಿ ಕರ್ತವ್ಯದಲ್ಲಿ ಇರುವ ಸಂಖ್ಯೆ, ಖಾಲಿ ಇರುವ ಹುದ್ದೆಗಳ ಮಾಹಿತಿಯನ್ನು ಇಲಾಖಾವಾರು ನೀಡುವುದು ;

(ಉ) ಇದು ರಾಜ್ಯದ ಜನಸಂಖ್ಯೆಗನುಗುಣವಾಗಿ ನೌಕರರ ಸಂಖ್ಯೆ ಇರುವುದೆಂದು ಸರ್ಕಾರ ಭಾವಿಸುವುದೇ ; ಇಲ್ಲದಿದ್ದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಮೀನಮೇಷ ಏಕೆ ; ಮಂಜೂರಾದ ಹುದ್ದೆಗೂ ಹಾಲಿ ಇರುವ ಹುದ್ದೆಗೂ ವ್ಯತ್ಯಾಸ ಇರುವುದರಿಂದ ನೌಕರರಿಗೆ ಕೆಲಸದ ಒತ್ತಡ ಜಾಸ್ತಿಯಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೇ ; ವಿವರ ನೀಡುವುದು ;

(ಊ) ಇಡೀ ಭಾರತದಲ್ಲಿ ಕರ್ನಾಟಕ ಸರ್ಕಾರಿ ನೌಕರರು ಕಡಿಮೆ ವೇತನ ಪಡೆಯುತ್ತಿರುವುದು ನಿಜವೇ ?

# ಮೈಸೂರು ನಗರದ ರಸ್ತೆ ವಿಭಜಕಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೨೯೮೬ (೩೩೧೭) ಮಾನ್ಯ ಗೃಹ  ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ಪ್ರಮುಖ ರಸ್ತೆಗಳಲ್ಲಿ ರಸ್ತೆ ವಿಭಜಕಕ್ಕೆ ಬ್ಯಾರಿಕೇಡ್ ಅಳವಡಿಸಿದ್ದು, ಇದರಿಂದ ಸುಗಮ ಸಂಚಾರಕ್ಕೆ ತೊಂದರೆ ಆಗಿರುವುದು ನಿಜವೇ ; ಹಾಗಿದ್ದಲ್ಲಿ ಈ ಬ್ಯಾರಿಕೇಡ್‌ಗಳನ್ನು ತೆಗೆದು ಹಾಕಿರುವುದು ಕಂಡು ಬಂದಿದೆಯೇ ;

(ಆ) ಈ ಬ್ಯಾರಿಕೇಡ್‌ಗಳ ಬದಲು ಆಧುನಿಕ ವೈಜ್ಞಾನಿಕ ಮಾದರಿಯಲ್ಲಿ ಸಿಮೆಂಟ್‌ನಿಂದ ರಸ್ತೆ ವಿಭಜಕಗಳನ್ನು ನಿರ್ಮಿಸಲು ಕ್ರಮ ಜರುಗಿಸಲಾಗುವುದೇ ; ವಿವರ ನೀಡುವುದು ;

(ಇ) ಅದೇ ರೀತಿಯಾಗಿ ಮೈಸೂರು ನಗರಕ್ಕೆ ದಿನೇ ದಿನೇ ದೇಶ ವಿದೇಶಗಳಿಂದ ಬರುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತಿದ್ದು, ವಾಹನಗಳ ದಟ್ಟಣೆಯು ಅಧಿಕವಾಗುತ್ತಿರುವುದರಿಂದ ಟ್ರಾಫಿಕ್ ಜಾಮ್ ಆಗುತ್ತಿದ್ದು, ಟ್ರಾಫಿಕ್ ವ್ಯವಸ್ಥಿತಗೊಳಿಸುವ ಸಲುವಾಗಿ ಟ್ರಾಫಿಕ್ ಪೊಲೀಸ್‌ನವರ ಸಂಖ್ಯೆಯನ್ನು ಹೆಚ್ಚಿಸಲು ಕ್ರಮ ವಹಿಸಲಾಗುವುದೇ ;

(ಈ) ಹಾಗೂ ಪ್ರಮುಖ ಸ್ಥಳಗಳಲ್ಲಿ ವ್ಯವಸ್ಥಿತ ವಾಹನ ನಿಲುಗಡೆಗೆ ಅವಕಾಶ ಮಾಡಿಕೊಡಲು ತೆಗೆದುಕೊಂಡಿರುವ ಕ್ರಮವೇನು ; ವಿವರ ನೀಡುವುದು ?

# ಚಾಮರಾಜನಗರದ ಚಾಮರಾಜೇಶ್ವರ ದೇವಾಲಯದ ಜೀರ್ಣೋದ್ಧಾರದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೨೯೮೭ (೩೩೧೮) ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದಲ್ಲಿ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ನಿರ್ಮಿತವಾದ ಚಾಮರಾಜೇಶ್ವರ ದೇವಾಲಯವನ್ನು ಪೂರ್ಣ ಪ್ರಮಾಣದಲ್ಲಿ ಜೀರ್ಣೋದ್ಧಾರ ಮಾಡಲು ಕೂಡಲೇ ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಜೀರ್ಣೋದ್ಧಾರ ಕಾರ್ಯಕ್ಕೆ ಎರಡು ಕೋಟಿ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಮನವಿ ಸಲ್ಲಿಸಿದ್ದರೂ ಕೂಡ ಕಳೆದ ಎರಡು ವರ್ಷಗಳಿಂದ ಇದರ ಬಗ್ಗೆ ಕ್ರಮ ಜರುಗಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ವಿವರ ನೀಡುವುದು ;

(ಇ) ಈ ದೇವಾಲಯಕ್ಕೆ ಸೇರಿದ ೨೫ ಅಂಗಡಿಗಳನ್ನು ಕಡಿಮೆ ಬಾಡಿಗೆಗೆ ನೀಡಿದ್ದು, ಈ ಮಳಿಗೆಗಳನ್ನು ಆಧುನೀಕರಣಗೊಳಿಸಿ ಹೆಚ್ಚು ಬಾಡಿಗೆ ವಿಧಿಸಿ, ಇದರಿಂದ ಬರುವ ಆದಾಯವನ್ನು ದೇವಾಲಯದ ಅಭಿವೃದ್ಧಿಗೆ ಬಳಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಚಾಮರಾಜನಗರ ಇಂಜಿನಿಯರಿಂಗ್ ಕಾಲೇಜಿನ ಖಾಲಿ ಹುದ್ದೆ ಭರ್ತಿ ಮಾಡುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೨೯೮೮ (೩೩೧೯) ಮಾನ್ಯ ಕಾನೂನು, ಸಂಸದೀಯ ಮತ್ತು ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್‌ನಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರವನ್ನು ಒದಗಿಸುವುದು) ಈ ಸರ್ಕಾರಿ ಕಾಲೇಜಿನಲ್ಲಿ ಇಂಜಿನಿಯರಿಂಗ್ ಸ್ನಾತಕೋತರ ಕೇಂದ್ರ ಪ್ರಾರಂಭಿಸಲು ಉದ್ದೇಶಿಸಲಾಗಿದೆಯೇ ; ವಿವರ ನೀಡುವುದು ;

(ಆ) ಇಂಜಿನಿಯರಿಂಗ್ ಕಾಲೇಜು ಪ್ರಾರಂಭವಾಗಿ ೫–೬ ವರ್ಷಗಳಾದರೂ ಬೋಧಕ ಸಿಬ್ಬಂದಿಯನ್ನು ಸರಿಯಾಗಿ ಒದಗಿಸದೇ ವಿದ್ಯಾರ್ಥಿಗಳ ವಿದ್ಯಾರ್ಜನೆಗೆ ತೊಂದರೆಯಾಗಿರುವುದು ನಿಜವೇ ; ಈ ಕಾಲೇಜಿನಲ್ಲಿ ಬೋಧನೆ ಗುಣಮಟ್ಟ ಕಡಿಮೆ ಎಂದು ಯಾವುದೇ ಕಂಪನಿಗಳು ಕ್ಯಾಂಪಸ್ ಸಂದರ್ಶನಕ್ಕೆ ಬಾರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ವಿವರ ನೀಡುವುದು ;

(ಇ) ಕೂಡಲೇ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸೂಕ್ತ ಕ್ರಮ ವಹಿಸಲಾಗುವುದೇ ?

# ಖಜಾನೆ 2 ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸುವ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೯೮೯ (೩೨೯೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಜಾನೆ ೨ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಲಾಗಿದೆಯೇ ;

(ಆ) ಈ ಯೋಜನೆಯ ರೂಪರೇಷೆಗಳೇನು ;

(ಇ) ಸದ್ಯ ಈ ಯೋಜನೆಯನ್ನು ಪ್ರಾಯೋಗಿಕವಾಗಿ ಯಾವ ಯಾವ ಇಲಾಖೆಗೆ ವಿಸ್ತರಿಸಲಾಗಿದೆ ;

(ಈ) ಇನ್ನುಳಿದಂತೆ ಬೇರೆ ಎಲ್ಲಾ ಇಲಾಖೆಗಳಿಗೆ ಈ ಯೋಜನೆಯನ್ನು ಯಾವ ದಿನಾಂಕದಿಂದ ವಿಸ್ತರಿಸಲಾಗುವುದು ;

(ಉ) ಇದಕ್ಕಾಗಿ ಅಧಿಕೃತ ಆದೇಶವನ್ನು ಖಜಾನೆ ಇಲಾಖೆಗೆ ಯಾವಾಗ ನೀಡಲಾಗುವುದು ?

**ಎ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0 214/800 ಪ್ರತಿಗಳು/24–11–2015